ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ   Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 119 ಸಂಚಿಕೆ- 119 | PAGE-8 ಪುಟ-8 | ಬುಧುವಾರ 18.06.2025 | RS.2/- ಬೆಲೆ 2/-

# ರಾಜೀನಾಮೆ ಕೇಳುವ ನೈತಿಕತೆ ಬಿಜೆಪಿಗಿಲ್ಲ:ಸಿಎಂ

ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು,ಜೂ.17: ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ನಡೆದ ಕಾಲ್ತುಳಿತ ಘಟನೆಗೆ ಸಂಬಂಧಿಸಿದಂತೆ ತಮ್ಮ ರಾಜೀನಾಮೆ ಕೇಳುವ ನೈತಿಕತೆ ಬಿಜೆಪಿ ನಾಯಕರಿಗಿಲ್ಲ ಎಂದು ಮುಖ್ಯಮಂತ್ರಿ ಸಿದ್ಧರಾಮಯ್ಯ ಹೇಳಿದರು.

ಬೆಂಗಳೂರಿನ ಅರಮನೆ ಮೈದಾನದಲ್ಲಿಂದು ನಡೆದ ಪರಿಸರ ದಿನಾಚರಣೆ ಕಾರ್ಯಕ್ರಮದ ಸಂದರ್ಭದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕುಂಭಮೇಳದಲ್ಲಿ ಕಾಲ್ತುಳಿತ ಆಗಿತ್ತು. ಮೊನ್ನೆ ಅಹಮದಾಬಾದ್‌ನಲ್ಲಿ ವಿಮಾನ ದುರಂತ ಆಗಿದೆ. ಮಹಾರಾಷ್ಟ್ರದಲ್ಲಿ ಸೇತುವೆ ಕುಸಿದು ನಾಲ್ವರು ಮೃತಪಟ್ಟರು. ಬಿಹಾರದಲ್ಲಿ ಸೇತುವೆ ಉದ್ಘಾಟನೆ ಮೊದಲೇ ಕುಸಿದು 140 ಮಂದಿ ಮೃತಪಟ್ಟರು. ಗೋದ್ರಾದಲ್ಲಿ ನಡೆದ ದುರುಂತಕ್ಕೆ ಯಾರು ರಾಜೀನಾಮೆ ಕೊಟ್ಟರು. ರೈಲ್ವೆ ದುರಂತದಲ್ಲಿ ಮೃತಪಟ್ಟರಲ್ಲಾ ಅದಕ್ಕೆಲ್ಲಾ ಯಾರು ಜವಾಬ್ದಾರಿ ಇವರೆಲ್ಲಾ ರಾಜೀನಾಮೆ ಕೊಟ್ಟರಾ ಎಂದು ಹರಿಹಾಯ್ದರು.

ಬಿಜೆಪಿಯವರು ಕಾಲ್ತುಳಿತ ಘಟನೆಯನ್ನು ರಾಜಕಾರಣ ಮಾಡುತ್ತಿದ್ದಾರೆ. ಇವರಿಗೆ ನೈತಿಕತೆ ಇಲ್ಲ ಎಂದು ವಾಗ್ದಾಳಿ ನಡೆಸಿ, ಕುಂಭಮೇಳದ ಕಾಲ್ತುಳಿತದಲ್ಲಿ ಉತ್ತರ ಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿನಾಥ್ ರಾಜೀನಾಮೆ ಕೊಟ್ಟರಾ. ಇವರ ರಾಜೀನಾಮೆ ಕೇಳಿದ್ದರಾ ಎಂದು ಹರಿಹಾಯ್ದರು.


ಬಿಜೆಪಿಯವರು ರಾಜಕೀಯ ಕಾರಣಕ್ಕಾಗಿ ಈ ಪ್ರತಿಭಟನೆ ನಡೆಸುತ್ತಿದ್ದಾರೆ ಎಂದು ಟೀಕಿಸಿದರು ಪಟ್ಟಿ ಕೊಡಲಿ ದೇಶದಲ್ಲಿ ಈ ಮೊದಲು ನಡೆದಿರುವಂತಹ ಅವಘಡಗಳಿಗೆ ರಾಜೀನಾಮೆ ನೀಡಿರುವ ಬಿಜೆಪಿ ನಾಯಕರ ಪಟ್ಟಿಯನ್ನು ಬಿಡುಗಡೆ ಮಾಡುವಂತೆ ಮುಖ್ಯಮಂತ್ರಿ ಸಿದ್ಧರಾಮಯ್ಯ ಬಿಜೆಪಿ ನಾಯಕರಿಗೆ ಸವಾಲು ಹಾಕಿದ್ದಾರೆ. ಚಿನ್ನಸ್ವಾಮಿ ಕ್ರೀಡಾಂಗಣದ ಕಾಲ್ತುಳಿತ ಘಟನೆಗೆ ಸಂಬಂಧಿಸಿದಂತೆ ಬಿಜೆಪಿ



ನಡೆಸಿರುವ ಪ್ರತಿಭಟನೆಗೆ ಕಿಡಿಕಾರಿ ಪತ್ರಿಕಾ ಹೇಳಿಕೆ ನೀಡಿರುವ ಅವರು, ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ನಡೆದಿರುವುದು ಒಂದು ಅಪಘಾತ, ಜವಾಬ್ದಾರಿಯುತ ಸರ್ಕಾರವಾಗಿ ಆ ಘಟನೆಯನ್ನು ನಾವು ಹೊತ್ತಿದ್ದೇವೆ ಎಂದರು. ಬೆಂಗಳೂರು ನಗರ ಪೊಲೀಸ್ ಆಯುಕ್ತರು ಸೇರಿದಂತೆ ಹಿರಿಯ ಪೊಲೀಸ್ ಅಧಿಕಾರಿಗಳನ್ನು ಅಮಾನತು ಮಾಡಿ ರಾಜ್ಯ ಗುಪ್ತಚರ ಇಲಾಖೆಯ ಮುಖ್ಯಸ್ಥರನ್ನು ವರ್ಗಾವಣೆ ಮಾಡಿದ್ದೇವೆ. ನನ್ನ ರಾಜಕೀಯ ಕಾರ್ಯದರ್ಶಿಯನ್ನು ಸೇವೆಯಿಂದ ಬಿಡುಗಡೆಗೊಳಿಸಿದ್ದೇನೆ. ಈ ಪ್ರಕರಣದ ಸಮಗ್ರ ತನಿಖೆಗೆ ನಿವೃತ್ತ ನ್ಯಾ. ಜಾನ್ ಮೈಕಲ್ ಖುನ್ಹಾ ಅವರ ನೇತೃತ್ವದ ಏಕ ಸದಸ್ಯ ಆಯೋಗ ರಚಿಸಿದ್ದೇ ಎಂದು ಸಿದ್ಧರಾಮಯ್ಯ ಹೇಳಿದ್ದಾರೆ. ಇಷ್ಟೆಲ್ಲಾ ಕ್ರಮ ಕೈಗೊಂಡ ನಂತರವೂ ರಾಜ್ಯದ ಬಿಜೆಪಿ ನಾಯಕರು ಪ್ರತಿಭಟನೆ ನಡೆಸುತ್ತಿರುವುದು ರಾಜಕೀಯ ದುರುದ್ದೇಶದಿಂದ ಹೊರತು ಜನರ ಬಗ್ಗೆಗಿನ ಕಾಳಜಿಯಿಂದ ಅಲ್ಲ. ಸತ್ತ ಹೆಣಗಳ ಮೇಲಿನ ರಾಜಕೀಯ ಬಿಜೆಪಿ ಪಾಲಿಗೆ ಹೊಸದಲ್ಲ. ಅಪಘಾತ, ಹತ್ಯೆ, ದೌರ್ಜನ್ಯ ನಡೆದ ತಕ್ಷಣ ಸತ್ತ ಜೀವಗಳನ್ನು ಹುಡುಕಿಕೊಂಡು ಹೋಗುವ ರಣಹದ್ದುಗಳಂತೆ ಎರಗಿ ಬೀಳುವುದು ಬಿಜೆಪಿಯ ರಕ್ತದಲ್ಲೇ ಇದೆ. ತಮ್ಮ ಊಟದ ಎಲೆಯ ಮೇಲೆ ಆನೆ ಸತ್ತು ಬಿದ್ದಿದ್ದರೂ ಜತೆಗಿದ್ದವರ ಎಲೆ ಮೇಲೆ ಸತ್ತ ಬಿದ್ದ ನೊಣದ ಕಡೆ ಬೊಟ್ಟು ಮಾಡುವುದು ಬಿಜೆಪಿಯ ಹಳೆಯ ಛಾಳಿ ಎಂಬುದನ್ನು ರಾಜ್ಯದ ಜನತೆ ಅರ್ಥ ಮಾಡಿಕೊಂಡಿದ್ದಾರೆ ಎಂದು ಮುಖ್ಯಮಂತ್ರಿ ಸಿದ್ಧರಾಮಯ್ಯ ಹೇಳಿದ್ದಾರೆ. ಬಿಜೆಪಿ ನಾಯಕರು ಪ್ರತಿಭಟನೆಯಂತಹ ಬೀದಿ ಪ್ರಸಂಗವನ್ನು ಕೈಬಿಟ್ಟು ಆತ್ಮಸಾಕ್ಷಿಗೆ ತಕ್ಕಂತೆ ನಡೆದುಕೊಳ್ಳಲಿ ಎಂದು ಮುಖ್ಯಮಂತ್ರಿ ಸಿದ್ಧರಾಮಯ್ಯ ತಿಳಿಸಿದ್ದಾರೆ.

## ವಿಧಾನಸೌಧದ ಮೆಟ್ಟಿಲುಗಳ ಮೇಲೆ ಯೋಗ ದಿನ: "ಒಂದು ಭೂಮಿ ಒಂದು ಆರೋಗ್ಯಕ್ಕಾಗಿ ಯೋಗ"

ಬೆಂಗಳೂರು:ಜೂ.17: ರಾಜ್ಯ ಸರ್ಕಾರ "ಒಂದು ಭೂಮಿ ಒಂದು ಆರೋಗ್ಯಕ್ಕಾಗಿ ಯೋಗ" ಎಂಬ ಘೋಷ ವಾಕ್ಯದೊಂದಿಗೆ ಜೂನ್ 21 ಅಂತರಾಷ್ಟ್ರೀಯ ಯೋಗ ದಿನಾಚರಣೆಯನ್ನು ವಿಧಾನಸೌಧದ ಭವ್ಯ ಮೆಟ್ಟಿಲುಗಳ ಮೇಲೆ ಆಚರಿಸಲು ನಿರ್ಧರಿಸಿದೆ. ಅಂತರಾಷ್ಟ್ರೀಯ ಯೋಗ ದಿನಾಚರಣೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ರಾಜ್ಯಪಾಲ ಥಾವರಚಂದ್ ಗೆಹ್ಲೋಟ್, ಸಚಿವರು ಹಾಗೂ ಇತರ ಹಲವು ಗಣ್ಯರು ಭಾಗಿಯಾಗುತ್ತಾರೆ. ಯೋಗ ದಿನಾಚರಣೆಯಲ್ಲಿ ಸುಮಾರು ಐದು ಸಾವಿರ ಜನ ಭಾಗಿಯಾಗುವ ನಿರೀಕ್ಷೆ ಇದೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಅವರು ತಿಳಿಸಿದ್ದಾರೆ. ಇಂದು ಸುದ್ದಿಗೋಷ್ಠಿ



ಉದ್ದೇಶಿಸಿ ಮಾತನಾಡಿದ ದಿನೇಶ್ ಗುಂಡೂರಾವ್ ಅವರು, ಈ ವರ್ಷ ಐದು ಲಕ್ಷ ಜನರಿಗೆ ಯೋಗ ಹೇಳಿಕೊಡಲಾಗುತ್ತದೆ. ರಾಜ್ಯದಲ್ಲಿ 10 ಸಾವಿರ ಯೋಗ ಕಾರ್ಯಕ್ರಮ ನಡೆಸಲು ತೀರ್ಮಾನಿಸಲಾಗಿದೆ. ಮೈಸೂರಿನಲ್ಲಿ ದೊಡ್ಡ ಮಟ್ಟದ ಕಾರ್ಯಕ್ರಮ ಆಯೋಜನೆ ಮಾಡಲಾಗುತ್ತದೆ ಎಂದರು. ಆರೋಗ್ಯದ ದೃಷ್ಟಿಯಿಂದ ಯೋಗ ಅತ್ಯವಶ್ಯಕವಾಗಿದೆ. ದೇಹ ಹಾಗೂ ಮನಸ್ಸಿಗೆ ಯೋಗ ಒಳ್ಳೆಯದು. ಯೋಗ ನಮ್ಮ ಪ್ರಾಚೀನ ಪದ್ಧತಿಯಾಗಿದೆ. ಯೋಗ ಬೇರೆ ದೇಶದಲ್ಲೂ ಹೆಸರುವಾಸಿಯಾಗಿದೆ. ಯೋಗಕ್ಕೆ ವಿಶ್ವದ ಎಲ್ಲ ದೇಶಗಳಲ್ಲೂ ಪ್ರಾಮುಖ್ಯತೆ ಸಿಕ್ಕಿದೆ ಎಂದು ಆರೋಗ್ಯ ಸಚಿವರು ತಿಳಿಸಿದರು.

ಶಾಲೆಗಳಲ್ಲಿ ಯೋಗ ತರಗತಿ ತೆರೆಯುವ ವಿಚಾರವಾಗಿ ಮಾತನಾಡಿದ ಅವರು, ಈ ವಿಚಾರದ ಬಗ್ಗೆ ಈಗಾಗಲೇ ಚರ್ಚೆಯಾಗಿದೆ. ಶಾಲೆಗಳಲ್ಲಿ ಯೋಗ ಶಿಕ್ಷಕರು, ಯೋಗ ತರಗತಿ ಬೇಕು. ಯೋಗ ಖಂಡಿತವಾಗಲೂ ಅನುಕೂಲವಾಗಲಿದೆ. ಆದರೆ, ಶಾಲೆಗಳಲ್ಲಿ ಯೋಗಕ್ಕಿಂತ ಕ್ರಿಡೆಗಳೇ ಮುಖ್ಯ. ಆಟವಾಡುವ ವಯಸ್ಸಿನಲ್ಲಿ ಮಕ್ಕಳು ಕ್ರೀಡೆಗೆ ಆದ್ಯತೆ ನೀಡಬೇಕು. ಬೇರೆ ಬೇರೆ ಕ್ರೀಡೆಗಳಿಗೆ ಅವಕಾಶ ನೀಡಬೇಕು. ಮಕ್ಕಳು ವಯಸ್ಸಿಗೆ ಬಂದ ನಂತರ ಯೋಗ ಹೇಳಿಕೊಟ್ಟರೇ ಅದರ ಪ್ರತಿಫಲ ಹೆಚ್ಚಾಗಿರುತ್ತದೆ. ಯೋಗ ಶಿಕ್ಷಕರ ಬದಲಿಗೆ ಸ್ಪೋರ್ಟ್ಸ್ ಶಿಕ್ಷಕರ ಆದ್ಯತೆ ಹೆಚ್ಚಾಗಿರುತ್ತದೆ ಎಂದರು.

## ಇಸ್ರೇಲ್ ಬೆಂಬಲಕ್ಕೆ ನಿಂತ ಜಿ-7 ನಾಯಕರು

ಮಲ್ಲಮ್ಮನುಡಿವಾರ್ತೆ ಒಟ್ಟಾವಾ:ಜೂ.17: ಪಶ್ಚಿಮ ಏಷ್ಯಾದಲ್ಲಿ ಹೆಚ್ಚುತ್ತಿರುವ ಬಿಕ್ಕಟ್ಟಿನಲ್ಲಿ ಇಸ್ರೇಲ್‌ಗೆ ತನ್ನನ್ನು ತಾನು ರಕ್ಷಿಸಿಕೊಳ್ಳುವ ಹಕ್ಕಿದೆ ಎಂದು ಜಿ-7 ಶೃಂಗಸಭೆಯಲ್ಲಿ ನಾಯಕರು ಅಭಿಪ್ರಾಯಪಟ್ಟಿದ್ದಾರೆ. ಆ ಮೂಲಕ ಇರಾನ್ ಜೊತೆಗಿನ ಸಂಘರ್ಷದಲ್ಲಿ ಇಸ್ರೇಲ್‌ಗೆ ಬೆಂಬಲ ವ್ಯಕ್ತಪಡಿಸಿದ್ದಾರೆ. ಜಿ-7 ನಾಯಕರಾದ ನಾವು ಮಧ್ಯಪ್ರಾಚ್ಯದಲ್ಲಿ ಶಾಂತಿ ಮತ್ತು ಸ್ಥಿರತೆಗೆ ಬದ್ಧರಾಗಿದ್ದೇವೆ. ಈ ಸಂದರ್ಭದಲ್ಲಿ ಇಸ್ರೇಲ್ ತನ್ನನ್ನು ತಾನು ರಕ್ಷಿಸಿಕೊಳ್ಳುವ ಹಕ್ಕಿದೆ ಎಂಬುದು ನಮ್ಮ ಅಭಿಪ್ರಾಯ. ಇಸ್ರೇಲ್‌ನ ಸುರಕ್ಷತೆಗಾಗಿ ನಾವು ನಮ್ಮ ಬೆಂಬಲವನ್ನು ಪುನರುಚ್ಚರಿಸುತ್ತೇವೆ. ನಾಗರಿಕರ ರಕ್ಷಣೆಯ ಮಹತ್ವವನ್ನು ದೃಢೀಕರಿಸುತ್ತೇವೆ ಎಂದು ಕೆನಡಾದ ಪ್ರಧಾನ ಮಂತ್ರಿಯ ಕಚೇರಿ ಬಿಡುಗಡೆ ಮಾಡಿದ ಹೇಳಿಕೆಯಲ್ಲಿ ಸ್ಪಷ್ಟಪಡಿಸಲಾಗಿದೆ.

ಇರಾನ್ ದೇಶವು ಪ್ರಾದೇಶಿಕ ಅಸ್ಥಿರತೆ ಮತ್ತು ಭಯೋತ್ಪಾದನೆಯ ಪ್ರಮುಖ ಮೂಲವಾಗಿದೆ. ಇರಾನ್ ಎಂದಿಗೂ ಪರಮಾಣು ಶಸ್ತ್ರಾಸ್ತ್ರವನ್ನು ಹೊಂದಲು ಸಾಧ್ಯವಿಲ್ಲ ಎಂದು ನಾವು ನಿರಂತರವಾಗಿ ಸ್ಪಷ್ಟಪಡಿಸಿದ್ದೇವೆ. ಇರಾನಿನ ಬಿಕ್ಕಟ್ಟಿನ ನಿರ್ಣಯವು ಮಧ್ಯಪ್ರಾಚ್ಯದಲ್ಲಿ ವ್ಯಾಪಕವಾದ ಹಗೆತನಕ್ಕೆ ಕಾರಣವಾಗುತ್ತದೆ ಎಂದು ತಿಳಿಸಿದೆ.

(2ನೇ ಪುಟ ನೋಡಿ)

## ಭಯ ಬಿಟ್ಟು ರಕ್ತದಾನ ಮಾಡಿ, ಜೀವ ಉಳಿಸಿ



ಮಲ್ಲಮ್ಮನುಡಿ ವಾರ್ತೆ ಕಲಬುರಗಿ, ಜೂ,17: ಸಾಮಾಜಿಕ ಕಳಕಳಿಯುಳ್ಳ ಪ್ರತಿಯೊಬ್ಬ ಆರೋಗ್ಯವಂತ ವ್ಯಕ್ತಿಯು ಭಯ ಬಿಟ್ಟು ರಕ್ತದಾನ ಮಾಡುವ ಮೂಲಕ ಇನ್ನೊಬ್ಬರ ಜೀವ ಉಳಿಸುವ ಮಹಾನ್ ಕಾರ್ಯಕ್ಕೆ ನೆರವಾಗಬೇಕು ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಕಲಬುರಗಿಯ ವಿಭಾಗೀಯ ಜಂಟಿ ನಿರ್ದೇಶಕರ ಕಾರ್ಯಾಲಯದ ಉಪನಿರ್ದೇಶಕ ಡಾ. ಶರಣಬಸಪ್ಪ ಗಣಜಲಖೇಡ್ ಕರೆ ನೀಡಿದರು. ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಕರ್ನಾಟಕ ರಾಜ್ಯ ಏಡ್ಸ್ ಪ್ರಿವೆನಷನ್ ಸೊಸೈಟಿ, ಕರ್ನಾಟಕ ರಾಜ್ಯ ರಕ್ತ ಚಾಲನಾ ಪರಿಷತ್, ಜಿಲ್ಲಾ ಏಡ್ಸ್ ನಿಯಂತ್ರಣ ಮತ್ತು ತಡೆಗಟ್ಟುವ ಘಟಕ, ಭಾರತೀಯ ರೆಡ್ ಕ್ರಾಸ್ ಸಂಸ್ಥೆ, ಜಿಮ್ಸ್ ಆಸ್ಪತ್ರೆ, ಜಿಲ್ಲೆಯ ರಕ್ತ ನಿಧಿ ಕೇಂದ್ರಗಳು, ರೆಡ್ ರಿಬ್ಬನ ಕ್ಲಬಗಳು, ಸ್ವಯಂ ಸೇವಾ ಸಂಸ್ಥೆಗಳು, ಎನ್.ಎಸ್.ಎಸ್. ಘಟಕ, ಕಲಬುರಗಿ ಇವುಗಳ ಸಂಯುಕ್ತಾಶ್ರಯದಲ್ಲಿ ಇಲ್ಲಿನ ಜಿಲ್ಲಾ ಸಮೀಕ್ಷಣಾ ಘಟಕದ ಬಳಿಯ ಜಿಲ್ಲಾ ಉಗ್ರಾಣ ಕೇಂದ್ರದ ಸಭಾ ಭವನದಲ್ಲಿ ಆಯೋಜಿಸಿದ ವಿಶ್ವ ರಕ್ತದಾನಿಗಳ ದಿನಾಚರಣೆಯ

(2ನೇ ಪುಟ ನೋಡಿ)

## ಮಧ್ಯವರ್ತಿಗಳ ಬಲೆಗೆ ಬೀಳಬೇಡಿ: ಶರಣ ಪ್ರಕಾಶ್ ಪಾಟೀಲ್

ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಜೂ.17: ವೈದ್ಯರಾಗಬೇಕೆಂಬ ಕನಸು ಹೊತ್ತು ರಾಷ್ಟ್ರೀಯ ಅರ್ಹತಾ ಮತ್ತು ಪ್ರವೇಶ ಪರೀಕ್ಷೆ ಬರೆದಿರುವ ವಿದ್ಯಾರ್ಥಿಗಳು ಹಾಗೂ ಅವರ ಪೋಷಕರು ಯಾವುದೇ ಕಾರಣಕ್ಕೂ ಮಧ್ಯವರ್ತಿಗಳ ಮೋಸದ ಬಲೆಗೆ ಬೀಳಬಾರದು ಎಂದು ವೈದ್ಯಕೀಯ ಶಿಕ್ಷಣ ಸಚಿವ ಶರಣಪ್ರಕಾಶ್ ಪಾಟೀಲ್ ಅವರು ಮಂಗಳವಾರ ಹೇಳಿದ್ದಾರೆ.

ವೈದ್ಯಕೀಯ ಸೀಟು ಕೊಡಿಸುವ ಸುಳ್ಳು ಭರವಸೆಗಳೊಂದಿಗೆ ವಿದ್ಯಾರ್ಥಿಗಳು ಅಥವಾ ಪೋಷಕರನ್ನು ದಾರಿ ತಪ್ಪಿಸುತ್ತಿರುವ ಮಧ್ಯವರ್ತಿಗಳನ್ನು ಗುರುತಿಸಿ ಕಾನೂನಿನ ಪ್ರಕಾರ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುವುದು ಎಂದು ಸಚಿವರು ಎಚ್ಚರಿಸಿದ್ದಾರೆ.

ವೈದ್ಯರಾಗುವ ಕನಸಿನಿಂದಾಗಿ ಕಷ್ಟಪಟ್ಟು ಅಧ್ಯಯನ ಮಾಡಿ ನೀಟ್ ಪರೀಕ್ಷೆಗಳಲ್ಲಿ ಉತ್ತಮ ಸಾಧನೆ ಮಾಡಿದ ವಿದ್ಯಾರ್ಥಿಗಳು, ಆತಂಕದಿಂದ ವಂಚಕರ ಬಲೆಗೆ ಬೀಳಬಾರದು ಎಂದು ಸಚಿವರು ಹೇಳಿದ್ದಾರೆ.



ಕೆಲವರು ವೈದ್ಯಕೀಯ ಸೀಟು ಕೊಡಿಸುವ ಸುಳ್ಳು ಭರವಸೆ ನೀಡುತ್ತಿದ್ದಾರೆ. ಅವರು ತಮ್ಮ "ಸಂಪರ್ಕ" ಅಥವಾ "ಪ್ರಭಾವ"ವನ್ನು ಬಳಸಿಕೊಂಡು ಕೆಲವು ಕಾಲೇಜುಗಳಲ್ಲಿ ಪ್ರವೇಶ ಕೊಡಿಸುವುದಾಗಿ ಹೇಳಿಕೊಳ್ಳುತ್ತಿದ್ದಾರೆ. ಆದರೆ ಹಣ ಪಡೆದು ವಂಚಿಸಿ ಕಣ್ಮರೆಯಾಗುತ್ತಾರೆ ಎಂದು ಸಚಿವರು ಎಚ್ಚರಿಸಿದ್ದಾರೆ.

ಕರ್ನಾಟಕದಲ್ಲಿ ಒಟ್ಟು 1,47,782 ಅಭ್ಯರ್ಥಿಗಳು ನೀಟ್‌ಗೆ ನೋಂದಾಯಿಸಿಕೊಂಡಿದ್ದಾರೆ ಮತ್ತು 1,42,369 ಅಭ್ಯರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದಾರೆ.

ಈ ಪೈಕಿ 83,582 ವಿದ್ಯಾರ್ಥಿಗಳು ಇತ್ತೀಚೆಗೆ ಪ್ರಕಟವಾದ ಫಲಿತಾಂಶದಲ್ಲಿ ಅರ್ಹತೆ ಪಡೆದಿದ್ದಾರೆ ಎಂದು ಸಚಿವರು ತಿಳಿಸಿದ್ದಾರೆ.

"ಉನ್ನತ ಕಾಲೇಜಿನಲ್ಲಿ ಸೀಟು ಪಡೆಯಲು ಆತುರ ಅಥವಾ ಆತಂಕದಿಂದ ವರ್ತಿಸಬೇಡಿ. ಮಧ್ಯವರ್ತಿಗಳು ನಿಮ್ಮ ಹತಾಶೆಯನ್ನು ಬಳಸಿಕೊಳ್ಳಲು ಕಾಯುತ್ತಿದ್ದಾರೆ. ಜಾಗರೂಕರಾಗಿರಿ ಮತ್ತು ಅವರ ವಂಚನೆಗೆ ಬಲಿಯಾಗಬೇಡಿ" ಎಂದು ಸಚಿವರು ಕಿವಿಮಾತು ಹೇಳಿದ್ದಾರೆ.

ಎಲ್ಲಾ ಸೀಟು ಹಂಚಿಕೆಗಳನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರ(ಕೆಇಎ) ಮೂಲಕ ವ್ಯವಸ್ಥಿತ ಮತ್ತು ಪಾರದರ್ಶಕ ರೀತಿಯಲ್ಲಿ ಮಾಡಲಾಗುತ್ತದೆ ಎಂದು ಪಾಟೀಲ್ ಹೇಳಿದರು.

"ವಿದ್ಯಾರ್ಥಿಗಳು ಮತ್ತು ಪೋಷಕರು ಈ ಅಧಿಕೃತ ಕಾರ್ಯವಿಧಾನಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು" ಎಂದು ಅವರು ಹೇಳಿದರು.

## ಅಭಿಮಾನಿಗಳು, ಕಾರ್ಯಕರ್ತರ ಸಮ್ಮುಖದಲ್ಲಿ ಜನ್ಮ ದಿನ ಆಚರಿಸಿಕೊಂಡ ಬಂಡೆಪ್ಪ ಖಾಶೆಂಪುರ್



ಮಲ್ಲಮ್ಮ ನುಡಿ ವಾರ್ತೆ ಬೀದರ. ಜೂ. 17 : ಮಾಜಿ ಸಚಿವರು, ಜೆಡಿಎಸ್ ಪಕ್ಷದ ಹಿರಿಯ ನಾಯಕರಾಗಿರುವ ಬಂಡೆಪ್ಪ ಖಾಶೆಂಪುರ್ ರವರು ಬೀದರ್ ದಕ್ಷಿಣ ವಿಧಾನಸಭಾ ಕ್ಷೇತ್ರದ ಖಾಶೆಂಪುರ್ ಪಿ ಗ್ರಾಮದ ಹೊರವಲಯದಲ್ಲಿರುವ ಅವರ ತೆ-ೂಟದ ಮನೆಯ ಆವರಣದಲ್ಲಿ ದಿನವಿಡೀ ಹಾಗೂ ಅಭಿಮಾನಿಗಳು, ಕಾರ್ಯಕರ್ತರ ಸಮ್ಮುಖದಲ್ಲಿ 61ನೇ

(2ನೇ ಪುಟ ನೋಡಿ)

## 135 ಜನರ ಗುರುತು ಪತ್ತೆ, 101 ಮೃತದೇಹ ಸಂಬಂಧಿಕರಿಗೆ ಹಸ್ತಾಂತರ

ಮಲ್ಲಮ್ಮ ನುಡಿ ವಾರ್ತೆ ಅಹಮದಾಬಾದ್:ಜೂ.17: ಅಹಮದಾಬಾದ್‌ನಲ್ಲಿ ಏರ್ ಇಂಡಿಂ-ಯಾ ವಿಮಾನ ಪತನದಲ್ಲಿ 270 ಜನ ಸಾವನ್ನಪ್ಪಿದ ಐದು ದಿನಗಳ ನಂತರ, ಡಿಎನ್ಎ ಹೊಂದಾಣಿಕೆಯ ಮೂಲಕ ಇದುವರೆಗೆ 135 ಜನರನ್ನು ಗುರುತಿಸಲಾಗಿದೆ ಮತ್ತು 101 ಮೃತದೇಹಗಳನ್ನು ಅವರ ಕುಟುಂಬಗಳಿಗೆ ಹಸ್ತಾಂತರಿಸಲಾಗಿದೆ ಎಂದು ಅಧಿಕಾರಿಗಳು ಮಂಗಳವಾರ ತಿಳಿಸಿದ್ದಾರೆ.

"ಇಂದು ಬೆಳಗ್ಗೆವರೆಗೆ 135 ಡಿಎನ್ಎ ಮಾದರಿಗಳನ್ನು ಹೊಂದಿಸಲಾಗಿದೆ ಮತ್ತು 101 ಶವಗಳನ್ನು ಈಗಾಗಲೇ ಆಯಾ ಕುಟುಂಬಗಳಿಗೆ ಹಸ್ತಾಂತರಿಸಲಾಗಿದೆ. ಈ 101 ಮೃತರಲ್ಲಿ ಐದು ಮಂದಿ ವಿಮಾನದಲ್ಲಿ ಇರಲಿಲ್ಲ" ಎಂದು ಅಹಮದಾಬಾದ್ ಸಿವಿಲ್ ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕ ಡಾ. ರಾಕೇಶ್ ಜೋಶಿ ವರದಿಗಾರರಿಗೆ ತಿಳಿಸಿದ್ದಾರೆ.

ಶೀಘ್ರದಲ್ಲೇ ಉಳಿದ ಶವಗಳನ್ನು ಅವರ ಪ್ರೀತಿಪಾತ್ರರಿಗೆ ಹಸ್ತಾಂತರಿಸಲಾಗುವುದು. ಇನ್ನು ಐದು ಕುಟುಂಬಗಳು ಪ್ರಸ್ತುತ ಆಸ್ಪತ್ರೆ ಆಡಳಿತದೊಂದಿಗೆ ಸಂಪರ್ಕದಲ್ಲಿವೆ. ಹೆಚ್ಚುವರಿಯಾಗಿ 17 ಕುಟುಂಬಗಳು ಡಿಎನ್ಎ ವಿಶ್ಲೇಷಣೆಯ ಫಲಿತಾಂಶಕ್ಕಾಗಿ ಕಾಯುತ್ತಿದ್ದಾರೆ ಎಂದು ಡಾ. ಜೋಶಿ ಅವರು ಹೇಳಿದ್ದಾರೆ.

ಡಾ. ಜೋಶಿ ಅವರು ಮೃತರ ಮತ್ತು ಗುರುತಿಸಲ್ಪಟ್ಟವರ ಜಿಲ್ಲಾವಾರು ಡೇಟಾವನ್ನು ಸಹ ಹಂಚಿಕೊಂಡಿದ್ದು, ಅಹಮದಾಬಾದ್‌ನ 30 ಜನ ಮೃತಪಟ್ಟಿದ್ದು, 13 ಜನ ವಡೋದರಾ ಮೂಲದವರಾಗಿದ್ದಾರೆ. 10 ಮಂದಿ ಖೇಡಾ, ಒಂಬತ್ತು ಮಂದಿ ಆನಂದ್, ಮೆಹ್ಸಾನಾ ಮತ್ತು ಗಾಂಧಿನಗರದ ತಲಾ ಐದು ಮಂದಿ, ನಾಲ್ಕು ಮಂದಿ ಭರೂಚ್‌ನವರು, ಮೂವರು ಸೂರತ್‌ನವರು, ಇಬ್ಬರು ಅರವಳ್ಳಿಯವರು ಮತ್ತು ಬೊಟಾಡ್, ಜುನಾಗಢ್, ಅಮ್ರೇಲಿ, ಮಹಿಸಾಗರ್, ಭಾವನಗರ, ಗಿರ್ ಸೋಮನಾಥ್, ನಾಡಿಯಾಡ್ ಮತ್ತು ರಾಜ್‌ಕೋಟ್ ತಲಾ ಒಬ್ಬರು ಮೃತಪಟ್ಟಿದ್ದಾರೆ ಎಂದು ಅವರು ತಿಳಿಸಿದ್ದಾರೆ.

ಮಹಾರಾಷ್ಟ್ರದ ನಾಲ್ಕು ಮಂದಿ ಮೃತಪಟ್ಟಿದ್ದು, ಇಬ್ಬರು ಉದಯಪುರದವರು ಮತ್ತು ಜೋಧ್‌ಪುರ ಹಾಗೂ ಪಾಟ್ನಾದ ತಲಾ ಒಬ್ಬರು ವಿಮಾನ ಪತನದಲ್ಲಿ ಸಾವನ್ನಪ್ಪಿದ್ದಾರೆ ಎಂದು ಅವರು ತಿಳಿಸಿದ್ದಾರೆ.

ಜೂನ್ 12 ರಂದು ಮಧ್ಯಾಹ್ನ 1.39ಕ್ಕೆ 242 ಜನರನ್ನು ಹೊತ್ತೊಯ್ಯುತ್ತಿದ್ದ ಏರ್ ಇಂಡಿಯಾದ ಬೋಯಿಂಗ್ 787-8 ಡ್ರೀಮ್‌ಲೈನರ್

ವಿಮಾನವು ಅಹಮದಾಬಾದ್‌ನ ಸರ್ದಾರ್ ವಲ್ಲಭಭಾಯಿ ಪಟೇಲ್ ಅಂತರಾಷ್ಟ್ರೀಯ ವಿಮಾನನಿಲ್ದಾಣದಿಂದ ಟೇಕಾಫ್ ಆದ ಕೆಲವೇ ಕ್ಷಣಗಳಲ್ಲಿ ವೈದ್ಯಕೀಯ ಕಾಲೇಜು ಸಂಕೀರ್ಣಕ್ಕೆ ಅಪ್ಪಳಿಸಿತ್ತು.

ಒಂದನೇ ಪುಟದಿಂದ

## ಜನ್ಮ ದಿನ ಆಚರಿಸಿಕೊಂಡ ಬಂಡೆಪ್ಪ ಖಾಶೆಂಪುರ್

ವರ್ಷದ ಜನ್ಮ ದಿನ ಆಚರಣೆ ಮಾಡಿಕೊಂಡರು. ಖಾಶೆಂಪುರ್ ಪಿ ಗ್ರಾಮದ ಹೊರವಲಯದಲ್ಲಿರುವ ಅವರ ತೋಟದ ಮನೆಗೆ ಭಾನುವಾರ ದಿನವಿಡೀ ಹಾಗೂ ಸೋಮವಾರ ಬೀದರ್, ಕಲಬುರಗಿ, ಬೆಂಗಳೂರು, ರಾಮನಗರ ಸೇರಿದಂತೆ ರಾಜ್ಯದ ವಿವಿಧ ಜಿಲ್ಲೆಗಳಿಂದ ಸಾವಿರಾರು ಸಂಖ್ಯೆಯಲ್ಲಿ ಆಗಮಿಸಿದ ಅಭಿಮಾನಿಗಳು, ಜೆಡಿಎಸ್ ಪಕ್ಷದ ಮುಖಂಡರು, ಕಾರ್ಯಕರ್ತರು, ಅವರ ಆಪ್ತರು ಕೇಕ್ ಕತ್ತರಿಸಿ, ಶಾಲು, ಹಾರ ಹಾಕಿ, ಹೂಗುಚ್ಛ ನೀಡಿ ಸನ್ಮಾನಿಸಿ, ಗೌರವಿಸುವ ಮೂಲಕ ಬಂಡೆಪ್ಪ ಖಾಶೆಂಪುರ್ ರವರಿಗೆ ಜನ್ಮ ದಿನದ ಶುಭ ಕೋರಿದರು.

ದಿನವಿಡೀ ಮೊಳಗಿದ ಜಯಘೋಷ:

ಮಾಜಿ ಸಚಿವ ಬಂಡೆಪ್ಪ ಖಾಶೆಂಪುರ್ ರವರ 61ನೇ ವರ್ಷದ ಜನ್ಮದಿನಕ್ಕೆ ಶುಭ ಕೋರಲು ವಿವಿಧೆಡೆಯಿಂದ ಆಗಮಿಸಿದ ಅವರ ಅಭಿಮಾನಿಗಳು, ಕಾರ್ಯಕರ್ತರು ದಿನವಿಡೀ ಜಯಘೋಷ ಮೊಳಗಿಸಿದರು. ಬಂಡೆಪ್ಪ ಖಾಶೆಂಪುರ್, ಜೆಡಿಎಸ್ ಪಕ್ಷ, ಹೆಚ್.ಡಿ ದೇವೇಗೌಡ, ಹೆಚ್.ಡಿ ಕುಮಾರಸ್ವಾಮಿರವರ ಪರವಾಗಿ ಘೋಷಣೆ ಕೂಗಿ ಹರ್ಷ ವ್ಯಕ್ತ ಪಡಿಸಿದರು.

ಇದಕ್ಕೂ ಮುಂಚೆ, ಜನ್ಮ ದಿನದ ಅಂಗವಾಗಿ ಭಾನುವಾರ ಬೆಳಗ್ಗೆ ಬಂಡೆಪ್ಪ ಖಾಶೆಂಪುರ್ ರವರು, ಬೀದರ್ ಜಿಲ್ಲೆಯ ಭಾಲ್ಕಿ ತಾಲೂಕಿನ ಖಾನಾಪೂರದ ಶ್ರೀ ಕ್ಷೇತ್ರ ಮೈಲಾರ ಮಲ್ಲಣ್ಣಾ (ಖಂಡೊಬಾ) ದೇವಸ್ಥಾನ, ಶ್ರೀ ನಾಗಲಿಂಗೇಶ್ವರ ದೇವಸ್ಥಾನ, ಶ್ರೀ ಘೃತಮಾರಿ (ಗುರುತು ಮಲ್ಲಮ್ಮ) ದೇವಿ ದೇವಸ್ಥಾನ, ಬೀದರ್ ನಗರದ ಮಂಗಳಪೇಟಾದ ತಾಯಿ ಭವಾನಿ ಮಂದಿರ ಸೇರಿದಂತೆ ವಿವಿಧ ಮಂದಿರಗಳಿಗೆ ಹಾಗೂ ಅವರ ತಂದೆ, ತಾಯಿ ಗದ್ದುಗೆಗಳಿಗೆ ಭೇಟಿ ನೀಡಿ ವಿಶೇಷ ಪೂಜೆ, ಪ್ರಾರ್ಥನೆ ಸಲ್ಲಿಸಿ, ಆಶೀರ್ವಾದ ಪಡೆದರು.

ವಿಧಾನ ಪರಿಷತ್ ಸದಸ್ಯರಾದ ಮಾರುತಿರಾವ್ ಮೂಳೆ, ಮಾಜಿ ಕೇಂದ್ರ ಸಚಿವರಾದ ಭಗವಂತ್ ಖೂಬಾರವರು ಸೇರಿದಂತೆ ಜನಪ್ರತಿನಿಧಿಗಳು, ವಿವಿಧ ಪಕ್ಷಗಳ ಮುಖಂಡರು, ಬಂಡೆಪ್ಪ ಖಾಶೆಂಪುರ್ ರವರ ಅಭಿಮಾನಿಗಳು, ಜೆಡಿಎಸ್ ಪಕ್ಷದ ಕಾರ್ಯಕರ್ತರು ಸೇರಿದಂತೆ ಅನೇಕರು ಆಗಮಿಸಿ ಶುಭ ಕೋರಿದರು.

## ರಕ್ತದಾನ ಮಾಡಿ, ಜೀವ ಉಳಿಸಿ

ಕಾರ್ಯಕ್ರಮದಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ರಕ್ತದಾನದ ಕುರಿತು ಜನರಲ್ಲಿನ ಭಯವನ್ನು ಹೋಗಲಾಡಿಸಿ ಸ್ವಯಂ ಪ್ರೇರಿತವಾಗಿ ರಕ್ತದಾನ ಮಾಡುವಂತೆ ಜನರಿಗೆ ಹೆಚ್ಚಿನ ಅರಿವು ನೀಡುವ ಅವಶ್ಯಕತೆ ಇದೆ. "ರಕ್ತದಾನ" ದಾನಗಳಲ್ಲಿಯೆ ಶ್ರೇಷ್ಟವಾದದ್ದು. ಬೇರೆಯವರ ಜೀವ ಉಳಿಸಲು ಯಾವುದೇ ರೀತಿಯ ಪ್ರತಿಫಲಾಪೇಕ್ಷೆಯಿಲ್ಲದೆ ರಕ್ತವನ್ನು ದಾನ ಮಾಡಬೇಕು. ಇದರಿಂದ ರಸ್ತೆ ಅಪಘಾತ, ಕ್ಯಾನ್ಸರ್ ರೋಗಿಗಳು, ಗರ್ಭಿಣಿ ಸ್ತ್ರೀಯರು ಸೇರಿದಂತೆ ಮುಂತಾದ ರೋಗಿಗಳಿಗೆ ಹಾಗೂ ತುರ್ತು ಸಂದರ್ಭಗಳಲ್ಲಿ ಚಿಕಿತ್ಸೆ ನೀಡಲು ಅನುಕೂಲವಾಗುತ್ತದೆ ಎಂದರು.

ಕಾರ್ಯಕ್ರಮದಲ್ಲಿ ಭಾಗವಹಿಸಿದ ಭಾರತೀಯ ರೆಡ್ ಕ್ರಾಸ್ ಸಂಸ್ಥೆಯ ಕಾರ್ಯದರ್ಶಿ ರವೀಂದ್ರ ಶಾಬಾದಿ ಮಾತನಾಡಿ, ರಕ್ತದಾನ ಬಹಳ ಶ್ರೇಷ್ಟ ದಾನವಾಗಿದೆ. ರಕ್ತವನ್ನು ದಾನ ಮಾಡುದರಿಂದ ಆರ್ಥಿಕವಾಗಿ ಬಡ ರೋಗಿಗಳಿಗೆ ತುರ್ತು ಸಂದರ್ಭದಲ್ಲಿ ಅದು ಉಪಯೋಗಕ್ಕೆ ಬರಲಿದೆ. ಕಳೆದ ವರ್ಷದ ಅವಧಿಯಲ್ಲಿ ಹೆಚ್ಚಿನ ಅರಿವು ಮೂಡಿಸಿದ ಪರಿಣಾಮ ಒಂದು ಸಾವಿರ ಯೂನಿಟ್ ರಕ್ತವನ್ನು ಸಾರ್ವಜನಕರಿಂದ ರಕ್ತದಾನ ಮಾಡಿಸಿದ್ದೇವೆ. ತಾವು ಕೂಡ 53 ಬಾರಿ ರಕ್ತದಾನ ಮಾಡಿರುವೆ ಎಂದರು.

ಜಿಲ್ಲಾ ಆಸ್ಪತ್ರೆಯ ರಕ್ತ ನಿಧಿ ಕೇಂದ್ರದ ವೈದ್ಯಾಧಿಕಾರಿ ಡಾ. ಮಮತಾ ಪಾಟೀಲ್ ಅವರು ತಮ್ಮ ವಿಶೇಷ ಉಪನ್ಯಾಸದಲ್ಲಿ ಮಾತನಾಡುತ್ತಾ, ವಿದ್ಯಾವಂತರಾದವರು ಗ್ರಾಮೀಣ ಜನರಿಗೆ, ಅನಕ್ಷರಸ್ತರಿಗೆ ರಕ್ತದಾನದ ಕುರಿತು ಸರಿಯಾದ ರೀತಿಯಲ್ಲಿ ತಿಳುವಳಿಕೆ ನೀಡಬೇಕು. ರಕ್ತದಾನದ ಕುರಿತು ಅವರಲ್ಲಿರುವ ಆತಂಕ ದೂರ ಮಾಡಿ ರಕ್ತದಾನಕ್ಕೆ ಪ್ರೇರೇಪಿಸಬೇಕು. ಇನ್ನು ರಕ್ತವನ್ನು ದಾನ ಮಾಡುದರಿಂದ ದೇಹದಲ್ಲಿನ ಕೊಲೆಸ್ಟ್ರಾಲ್ ಕಡಿಮೆಯಾಗಿ ಹೃದಯಾಘಾತವಾಗುವುದನ್ನು ತಪ್ಪಿಸುತ್ತದೆ ಎಂಬ ಅರಿವು ಸಾಮಾನ್ಯ ಜನರಲ್ಲಿ ಮೂಡಬೇಕಿದೆ ಎಂದು ಅವರು ಅಭಿಪ್ರಾಯಪಟ್ಟರು.

ಜಿಲ್ಲಾ ಏಡ್ಸ್ ನಿಯಂತ್ರಣ ಅಧಿಕಾರಿ ಡಾ. ಚಂದ್ರಕಾಂತ ನರಬೋಳಿ ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು. ಇದಕ್ಕೂ ಮುನ್ನ ಕಲಬುರಗಿಯ ವಿಭಾಗೀಯ ಜಂಟಿ ನಿರ್ದೇಶಕರ ಕಾರ್ಯಾಲಯದ ಸಹ ನಿರ್ದೇಶಕ ಡಾ. ಶಂಕರಪ್ಪ ಮೈಲಾರಿ ಅವರು ಕಾರ್ಯಕ್ರಮವನ್ನು ಉದ್ಘಾಟಿಸಿದರು.

ನಗದು ಬಹುಮಾನ ವಿತರಣೆ: ವಿಶ್ವ ರಕ್ತದಾನಿಗಳ ದಿನಾಚರಣೆ ಅಂಗವಾಗಿ ನಗರದ 25ಕ್ಕೂ ಹೆಚ್ಚಿನ ಕಾಲೇಜುಗಳಲ್ಲಿ ಆಯೋಜಿಸಿದ ಭಾಷಣ ಸ್ಪರ್ಧೆಯಲ್ಲಿ ವಿಜೇತರಾದ ಕ್ರಮವಾಗಿ ಅಗ್ರ ಮೂವರಿಗೆ ರೇವಣಸಿದ್ದಪ್ಪ ಪೂಜಾರಿ–2,500 ರೂ., ಕಾವೇರಿ–1,500 ರೂ. ಹಾಗೂ ಅನಿತಾ–1,000 ರೂ. ನಗದು ಬಹುಮಾನ ಮತ್ತು ಪ್ರಮಾಣ ಪತ್ರ ನೀಡಿ ಗೌರವಿಸಲಾಯಿತು. ಇದಲ್ಲದೆ 20ಕ್ಕು ಹೆಚ್ಚು ಬಾರಿ ರಕ್ತದಾನ ಮಾಡಿದವರಿಗೆ ವಿಶೇಷ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಕಲಬುರಗಿ ವಿಭಾಗೀಯ ಜಂಟಿ ನಿರ್ದೇಶಕರ ಕಾರ್ಯಾಲಯದ ಉಪನಿರ್ದೇಶಕ ಡಾ. ಎ.ಎಸ್.ರುದ್ರವಾಡಿ, ಆರ್.ಸಿ.ಹೆಚ್.ಓ ಸಿದ್ದು ಪಾಟೀಲ್ ಸೇರಿದಂತೆ ಅನೇಕ ಆರೋಗ್ಯ ಇಲಾಖೆಯ ಅಧಿಕಾರಿಗಳು, ಎನ್.ಟಿ.ಪಿ ಸಿಬ್ಬಂದಿ, ಐ.ಸಿ.ಟಿ.ಸಿ ಸಿಬ್ಬಂದಿ, ನರ್ಸಿಂಗ್ ವಿದ್ಯಾರ್ಥಿಗಳು, ರಶ್ಮಿ ಬಿ.ಎಡ್ ಕಾಲೇಜಿನ ಉಪನ್ಯಾಸಕರು–ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿಗಳು ಭಾಗವಹಿಸಿದ್ದರು. ಮಲ್ಲಿಕಾರ್ಜುನ ಬಿರಾದರ ಕಾರ್ಯಕ್ರಮ ನಿರೂಪಿಸಿದರು. ಐ.ಸಿ.ಟಿ.ಸಿ ಕೌನ್ಸಿಲರ್ ಸುಗಲಾ ರಾಣಿ ಅವರು ವಂದಿಸಿದರು.

ಜಾಥಾಗೆ ಚಾಲನೆ: ಕಾರ್ಯಕ್ರಮಕ್ಕೂ ಮುನ್ನ ವಿಶ್ವ ರಕ್ತದಾನಿಗಳ ದಿನಾಚರಣೆ ಅಂಗವಾಗಿ ಜಿಮ್ಸ್ ಆಸ್ಪತ್ರೆಯಿಂದ ಕಾರ್ಯಕ್ರಮದ ಸ್ಥಳದ ವರೆಗೆ ಜರುಗಿದ ಜಾಥಾಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಕಲಬುರಗಿಯ ವಿಭಾಗೀಯ ಜಂಟಿ ನಿರ್ದೇಶಕರ ಕಾರ್ಯಾಲಯದ ಸಹ ನಿರ್ದೇಶಕ ಡಾ. ಶಂಕರಪ್ಪ ಮೈಲಾರಿ ಅವರು ಚಾಲನೆ ನೀಡಿದರು. ಜಾಥಾದಲ್ಲಿ ನರ್ಸಿಂಗ್–ಪ್ಯಾರಾಮೆಡಿಕಲ್ ವಿದ್ಯಾರ್ಥಿಗಳು, ಅಧಿಕಾರಿ ಹಾಗೂ ಸಿಬ್ಬಂದಿಗಳು ಭಾಗಿಯಾಗಿದ್ದರು.

## ಬೆಂಬಲಕ್ಕೆ ನಿಂತ ಜಿ-7 ನಾಯಕರು

ನಾವು ಅಂತರರಾಷ್ಟ್ರೀಯ ಇಂಧನ ಮಾರುಕಟ್ಟೆಗಳ ಪರಿಣಾಮಗಳಿಗೆ ಜಾಗರೂಕರಾಗಿರುತ್ತೇವೆ. ಮಾರುಕಟ್ಟೆಯ ಸ್ಥಿರತೆಯನ್ನು ಕಾಪಾಡಲು ಸಮಾನ ಮನಸ್ಕ ಪಾಲುದಾರರನ್ನು ಒಳಗೊಂಡಂತೆ ಸಮನ್ವಯಗೊಳಿಸಲು ಸಿದ್ಧರಾಗಿರುತ್ತೇವೆ ಎಂದು ಹೇಳಿಕೆಯಲ್ಲಿ ತಿಳಿಸಲಾಗಿದೆ.

ಬ್ರಿಟನ್, ಕೆನಡಾ, ಫ್ರಾನ್ಸ್, ಜರ್ಮನಿ, ಇಟಲಿ, ಜಪಾನ್, ಯುನೈಟೆಡ್ ಸ್ಟೇಟ್ಸ್‌ನಿಂದ ರಾಷ್ಟದ ಮುಖ್ಯಸ್ಥರು ಮತ್ತು ಯುರೋಪಿಯನ್ ಒಕ್ಕೂಟದ ಪ್ರತಿನಿಧಿಗಳು ಮಂಗಳವಾರ ಶೃಂಗಸಭೆಯಲ್ಲಿ ಪಾಲ್ಗೊಂಡಿದ್ದರು. ಶೃಂಗಸಭೆಯಲ್ಲಿ ಪಾಲ್ಗೊಂಡಿದ್ದ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಅರ್ಧಕ್ಕೆ ಮೊಟಕು ಗೊಳಿಸಿ ಹೊರಟರು. ಇಸ್ರೇಲ್ ಮತ್ತು ಇರಾನ್ ನಡುವಿನ ಸಂಘರ್ಷದ ಕಾರಣಕ್ಕೆ ಟ್ರಂಪ್ ಅರ್ಧದಲ್ಲೇ ಎದ್ದು ಹೊರನಡೆದರು.

## ಭೋವಿ ವಡ್ಡರ ವಡ್ಡರ ಸಮಾಜದ ವಿದ್ಯಾರ್ಥಿಗಳಿಗೆ ರಾಜ್ಯಮಟ್ಟದ ಪ್ರತಿಭಾ ಪುರಸ್ಕಾರ ಜು.18ರಂದು

ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:ಜೂ.17:ಚಿತ್ರದುರ್ಗದ ಶ್ರೀಜಗದ್ಗುರು ಸಿದ್ದಾರಾಮೇಶ್ವರ ಮಹಾಸಂಸ್ಥಾನ ಭೋವಿ ಗುರುಪೀಠದಿಂದ ಭೋವಿ ವಡ್ಡರ ಸಮಾಜದ ವಿದ್ಯಾರ್ಥಿಗಳಿಗೆ ರಾಜ್ಯಮಟ್ಟದ ಪ್ರತಿಭಾ ಪುರಸ್ಕಾರ ಜು.18ರಂದು ಗುರುಪೀಠದ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಮಹಾನಗರ ಪಾಲಿಕೆ ಸದಸ್ಯೆ ಶ್ರೀಮತಿ ಹೊನ್ನಮ್ಮ ಬಿ ಹಾಗರಗಿ ತಿಳಿಸಿದ್ದಾರೆ.

ಭೋವಿ ವಡ್ಡರ ಸಮಾಜದ ವಿದ್ಯಾರ್ಥಿಗಳಿಗೆ ಪ್ರತಿಭಾ



ಪುರಸ್ಕಾರಕ್ಕೆ ಅರ್ಜಿ ಆಹ್ವಾನಿಸಲಾಗಿದೆ. ಹೀಗಾಗಿ ಭೋವಿ ಪಿಯುಸಿಯಲ್ಲಿ ಶೇ.90ಕ್ಕಿಂತ ಹೆಚ್ಚು ಅಂಕ ಪಡೆದ ಸಮುದಾಯದ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬೇಕು.

ಆಸಕ್ತರು ಅಂಕಪಟ್ಟಿ ಪ್ರತಿ, ಜಾತಿ ಪ್ರಮಾಣ ಪತ್ರ, ಭಾವಚಿತ್ರ, ಬ್ಯಾಂಕ್ ಪಾಸ್‌ಬುಕ್ ಪ್ರತಿಯನ್ನು ಜೂ.31ರ ಒಳಗಾಗಿ ಜಗದ್ಗುರು ಸಿದ್ದರಾಮೇಶ್ವರ ಮಹಾಸಂಸ್ಥಾನ ಭೂವಿ ಗುರುಪೀಠ ಚಿತ್ರದುರ್ಗ, ಇಮ್ಮಡಿಗಿರಿ ನಗರ ದಾವಣಗೆರೆ ರಸ್ತೆ ರಾಷ್ಟ್ರೀಯ ಹೆದ್ದಾರಿ–4 ಚಿತ್ರದುರ್ಗ–577502ಕ್ಕೆ ಪೋಸ್ಟ್ ಮೂಲಕ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಮೋ. ನಂ. 9481308433,9900882964, 888099942ಸಂಪರ್ಕಿಸಬೇಕೆಂದು ಹೊನ್ನಮ್ಮ ಅವರು ಪ್ರಕಟಣೆ–ಯ ಮೂಲಕ ತಿಳಿಸಿದ್ದಾರೆ.

## ಮಿನಿ ಉದ್ಯೋಗ ಮೇಳದಲ್ಲಿ ಆಯ್ಕೆಗೆ ಅಭ್ಯರ್ಥಿಗಳ ಪಟ್ಟಿ ಪ್ರಕಟ

ಯಾದಗಿರಿ : ಜೂ 17 : ಮಿನಿ ಉದ್ಯೋಗ ಮೇಳದಲ್ಲಿ ಆಯ್ಕೆಗೆ ಅಭ್ಯರ್ಥಿಗಳ ಪಟ್ಟಿ ಪ್ರಕಟಿಸಲಾಗಿದೆ ಎಂದು ಯಾದಗಿರಿ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ಉದ್ಯೋಗಾಧಿಕಾರಿ ಬಸವರಾಜ ಅವರು ತಿಳಿಸಿದ್ದಾರೆ.

2025ರ ಜೂನ್ 12 ರಂದು ಜಿಲ್ಲಾ ಉದ್ಯೋಗ ವಿನಿಮಯ ಕಛೇರಿ ಯಾದಗಿರಿ ವತಿಯಿಂದ ಮಿನಿ ಉದ್ಯೋಗ ಮೇಳವನ್ನು ಆಯೋಜಿಸಲಾಗಿದ್ದು, ಈ ಮೇಳವು ಬೆಳಿಗ್ಗೆ 10 ರಿಂದ ಸಂಜೆ 4 ಗಂಟೆ–ಯ ವರೆಗೆ ನಡೆಯಿತು. ಈ ಮೇಳದಲ್ಲಿ 10ನೇ ತರಗತಿ, ಪಿಯುಸಿ, ಐಟಿಐ, ಡಿಪ್ಲೋಮ, ಇತರೇ ಪದವಿ ಹೊಂದಿದ ನಿರುದ್ಯೋಗಿ ಅಭ್ಯರ್ಥಿಗಳು ಭಾಗವಹಿಸಿದರು. ಈ ಮೇಳದಲ್ಲಿ 136 ಅಭ್ಯರ್ಥಿಗಳು ಪೈಕಿ ಪುರುಷ 97 ಅಭ್ಯರ್ಥಿಗಳು ಮತ್ತು ಮಹಿಳೆ 39 ಅಭ್ಯರ್ಥಿಗಳು ಭಾಗವಹಿಸಿದರು. ಅದರಲ್ಲಿ ಪುರುಷ 24 ಅಭ್ಯರ್ಥಿಗಳು ಮತ್ತು ಮಹಿಳೆ 8 ಅಭ್ಯರ್ಥಿಗಳು ಒಟ್ಟು 32 ಅಭ್ಯರ್ಥಿಗಳು ಮಿನಿ ಉದ್ಯೋಗ ಮೇಳದಲ್ಲಿ ಭಾಗವಹಿಸಿ ಉದ್ಯೋಗಕ್ಕೆ ಆಯ್ಕೆಯಾಗಿರುತ್ತಾರೆ. ಅದರಲ್ಲಿ 14 ಅಭ್ಯರ್ಥಿಗಳು ಶಾರ್ಟ್ ಲಿಸ್ಟನ್ನಲ್ಲಿ ಇರುತ್ತಾರೆ.

## ಹೊಸ ಅಪರಾಧಿಕ ಕಾನೂನು ಕಾರ್ಯಾಗಾರ ಆಯೋಜನೆ

ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ,ಜೂ.17:ಕಲಬುರಗಿ ನಗರದ ಪೊಲೀಸ್ ತರಬೇತಿ ಮಹಾವಿದ್ಯಾಲಯದಲ್ಲಿ ಕಲಬುರಗಿ ನಗರ ಮತ್ತು ಜಿಲ್ಲೆ, ಬೀದರ ಹಾಗೂ ಯಾದಗಿರಿ ಜಿಲ್ಲೆಯ ಪಿ.ಎಸ್.ಐ. ದಿಂದ ಡಿವೈ.ಎಸ್.ಪಿ ವರೆಗಿನ ಅಧಿಕಾರಿಗಳಿಗೆ ಸೋಮವಾರ "ಹೊಸ ಅಪರಾಧಿಕ ಕಾನೂನು" ಕಾರ್ಯಾಗಾರ ಆಯೋಜಿಸಲಾಗಿತ್ತು.

ಪೊಲೀಸ್ ತರಬೇತಿ ಮಹಾವಿದ್ಯಾಲಯದ ಎಸ್.ಪಿ. ಮತ್ತು ಪ್ರಾಂಶುಪಾಲ ಡೆಕ್ಕಾ ಕಿಶೋರ ಬಾಬು ಅವರ ಅಧ್ಯಕ್ಷತೆಯಲ್ಲಿ ನಡೆದ ಕಾರ್ಯಾಗಾರವನ್ನು ಹೈದ್ರಾಬಾದಿನ ಸಿ.ಡಿ.ಟಿ.ಇ ಡಿ.ಐ.ಜಿ ಮತ್ತು ನಿರ್ದೇಶಕ ರಾಜಶೇಖರ ಎನ್. ಉದ್ಘಾಟಿಸಿ "ಹೊಸ ಅಪರಾಧಿಕ ಕಾನೂನು" ಕುರಿತು ಬೋಧನೆ ಮಾಡಿದರು.

ಕಲಬುರಗಿ ನಗರ ಪೊಲೀಸ್ ಆಯುಕ್ತ ಡಾ.ಎಸ್.ಡಿ.ಶರಣಪ್ಪ, ಕರ್ನಾಟಕ ಪೊಲೀಸ್ ಅಕಾಡೆಮಿಯ ನಿರ್ದೇಶಕ ಚೆನ್ನಬಸವಣ್ಣ ಲಂಗೋಟಿ ಸೇರಿದಂತೆ ಕಾರ್ಯಾಗಾರದಲ್ಲಿ ನೂರಾರು ಸಂಖ್ಯೆಯಲ್ಲಿ ಪೊಲೀಸ್ ಅಧಿಕಾರಿಗಳು ಭಾಗವಹಿಸಿದ್ದರು.

## ರಾಜ್ಯಮಟ್ಟದ ಗಡಿನಾಡು ಕನ್ನಡ ಜಾಗೃತಿ ಸಮಾವೇಶ ನಾಳೆ

ಮಲ್ಲಮ್ಮ ನುಡಿ ವಾರ್ತೆ ಬೀದರ. ಜೂ. 17 : ಕನ್ನಡ ಸೇನೆ ಕರ್ನಾಟಕ ಸಂಘಟನೆ ವತಿಯಿಂದ ನಗರದ ಪೂಜ್ಯ ಡಾ. ಚನ್ನಬಸವ ಪಟ್ಟದ್ದೇವರು ರಂಗಮಂದಿರದಲ್ಲಿ ಜೂನ್ 19 ರಂದು ಸಂಜೆ 5ಕ್ಕೆ ರಾಜ್ಯಮಟ್ಟದ ಗಡಿನಾಡು ಕನ್ನಡ ಜಾಗೃತಿ ಸಮಾವೇಶ, ಜಿಲ್ಲೆಯ ಸಾಧಕರಿಗೆ ರಾಜ್ಯಮಟ್ಟದ ಗಡಿನಾಡು ಕಾಯಕ ಯೋಗಿ, ವೀರ ಕನ್ನಡಿಗ ಹಾಗೂ ಕನ್ನಡ ರತ್ನ ಪ್ರಶಸ್ತಿ ಪ್ರದಾನ ಸಮಾರಂಭ ಹಮ್ಮಿಕೊಳ್ಳಲಾಗಿದೆ.

ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಉದ್ಘಾಟಿಸುವರು. ಜೈ ಭಾರತ ಮಾತಾ ರಾಷ್ಟ್ರೀಯ ಸೇವಾ ಸಮಿತಿಯ ರಾಷ್ಟ್ರೀಯ ಅಧ್ಯಕ್ಷ ಹವಾ ಮಲ್ಲಿನಾಥ ಮಹಾರಾಜ, ಸೊಂತದ ಬಾಲಯೋಗಿ ಅಭಿನವ ಶರಣ ಶಂಕರಲಿಂಗ ಮಹಾರಾಜ, ಚಳಕಾಪುರದ ಶಂಕರಾನಂದ ಸ್ವಾಮೀಜಿ ಸಾನಿಧ್ಯ, ಸಂಘಟನೆಯ ರಾಜ್ಯ ಅಧ್ಯಕ್ಷ ಕೆ.ಆರ್ ಕುಮಾರ ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿ ಪೌರಾಡಳಿತ ಹಾಗೂ ಹಜ್ ಸಚಿವ ರಹೀಂ ಖಾನ್, ಸಂಸದ ಸಾಗರ್ ಖಂಡ್ರೆ, ಶಾಸಕರಾದ ಡಾ. ಶೈಲೇಂದ್ರ ಬೆಲ್ದಾಳೆ, ಸಿದ್ದು ಪಾಟೀಲ,



ವಿಧಾನ ಪರಿಷತ್ ಸದಸ್ಯ ಭೀಮರಾವ್ ಪಾಟೀಲ, ಜಿ.ಎನ್. ಸಹಕಾರ ಆಸ್ಪತ್ರೆಯ ಅಧ್ಯಕ್ಷ ಸೂರ್ಯಕಾಂತ ನಾಗಮಾರಪಳ್ಳಿ, ಗುರುನಾನಕ ಶಿಕ್ಷಣ ಸಂಸ್ಥೆಗಳ ಸಮೂಹದ ಅಧ್ಯಕ್ಷ ಬಲಬೀರ ಸಿಂಗ್, ಅತಿಥಿಗಳಾಗಿ ಗಡಿ ಅಭಿವೃದ್ಧಿ ಪ್ರಾಧಿಕಾರದ ಸದಸ್ಯ ಸಂಜೀವಕುಮಾರ ಅತಿವಾಳೆ, ಕೇಂದ್ರ ಸರ್ಕಾರದ ರಾಜ್ಯ ಅಭಿವೃದ್ಧಿ, ಸಮನ್ವಯ ಹಾಗೂ ಮೇಲುಸ್ತುವಾರಿ ಸಮಿತಿ ಸದಸ್ಯ ಶಿವಯ್ಯ ಸ್ವಾಮಿ, ಜಿ.ಕೆ. ಫೌಂಡೇಷನ್ ಅಧ್ಯಕ್ಷ ಗುರುನಾಥ ಕೊಳ್ಳೂರ, ಎಪಿಎಂಸಿ ಮಾಜಿ ಅಧ್ಯಕ್ಷ ವಿಜಯಕುಮಾರ ಆನಂದೆ, ಏಕತಾ ಫೌಂಡೇಷನ್ ಅಧ್ಯಕ್ಷ ರವೀಂದ್ರಸ್ವಾಮಿ, ಮುಖಂಡರಾದ ಆಕಾಶ ಪಾಟೀಲ, ದೇವೇಂದ್ರ ಸೋನಿ, ವಿವೇಕ್ ವಾಲಿ, ವಿಜಯಕುಮಾರ ಸೋನಾರೆ, ಸಂಜೀವಕುಮಾರ ಕಿರಣ, ಪ್ರಶಾಂತ ಸೋಪಣ್ಣ, ವೀರಶೆಟ್ಟಿ ಚವ್ಹಾಣ್, ಪ್ರದೀಪ್ ನಾಟಿ–ಕರ್, ಬಸವರಾಜ ಮಡಿವಾಳ, ಸಂಘಟನೆ ಜಿಲ್ಲಾ ಘಟಕದ ಅಧ್ಯಕ್ಷ ಸುಭಾಷ್ ಕೆನಾಡೆ ಪಾಲ್ಗೊಳ್ಳುವರು.

ಸಂಘಟನೆ ರಾಜ್ಯ ಉಪಾಧ್ಯಕ್ಷ ಡಾ. ರವಿ ಸ್ವಾಮಿ ನಿರ್ಣಾ ಪ್ರಾಸ್ತಾವಿಕವಾಗಿ ಮಾತನಾಡುವರು. ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದವರಿಗೆ ಪ್ರಶಸ್ತಿ ಪ್ರದಾನ ಮಾಡಲಾಗುವುದು ಎಂದು ಕನ್ನಡ ಸೇನೆ ಕರ್ನಾಟಕ ಸಂಘಟನೆಯ ಬೀದರ್ ತಾಲ್ಲೂಕು ಅಧ್ಯಕ್ಷ ರಾಜಶೇಖರ ಮಂಗಲಪೇಟ್ ತಿಳಿಸಿದ್ದಾರೆ.

## ಬಿತ್ತನೆ ಬೀಜದ ಕೊರತೆಯಾಗದಂತೆ ಕ್ರಮ ವಹಿಸಿ: ಬಂಡೆಪ್ಪ ಖಾಶೆಂಪುರ್

ಬೀದರ್ ಜೂ.17: ಜಿಲ್ಲೆಯಲ್ಲಿ ಮಳೆಯಾಗಿರುವುದರಿಂದ ರೈತರು ಬಿತ್ತನೆ ಕಾರ್ಯದಲ್ಲಿ ತೊಡಗಿದ್ದು, ಈ ಸಂದರ್ಭದಲ್ಲಿ ರೈತರಿಗೆ ಬಿತ್ತನೆ ಬೀಜದ ಕೊರತೆ–ಯಾಗದಂತೆ ಕ್ರಮ ವಹಿಸಬೇಕು ಎಂದು ಮಾಜಿ ಸಚಿವರು, ಜೆಡಿಎಸ್ ಪಕ್ಷದ ಹಿರಿಯ ನಾಯಕರಾಗಿರುವ ಬಂಡೆಪ್ಪ ಖಾಶೆಂಪುರ್ ರವರು ತಿಳಿಸಿದ್ದಾರೆ.

ಬೀದರ್ ದಕ್ಷಿಣ ವಿಧಾನಸಭಾ ಕ್ಷೇತ್ರದ ಕಮಠಾಣಾ ಗ್ರಾಮದ ಹೊರವಲಯದಲ್ಲಿ ಖಾಶೆಂಪುರ್ ಪಿ ಗ್ರಾಮದ ರಸ್ತೆಗೆ ಹೊಂದಿಕೊಂಡಿರುವ ರೈತ ಸಂಪರ್ಕ ಕೇಂದ್ರಕ್ಕೆ ಸೋಮವಾರ ಭೇಟಿ ನೀಡಿದ ಅವರು, ಬಿತ್ತನೆ ಬೀಜ ಖರೀದಿಸಲು ನೂರಾರು ಸಂಖ್ಯೆಯಲ್ಲಿ ಸೇರಿದ್ದ



ರೈತರನ್ನು ಮಾತನಾಡಿಸಿ, ರೈತರ ಸಮಸ್ಯೆಗಳ ಬಗ್ಗೆ ತಿಳಿದುಕೊಂಡು, ಸಮಸ್ಯೆಯ ಬಗ್ಗೆ ಅಧಿಕಾರಿಗಳಿಂದ ಮಾಹಿತಿ ಪಡೆದು ಮಾತನಾಡಿದರು.

ರೈತರು ಬಿತ್ತನೆ ಬೀಜ ಖರೀದಿಸಲು ಬಂದಿದ್ದಾರೆ, ರೈತರ ಅವಶ್ಯಕತೆಗೆ ತಕ್ಕಂತೆ ಬಿತ್ತನೆ ಬೀಜ ಬಂದಿಲ್ಲ ಎಂಬುದು ತಿಳಿದು ಬಂದಿದೆ. ಇದಕ್ಕೆ ಕಾರಣ ಏನು ಎಂಬುದರ ಬಗ್ಗೆ ಇಲ್ಲಿನ ಸಂಬಂಧಿಸಿದ ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡಿದ್ದೇನೆ. ರೈತರಿಗೆ ಸಮಸ್ಯೆಯಾಗದಂತೆ ಬಿತ್ತನೆ ಬೀಜ ವಿತರಣೆ ಮಾಡಬೇಕು. ಬಿತ್ತನೆ ಬೀಜದ ಕೊರತೆ ಉಂಟಾದರೆ ಕೂಡಲೇ ಸಂಬಂಧಿಸಿದ ಹಿರಿಯ ಅಧಿಕಾರಿಗಳಿಗೆ ಮಾಹಿತಿ ನೀಡಿ, ತರಿಸಿಕೊಳ್ಳಬೇಕು. ರೈತರ ವಿಷಯದಲ್ಲಿ ಯಾವುದೇ ಕಾರಣಕ್ಕೂ ನಿರ್ಲಕ್ಷ್ಯ ಮಾಡಬಾರದು, ಸೂಕ್ತ ಸಮಯದಲ್ಲೇ ರೈತರ ಸಮಸ್ಯೆಗಳಿಗೆ ಸ್ಪಂದಿಸಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ತಿಳಿಸಿದ್ದೇನೆ ಎಂದು ಮಾಜಿ ಸಚಿವ ಬಂಡೆಪ್ಪ ಖಾಶೆಂಪುರ್ ರವರು ತಿಳಿಸಿದರು. ಮಳೆಯಾದ ಸಂದರ್ಭದಲ್ಲೇ ರೈತರು ಬಿತ್ತನೆ ಕಾರ್ಯ ಮಾಡಬೇಕು. ಭೂಮಿ ಹಸಿ ಕಳೆದುಕೊಂಡರೆ ಬಿತ್ತಲು ಆಗುವುದಿಲ್ಲ.

ಸರ್ಕಾರ ಈ ವಿಷಯವನ್ನು ಗಂಭೀರವಾಗಿ ತೆಗೆದುಕೊಳ್ಳಬೇಕು. ಬಿತ್ತನೆ ಬೀಜದ ಕೊರತೆ–ಯಾಗದಂತೆ, ಸಮಯಕ್ಕೆ ತಕ್ಕಂತೆ ಒದಗಿಸಿಕೊಡಬೇಕು ಎಂದು ಮಾಜಿ ಸಚಿವ ಬಂಡೆಪ್ಪ ಖಾಶೆಂಪುರ್ ರವರು ಸರ್ಕಾರಕ್ಕೆ ಒತ್ತಾಯಿಸಿದರು. ಈ ಸಂದರ್ಭದಲ್ಲಿ ಕೃಷಿ ಇಲಾಖೆಯ ಅಧಿಕಾರಿಗಳು, ಪ್ರಮುಖರಾದ ರಾಜಶೇಖರ್ ಜವಳೆ, ಅಶೋಕ್ ಕೊಡ್ಗೆ, ಬಿತ್ತನೆ ಬೀಜ ಖರೀದಿಸಲು ಆಗಮಿಸಿದ್ದ ರೈತರು ಸೇರಿದಂತೆ ಅನೇಕರು ಇದ್ದರು.

## ಮನದೀಪ್ ಕೌರ್ ನೇಮಕಕ್ಕೆ ಹೃತ್ಪೂರ್ವಕ ಅಭಿನಂದನೆ

ಮಲ್ಲಮ್ಮ ನುಡಿ ವಾರ್ತೆ ಬೀದರ. ಜೂ. 17 : ಕರ್ನಾಟಕ ರಾಜ್ಯ ಅಲ್ಪಸಂಖ್ಯಾತ ಆಯೋಗದ ಸದಸ್ಯನ್ನಾಗಿ ಮೊದಲ ಸಿಖ್ ಮಹಿಳೆ ಮನದೀಪ್ ಕೌರ್ ಅವರನ್ನು ನೇಮಕ ಮಾಡಿದಕ್ಕಾಗಿ ಶ್ರೀ ನಾನಕ ಝಿರಾ ಸಾಹೇಬ್ ಜಿಜಿಜಿಜಿಜಿಜಿ ಅಧ್ಯಕ್ಷ ಡಾ. ಎಸ್.ಬಲಬೀರ ಸಿಂಗ್ ಹೃತ್ಪೂರ್ವಕ ಅಭಿನಂದನೆ ಸಲ್ಲಿಸಿದ್ದಾರೆ.





ಕರ್ನಾಟಕದ ಸಿಖ್ ಸಮುದಾಯದ ಪರವಾಗಿ, ಕರ್ನಾಟಕ ಮೊದಲ ಸಿಖ್ ಮಹಿಳೆ ಸರ್ದಾರ್ನಿ ಮನದೀಪ್ ಕೌರ್ ಮನಪ್ರೀತ್ ಸಿಂಗ್ ಅವರಿಗೆ ಕರ್ನಾಟಕದ ರಾಜ್ಯ ಅಲ್ಪಸಂಖ್ಯಾತ ಆಯೋಗದ ಸದಸ್ಯೆಯಾಗಿ ಸೇವೆ ಸಲ್ಲಿಸಲು ಐತಿಹಾಸಿಕ ಅವಕಾಶವನ್ನು ನೀಡಿದಕ್ಕಾಗಿ ಕರ್ನಾಟಕದ ಮುಖ್ಯಮಂತ್ರಿ ಶ್ರೀ ಸಿದ್ಧರಾಮಯ್ಯಜಿ, ಕರ್ನಾಟಕದ ಉಪಮುಖ್ಯಮಂತ್ರಿ ಶ್ರೀ ಡಿ.ಕೆ.ಶಿವಕುಮಾರಜಿ ಮತ್ತು ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತ ವ್ಯವಹಾರಗಳ ಸಚಿವ ಬಿ.ಝಡ್. ಜಮೀರ್ ಅಹ್ಮದ್ ಖಾನ್‌ಜಿ ಅವರಿಗೆ ಹೃತ್ಪೂರ್ವಕ ಕೃತಜ್ಞತೆಯನ್ನು ಸಲ್ಲಿಸಿದ್ದಾರೆ.

ಈ ಹೆಜ್ಜೆಯು ಎಲ್ಲಾ ಅಲ್ಪಸಂಖ್ಯಾತ ಸಮುದಾಯದವರಿಗೆ ವೈವಿಧ್ಯತೆ, ಸಬಲೀಕರಣ ಮತ್ತು ಸಮಾನ ಪ್ರಾತಿನಿಧ್ಯಕ್ಕೆ ನಿಮ್ಮ ಆಳವಾದ ಬದ್ಧತೆಯನ್ನು ಬಿಂಬಿಸುತ್ತದೆ. ಇದು ಸಿಖ್ ಸಮುದಾಯಕ್ಕೆ ಮಾತ್ರವಲ್ಲದೆ ರಾಷ್ಟಕ್ಕೂ ಹೆಮ್ಮೆಯಾಗಿದೆ. ಇದು ಸಾರ್ವಜನಿಕ ಸೇವೆಯಲ್ಲಿ ಮಹಿಳೆಯರು ಮತ್ತು ಅಲ್ಪಸಂಖ್ಯಾತರ ಸಬಲೀಕರಣಕ್ಕೆ ದಾರಿ ಮಾಡಿಕೊಟ್ಟಂತಾಗಿದೆ ಎಂದು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬೀದರನಲ್ಲಿ ಕಿರಣ ಸಂಗೀತ ಪಾಠಶಾಲೆಯ ಉದ್ಘಾಟನೆ

ಮಲ್ಲಮ್ಮ ನುಡಿ ವಾರ್ತೆ ಬೀದರ. ಜೂ. 17 : ನಗರದ ಬಿಗ್ ಬಜಾರ್ ಹತ್ತಿರದ ಗುಂಪಾ ರಸ್ತೆಯಲ್ಲಿರುವ ವಿಜ್ಞಾನ ವರ್ಧನೀ ಪಬ್ಲಿಕ್ ಶಾಲೆಯಲ್ಲಿ ಭಾನುವಾರ ಸಾಯಂಕಾಲ ಕಿರಣ ಹಿರೇಮಠ ಸಾರಥ್ಯದಲ್ಲಿ ಸಂಗೀತ ಪಾಠ ಶಾಲೆಯ ಉದ್ಘಾಟನಾ ಸಮಾರಂಭ ಜರುಗಿತು.

ಬ್ರಹ್ಮಾಕುಮಾರಿ ಶಿವಶಕ್ತಿ ಭವನದ ಸಂಚಾಲಕಿ ರಾ–ಜಯೋಗಿನಿ ಬಿ.ಕೆ ಸುನಂದಾ ಬೆಹೇನಜಿ ಅವರು ಸರಸ್ವತಿ ಭಾವಚಿತ್ರಕ್ಕೆ ಪೂಜೆ ನೆರವೇರಿಸಿ, ದೀಪ ಬೆಳಗಿಸಿ ಸಮಾರಂಭ ಉದ್ಘಾಟಿಸಿ ಮಾತನಾಡಿದರು.

ಸಂಗೀತ ಮಾನವನ ಬದುಕಿನೊಂದಿಗೆ ಬೆಸೆದುಕೊಂಡಿದೆ. ಸಂತಸದ ಬದುಕಿಗೆ ಸಂಗೀತ ಅತೀ ಅವಶ್ಯಕ. ಸಂಗೀತದಲ್ಲಿ ದೇವರಿದ್ದಾನೆ ಎಂದು ನುಡಿದರು.

ಮುಖ್ಯ ಅತಿಥಿಗಳಾಗಿ ನಗರ ಸಭೆ ಸದಸ್ಯ ಶಶಿಧರ್ ಹೊಸಳ್ಳಿ ಮಾತನಾಡಿ, ಕಿರಣ ಹಿರೇಮಠ ಚಿಕ್ಕ ವಯಸ್ಸಿನಲ್ಲಿ ಸಂಗೀತದ ಬಗ್ಗೆ ಅಪಾರ ಜ್ಞಾನ ಪಡೆದಿದ್ದಾರೆ. ಅವರಿಂದ



ಅನೇಕ ಮಕ್ಕಳು ಸಂಗೀತ ಕಲಿತು ಕಲಾವಿದರಾಗಲಿ. ಮುಂದೆ ಇವರು ರಾಜ್ಯ, ರಾಷ್ಟ್ರ ಮಟ್ಟದಲ್ಲಿ ಬೆಳೆಯಲಿ ಎಂದು ಶುಭ ಹಾರೈಸಿದರು.

ಮುಖ್ಯ ಅತಿಥಿಗಳಾಗಿ ಮಾತನಾಡಿದ ಖ್ಯಾತ ಚಿಂತಕರಾದ ಮಾಣಿಕ ನೇಳಗಿಯವರು, ಮಾನವನು ಹುಟ್ಟಿನಿಂದ ಸಾಯುವ ವರೆಗೆ ಸಂಗೀತದೊಂದಿಗೆ ಬೆಸೆದಕೊಂಡಿದ್ದಾನೆ. ಕಿರಣ ಹಿರೇಮಠ ಅವರ ಸಂಗೀತ ಶಾಲೆ ನಾಡಿನಾದ್ಯಂತ ಹೆಸರು ಮಾಡಲಿ ಎಂದರು. ಹಿರಿಯ ಕಲಾವಿದ ಕಲ್ಯಾಣರಾವ ಪಾಟೀಲ ಹಾಗೂ ಪುಂಡಲೀಕರಾವ ಪಾಟೀಲ ಗುಮ್ಮಾ ಅವರಿಗೆ ವಿಶೇಷವಾಗಿ ಸನ್ಮಾನಿಸಲಾಯಿತು.

ಖ್ಯಾತ ಸಂಗೀತ ವಿದ್ವಾಂಸರಾದ ದತ್ತಾನಂದ ಮಹಾರಾಜರು ದಿವ್ಯ ಸಮ್ಮುಖ ವಹಿಸಿ, ಗಾಯನ ಪ್ರಸ್ತುತಪಡಿಸಿದರು. ಇದೇ ಸಂದರ್ಭದಲ್ಲಿ ರಾಜಯೋಗಿನಿ ಬಿ.ಕೆ ಪಾರ್ವತಿ ಅವರು ಕಿರಣ ಹಿರೇಮಠರಿಗೆ ಸನ್ಮಾನಿಸಿ ಶುಭ ಕೋರಿದರು.

ಆರಂಭದಲ್ಲಿ ಮಕ್ಕಳಾದ ನಕ್ಷಾ ಚಟ್ನಳ್ಳಿ ಹಾಗೂ ಸಂಗಡಿಗರು ಸ್ವಾಗತ ಗೀತೆ ಹಾಡಿದರು.

ವೀರಯ್ಯ ಸ್ವಾಮಿ ಪೂಜಾರಿ, ನೀಲಾಂಬಿಕಾ ಸಿದ್ದರಾಮಯ್ಯ ಹಿರೇಮಠ, ವಿಜಯ ರೆಡ್ಡಿ ವಕೀಲರು, ಸಂಗಮೇಶ ಬಿರಾದಾರ, ಕಲ್ಲಪ್ಪ ಮಡಿವಾಳ, ವಿರುಪಾಕ್ಷ ದೇವರು, ಮಡೆಪ್ಪಾ ಗಾರಂಪಳ್ಳಿ, ಕಲ್ಲಪ್ಪ ಮಡಿವಾಳ, ಕೋಕಿಲಾ ಮಹಾದೇವಪ್ಪ ಬಿರಾದರ ಹಾಗೂ ಇತರರುವ ವೇದಿಕೆಯಲ್ಲಿದ್ದರು. ಕಿರಣ ಹಿರೇಮಠ ಕಲಾ ಬಳಗದವರಿಂದ ಸಂಗೀತ ರಸಮಂಜರಿ ಜರಗಿತು.

ಖ್ಯಾತ ಕಲಾವಿದರಾದ ವಿನಾಯಕ ಚೌದರಿ, ರಾಜು ಬಂಪಳ್ಳಿ, ಕಲ್ಯಾಣರಾವ ಶಿಕ್ಷಕರು, ರೇವಣಪ್ಪಾ ಮುಲಗೆ, ತಬಲಾ ವಾದಕರಾದ ಪವನ ಚಂದ್ರಶೇಖರ ರೆಡ್ಡಿ, ಕಾಶಿನಾಥ ಭಂಗುರೆ ಗಾಯನ ಪ್ರಸ್ತುತಪಡಿಸಿದರು.

ಶಾಲೆಯ ಆಡಳಿತ ಅಧಿಕಾರಿ ಅಶ್ವಿನಿ ಚಿಟಮೆ, ಸರ್ವರನ್ನು ಸ್ವಾಗತಿಸಿದರು. ರಾಚಯ್ಯ ಸ್ವಾಮಿ ಕಾರ್ಯಕ್ರಮ ನಿರೂಪಿಸಿದರು. ಕಿರಣ ಹಿರೇಮಠ ವಂದಿಸಿದರು. ಸಂಗೀತ ತರಗತಿಗಳು ಪ್ರಾರಂಭ: ಕಿರಣ ಹಿರೇಮಠ ಅವರ ನೇತೃತ್ವದಲ್ಲಿ ನಡೆಯುತ್ತಿರುವ ಸಂಗೀತ ಪಾಠಶಾಲೆಯ ಪ್ರವೇಶ ಆರಂಭವಾಗಿದ್ದು, ಇಂದೆ ಭೇಟಿ ನೀಡಿ, ಪ್ರತಿ ದಿನ ಸಾಯಂಕಾಲ 5 ಗಂಟೆಯಿಂದ 8ರ ವರೆಗೆ ನಡೆಯುತ್ತದೆ. ಈ ಸುವರ್ಣ ಅವಕಾಶ ತಮ್ಮದಾಗಿಸಿಕೊಳ್ಳಲು ಇಂದೆ ಭೇಟಿ ನೀಡಿ. ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ:– 8073769651,9740334109 , 9483977902

# ಜು.21ರಂದು ಸರ್ಕಾರಿ ನೌಕರರ ಸಂಘದ ನೂತನ ಪದಾಧಿಕಾರಿಗಳ ಪದಗ್ರಹಣ

ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:–ಪಟ್ಟಣದ ಆರ್ಯ ಸಮಾಜ ಮಂದಿರದಲ್ಲಿ ಜೂನ್ 21ರಂದು ಮಧ್ಯಾಹ್ನ 1ಘಂಟೆಗೆ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ತಾಲೂಕ ಸಂಘದ ವತಿಯಿಂದ ಸಂವಿಧಾನ ಶಿಲ್ಪಿ ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಜಯಂತೋತ್ಸವ ಹಾಗೂ ನೂತನ ಪದಾಧಿಕಾರಿಗಳ ಪದಗ್ರಹಣ, 2024–25ನೇ ಸಾಲಿನಲ್ಲಿ ಎಸ್.ಎಸ್.ಎಲ್.ಸಿ. ಪಿಯುಸಿ ಪರೀಕ್ಷೆಯಲ್ಲಿ ತಾಲೂಕಿಗೆ ಅತಿ ಹೆಚ್ಚು ಅಂಕ ಪಡೆದ ಸರ್ಕಾರಿ ಶಾಲಾ ಕಾಲೇಜುಗಳ ವಿದ್ಯಾರ್ಥಿಗಳಿಗೆ ಅಭಿನಂದನಾ ಸಮಾರಂಭ ಹಾಗೂ ನಿವೃತ್ತ ಸರ್ಕಾರಿ ನೌಕರರಿಗೆ ಸನ್ಮಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಸರ್ಕಾರಿ ನೌಕರರ ಸಂಘದ ತಾಲೂಕಾಧ್ಯಕ್ಷ ರಾಜಶೇಖರ ಉಪ್ಪಿನ ತಿಳಿಸಿದ್ದಾರೆ. ಬುದ್ಧ, ಬಸವ, ಅಂಬೇಡ್ಕರ್ ಅವರ



ಭಾವಚಿತ್ರಕ್ಕೆ ತಹಶೀಲ್ದಾರ್ ಮಂಜುನಾಥ್ ಪಂಚಾಳ, ಲಕ್ಷ್ಮಿ ಬಿರಾದಾರ್, ವೆಂಕಟೇಶ್ ಗುಡಾಳ್, ಹುಸಾಮುದ್ದೀನ್ ಬಾಬಾ, ಬಾಷುಮಿಯಾ ಪೂಜೆ ಸಲ್ಲಿಸಿದ್ದಾರೆ. ಉದ್ಘಾಟಕರಾಗಿ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಸೋಮಶೇಖರ ಬಿರಾದಾರ್ ಚಿದ್ರಿ, ಅಧ್ಯಕ್ಷತೆ ರಾಜಶೇಖರ ಉಪ್ಪಿನ, ಅಧಿಕಾರ ಹಸ್ತಾಂತರ ನಿಕಟ ಪೂರ್ವ ಅಧ್ಯಕ್ಷ ರಾಜಕುಮಾರ ಬೇಲೂರೆ, ಉಪನ್ಯಾಸ ಡಾ. ಜಯಕುಮಾರ್ ಎ. ಸಿಂಧೆ, ಓಂಕಾರರೆಡ್ಡಿ ಸಲಗರ್, ಪ್ರಭು ತುಗಾಂವೆ, ದೇವಪ್ಪ ಚಾಂಬೋಳೆ, ರಾಜಕುಮಾರ ಮಾಳಗೆ, ಸುರೇಶ್ ಚನ್ನಶೆಟ್ಟಿ, ರಾಜೇಂದ್ರಕುಮಾರ ಗಂದಗೆ, ಡಾ. ವಿಜಯ ಹಿರಸಕ್ಕರ್ ಸೂರ್ಯಕಾಂತ ಬಿರಾದಾರ್, ಶಿವರಾಜ ಕಮಲಾಪುರೆ, ಚಂದ್ರಶೇಖರ ಬನ್ನಾಳೆ, ಪಂಡರಿ ಆಡೆ, ದಿಲೀಪಕುಮಾರ್, ನಾಗರಾಜ ಹಾವಣ್ಣ, ಸುನೀಲಕುಮಾರ್ ಕಸ್ತೂರೆ, ಅನೀಲಕುಮಾರ ಸಿಂಧೆ, ಅಶೋಕಕುಮಾರ ಮಹೇಂದ್ರಕ್ಕರ್, ರಾಜಪ್ಪ ಜಮಾದರ್, ಮಾರುತಿ ಜಟಗೊಂಡ, ಪಂಡಿತ ಕಲ್ಯಾಣಿ, ಪ್ರೇಮಿಳಾರೆಡ್ಡಿ, ಸಂಗಮೇಶ ಜವಾದಿ ಇವರುಗಳು ಭಾಗವಹಿಸಲ್ಲಿದ್ದಾರೆ. ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕೆಂದು ರಾಜಶೇಖರ ಉಪ್ಪಿನ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಹುಮನಾಬಾದ:ಜನಾರ್ಧನರೆಡ್ಡಿಯವರು ಓಬಳಾಪುರಂ ಅಕ್ರಮ ಗಣಿಗಾರಿಕೆ ಪ್ರಕರಣದಲ್ಲಿ 7 ವರ್ಷಗಳ ಶಿಕ್ಷೆಗೆ ಒಳಗಾಗಿದ್ದರು. ಜನಾರ್ಧನರೆಡ್ಡಿಯವರು ಬಿಡುಗಡೆಯಾಗಿದ ಹಿನ್ನಲೆಯಲ್ಲಿ ರೆಡ್ಡಿ ಸಮಾಜ ವತಿಯಿಂದ ಚಳಕಾಪುರ್ ಗ್ರಾಮದ ದೇವಸ್ಥಾನದಲ್ಲಿ ಸಂಕಟಮೋಚನ ಹನುಮನಿಗೆ, ಶ್ರೀ ಸೀಮಿನಾಗನಾಥ ಒಡೆಯ ದೇವಸ್ಥಾನದಲ್ಲಿ ವಿಷೇಶ ಪೂಜೆ ಸಲ್ಲಿಸಿ ಆಶೀರ್ವಾದ ಪಡೆದು ಕ್ಷೇತ್ರದ ಹಾಗೂ ನಾಡಿನ ಒಳಿತಿಗಾಗಿ ಭಕ್ತಿಯಿಂದ ಪ್ರಾರ್ಥನ ಸಲ್ಲಿಸಲಾಯಿತ್ತು. ಈ ಸಂದರ್ಭದಲ್ಲಿ ಈ ಸಂಧರ್ದಲ್ಲಿ ಸಂಜೀವ ರೆಡ್ಡಿ ಕಮಲಪೂರ್ ಬೆನಚಿಂಚೋಳ್ಳಿ, ಅವಿನಾಶ ರೆಡ್ಡಿ ಮರಖಲ್, ಮಹೇಶ ಹಡಪದ ಹಳ್ಳಿಖೇಡ (ಬಿ), ನಾಗನಾಥ ರೆಡ್ಡಿ ಅಮೀರಾಬಾದ ವಾಡಿ, ಆನಂದರೆಡ್ಡಿ ಅಮೀರಾಬಾದ್ ವಾಡಿ, ಅಭಿಷೇಕ ರೆಡ್ಡಿ ಮರಖಲ್ ಇತರರು ಉಪಸ್ಥಿತರಿದ್ದರು.

ಕಲ್ಯಾಣ ಕರ್ನಾಟಕ ಪಾರಂಪರಿಕ ವೈದ್ಯ ಪರಿಷತ್ (ರಿ)

# ಯಾದಗಿರಿ ಜಿಲ್ಲಾ ಘಟಕ ವತಿಯಿಂದ ಪರಿಸರ ದಿನಾಚರಣೆ ಆಚರಣೆ.!



ಮಲ್ಲಮ್ಮ ನುಡಿ ವಾರ್ತೆ

ಸುರಪುರ:ತಾಲೂಕಿನ ಹುಣಚೆಳ್ಳಿ ಗ್ರಾಮದ ದಸ್ತಾಗಿರಿ ಶಾನಿ ಮುತ್ಯ ದರ್ಗಾದಲ್ಲಿ

ವಿಶ್ವ ಪರಿಸರ ದಿನಾಚರಣೆ–ಯ ಅಂಗವಾಗಿ ಸಸಿ ನೆಡುವ ಕಾರ್ಯಕ್ರಮ:

ಪರಮಪೂಜ್ಯ ಶ್ರೀ ಬಸವ ಪ್ರಸಾದ್ ಮಹಾಸ್ವಾಮಿಗಳು ಜಗದ್ಗುರು ಶ್ರೀ ಶಿವಶಕ್ತಿ ಪೀಠ ಇರಕಲ್ ಮಠ ಗೌರವ ಅಧ್ಯಕ್ಷರು ಕಲ್ಯಾಣ ಕರ್ನಾಟಕ ಪಾರಂಪರಿಕ ವೈದ್ಯ ಪರಿಷತ್ ವೈದ್ಯಶ್ರೀ ಆನಂದ ಡಿ ಹೇರೂರು ಅಧ್ಯಕ್ಷರು ಕಲ್ಯಾಣ ಕರ್ನಾಟಕ ಪಾರಂಪರಿಕ ವೈದ್ಯ ಪರಿಷತ್, ವೈದ್ಯ ಶ್ರೀ ಕುಮಾರಸ್ವಾಮಿ ಕಸಬ ಲಿಂಗಸೂರು ಪ್ರಧಾನ ಕಾರ್ಯದರ್ಶಿಗಳು ಕಲ್ಯಾಣ ಕರ್ನಾಟಕ ಪಾರಂಪರಿಕ ವೈದ್ಯ ಪರಿಷತ್, ವೈದ್ಯ ಶ್ರೀ ರಾಜಾ ಚನ್ನಪ್ಪನಾಯಕ ಖಜಾಂಚಿಗಳು ಕಲ್ಯಾಣ ಕರ್ನಾಟಕ ಪಾರಂಪರಿಕ ವೈದ್ಯ ಪರಿಷತ್ ಪರಮಪೂಜ್ಯ ಶ್ರೀ ಸಿದ್ಧಲಿಂಗ ಸ್ವಾಮಿಗಳು ಗೌರವದ ಅಧ್ಯಕ್ಷರು ಕಲ್ಯಾಣ ಕರ್ನಾಟಕ ಪಾರಂಪರಿಕ ವೈದ್ಯ ಪರಿಷತ್ ಯಾದಗಿರಿ ಜಿಲ್ಲೆ ವೈದ್ಯ ಶ್ರೀ ಮಕ್ತುಂ ಪಟೇಲ್ ಹವಾಲ್ದಾರ್ ವಜ್ಜಲ್ ಯಾದಗಿರಿ ಜಿಲ್ಲಾ ಅಧ್ಯಕ್ಷರು ಕಲ್ಯಾಣ ಕರ್ನಾಟಕ ಪಾರಂಪರಿಕ ವೈದ್ಯ ಪರಿಷತ್ ವೈದ್ಯಶ್ರೀ ರಾಘವೇಂದ್ರ ಸುಗಂಧಿ ಯಾದಗಿರಿ ಜಿಲ್ಲೆಯ ಪ್ರಧಾನ ಕಾರ್ಯದರ್ಶಿಗಳು, ವೈದ್ಯಶ್ರೀಪತಿ ಆಚಾರ್ ಹುಣಸಗಿ ತಾಲೂಕ ಅಧ್ಯಕ್ಷರು ವೈದ್ಯ ಶ್ರೀ ಮಾರುತಿ ಶಾಸ್ತ್ರಿ ಮಾಳೂರು ಹುಣಸಗಿ

# ಜೂನ್ 20ರಂದು ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜೂನ್ 17 ಇಲ್ಲಿನ ಜೆಸ್ಕಾಂ ಗ್ರಾಮೀಣ ಕಾರ್ಯ ಮತ್ತು ಪಾಲನೆ ಉಪ ವಿಭಾಗದ ವ್ಯಾಪ್ತಿಗೆ ಬರುವ 110/11 ಕೆವಿ ವಡವಟ್ಟಿ ವಿದ್ಯುತ್ ಉಪ–ಕೇಂದ್ರದಲ್ಲಿ ತುರ್ತು ನಿರ್ವಹಣಾ ಕಾರ್ಯ ಹಮ್ಮಿಕೊಂಡಿರುವ ಪ್ರಯುಕ್ತ ಜೂನ್ 20ರ ಬೆಳಗ್ಗೆ 9 ಗಂಟೆಯಿಂದ ಸಂಜೆ 04 ಗಂಟೆವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದ್ದು, ಗ್ರಾಹಕರು ಸಹಕರಿಸುವಂತೆ ಜೆಸ್ಕಾಂ ಗ್ರಾಮೀಣ ಕಾರ್ಯ ಮತ್ತು ಪಾಲನೆ ಉಪ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಭಕ್ತಿಯ ಬೇರುಗಳು ಗಟ್ಟಿಯಾಗಿರಲಿ – ಹಾರಕೂಡ ಶ್ರೀ.



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ : ಜೂ 17– ಗುರುವಿನಲ್ಲಿ ಭಕ್ತಿಯ ಬೇರುಗಳು ಗಟ್ಟಿಯಾದಷ್ಟು ಜೀವನದ ವಿಕಾಸ ಸುಗಮವಾಗುತ್ತದೆ ಎಂದು ಹಾರಕೂಡದ ಪೂಜ್ಯ ಶ್ರೀ ಡಾ. ಚನ್ನವೀರ ಶಿವಾಚಾರ್ಯರು ನುಡಿದರು. ತಾಲೂಕಿನ ಹಾರಕೂಡ ಶ್ರೀಮಠದಲ್ಲಿ ಸಿರಗಾಪೂರ ಗ್ರಾಮದ ಮೂಲಗೆ ಪರಿವಾರದ ಹೆಣ್ಣು ಮಕ್ಕಳಿಂದ ಆಯೋಜಿಸಿದ ಗುರುವಂದನೆ ಹಾಗೂ 834ನೇ ತುಲಾಭಾರ ಸೇವೆ ಸಮಾರಂಭದ ಪಾವನ ಸನ್ನಿಧಾನವಹಿಸಿ ಮಾತನಾಡಿದ ಶ್ರೀಗಳು ಭಕ್ತಿ ಎಂಬುದು ಪರಿಶುದ್ಧ ಭಾವದ ನೈಜ ರೂಪವೆ ಹೊರತು ಆಡಂಬರದ ಪ್ರದರ್ಶನವಲ್ಲ.

ಭಕ್ತಿಯ ಆಳ ಅಗಲ ಪದಗಳಿಗೆ ನಿಲುಕದ ಅವಸ್ಥೆಯಾಗಿದ್ದು, ಮೇಲ್ಪಂಕ್ತಿ ಜೀವನಕ್ಕೆ ಭೂಮಿಕೆಯನ್ನು ಒದಗಿಸಿಕೊಡುತ್ತದೆ. ಗುರುವಿನ ಕುರಿತಾಗಿ ಯಾರು ಅಚಲವಾದ ಭಕ್ತಿ, ಶ್ರದ್ಧೆ, ನಿಷ್ಠೆಯನ್ನು ಹೊಂದಿರುತ್ತಾರೊ ಅವರ ಬಾಳು ಸುಭಿಕ್ಷೆಯಿಂದ ಕೂಡಿರುತ್ತದೆ.

ಸಿರಗಾಪೂರ ಗ್ರಾಮದ ಮೂಲಗೆ ಪರಿವಾರದ ಹೆಣ್ಣು ಮಕ್ಕಳು ಹಾರಕೂಡ ಪೀಠದ ಮೇಲೆ ಇಟ್ಟಿರುವ ಭಕ್ತಿ ಉಲ್ಲೇಖನೀಯವಾಗಿದೆ.

ಪರಿವಾರದ ಹಾಗೂ ಎಲ್ಲಾ ಭಕ್ತರಿಗೂ ಹಾರಕೂಡ ಚನ್ನಬಸವ ಶಿವಯೋಗಿಗಳ ಕೃಪಾಗಂಗೆ ಜಲಪಾತವಾಗಿ ಸುರಿಯಲಿ ಎಂದು ಶುಭ ಹಾರೈಸಿದರು.

ಪ್ರಿಯಾಂಕ ಗುರುಲಿಂಗಪ್ಪ ದೇಗಾಂವ, ಜ್ಯೋತಿ ಮುಗಳೆ, ಕಲ್ಲೇಶ್ ಮೂಲಗೆ ತಮ್ಮ ಅನಿಸಿಕೆ ವ್ಯಕ್ತಪಡಿಸಿದರು. ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯಿತಿ ನಿವೃತ್ತ ಉಪ ಕಾರ್ಯದರ್ಶಿ ಬಿ.ಕೆ. ಹಿರೇಮಠ, ಮಲ್ಲಿನಾಥ ಹಿರೇಮಠ ಹಾರಕೂಡ, ಶರಣಬಸಪ್ಪ ಮುಡಬೆ, ಕಾಶಪ್ಪ ದೇಗಾಂವ, ಸೋಮನಾಥ ಮೂಲಗೆ, ಶಂಭುಲಿಂಗಯ್ಯ ಮಠಪತಿ, ಮಹಾಂತಪ್ಪ ಶ್ರೀಚಂದ, ಮಹಾದೇವ ಪೊಲೀಸ್ ಪಾಟೀಲ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ಅಮೂಲ್ಯ ಕೊರವಿ ಹಾಗೂ ಅಕ್ಷತಾ ಮತ್ತು ಸಂಗಡಿಗರು ಸಾಂಸ್ಕೃತಿಕ ನೃತ್ಯ ಮಾಡಿದರು.

ನಂದಿತಾ ಮೇಳಕುಂದೆ ಸ್ವಾಗತಿಸಿ, ನಿರೂಪಿಸಿದರು.

ಕಾರ್ತಿಕ ಸ್ವಾಮಿ ಯಲದಗುಂಡಿ ಪ್ರಾರ್ಥನೆ ಹಾಡಿದರು.

ಅಧ್ಯಕ್ಷ ಉಪಾಧ್ಯಕ್ಷರ ಕೋಣೆಗೆ ವಿಶೇಷ ಪೂಜೆ

# ರಾಜಶೇಖರ ಪಾಟೀಲ ಅವರಿಗೆ ಕೆಟ್ಟ ಹೆಸರು ತರಲಾರದೆ ಪಟ್ಟಣದ ಅಭಿವೃದ್ಧಿಗೆ ಶ್ರಮಿಸುವೆ:– ಬಗ್ದಲಕ್ಕರ್





ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:–ಪುರಸಭೆ ಅಭಿವೃದ್ಧಿಗೆ ರಾಜಶೇಖರ ಪಾಟೀಲ್ ಅವರ ಕೊಡುಗೆ ಅಪಾರ, ನಾನು ಈ ಹಿಂದೆ ಎರೆಡು ಬಾರಿ ಲಿಂಗೈಕ್ಯ ಬಸವರಾಜ ಪಾಟೀಲ್ ಹಾಗೂ ಮಾಜಿ ಸಚಿವ ರಾಜಶೇಖರ ಪಾಟೀಲ್ ಇವರ ಕೃಪೆಯಿಂದ ಅಧ್ಯಕ್ಷನಾಗಿ ಪಟ್ಟಣದ ಅಭಿವೃದ್ಧಿ ಕೈಗೊಂಡಿರುವೆ, ಈಗ ಮತ್ತೆ ನನಗೆ 3ನೇ ಬಾರಿಗೆ ಮಾಜಿ ಸಚಿವ ರಾಜಶೇಖರ ಪಾಟೀಲ್ ಅವರು ಹಾಗೂ ಪುರಸಭೆ ಸದಸ್ಯರು ನನಗೆ ಅಧ್ಯಕ್ಷ ಹುದ್ದೆಗೆ ಆಯ್ಕೆ ಮಾಡಿ ಅಧ್ಯಕ್ಷ ಸ್ಥಾನದ ಅಧಿಕಾರ ಕೊಟ್ಟಿದ್ದಾರೆ. ಅವರ ಹೆಸರಿಗೆ ಯಾವುದೇ ಕಪ್ಪು ಚುಕ್ಕೆ ತರದೇ ಒಳ್ಳೆಯ ಆಡಳಿತ ನೀಡುತ್ತೇನೆಂದು 3ನೇ ಬಾರಿಗೆ ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡ ದಿಲೀಪಕುಮಾರ್ ಬಗ್ದಲಕ್ಕರ್ ಅಧ್ಯಕ್ಷ, ಉಪಾಧ್ಯಕ್ಷರ ಕೋಣೆಗೆ ವಿಶೇಷ ಪೂಜೆ ಸಲ್ಲಿಸಿ ಪತ್ರಕರ್ತರೊಂದಿಗೆ ಮಾತನಾಡುತ್ತ ತಿಳಿಸಿದರು. ಅಧ್ಯಕ್ಷ ಉಪಾಧ್ಯಕ್ಷ ಹಾಗೂ ಸರ್ವ ಸದಸ್ಯರ ಸಹಕಾರದಿಂದ ಪಟ್ಟಣದ ಅಭಿವೃದ್ಧಿಗೆ ಶ್ರಮಿಸುತ್ತೇವೆ ಎಂದರು. ನನಗೆ ಹಾಗೂ ನಸೀರ್ ಖಾನಗೆ ಅಧ್ಯಕ್ಷ ಉಪಾಧ್ಯಕ್ಷರಾಗಿ ಆಯ್ಕೆ ಮಾಡಿದಕ್ಕೆ ವಿಶೇಷವಾಗಿ ಮಾಜಿ ಸಚಿವ ರಾಜಶೇಖರ ಪಾಟೀಲ್, ವಿಧಾನ ಪರಿಷತ್ ಸದಸ್ಯರಾದ ಡಾ. ಚಂದ್ರಶೇಖರ್ ಪಾಟೀಲ್, ಭೀಮರಾವ ಪಾಟೀಲ್, ಡಿಸಿಸಿ ಬ್ಯಾಂಕ್ ಜಿಲ್ಲಾ ಉಪಾಧ್ಯಕ್ಷ ಅಭಿಷೇಕ ಪಾಟೀಲ್ ಇವರುಗಳಿಗೆ ಈ ಮೂಲಕ ಕೃತಜ್ಞತೆಗಳು ಸಲ್ಲಿಸಿತ್ತೇನೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಪುರಸಭೆ ಉಪಾಧ್ಯಕ್ಷ ಮಹಮ್ಮದ್ ನಸೀರ್ ಖಾನ, ತಹಶೀಲ್ದಾರ್ ಮಂಜುನಾಥ್ ಪಂಚಾಳ, ಪುರಸಭೆ ಮುಖ್ಯಾಧಿಕಾರಿ ಹುಸಾಮುದ್ದೀನ್ ಬಾಬಾ, ಸದಸ್ಯರಾದ ವಿಶಾಲ ಬೋರಳೆ, ಬಾಬಾ ಆರ್.ಸಿ.ಸಿ., ರೇವಣಪ್ಪ ಭುತ್ತಾಳೆ, ಲಕ್ಷ್ಮಿಬಾಯಿ ಗಡಮಿ, ಪ್ರಮುಖರಾದ ಭಾಸ್ಕರ್, ಶಾಮರಾವ ಭುತ್ತಾಳೆ, ಸುಭಾಷ ಕುಂಬಾರ್, ಷರೀಫ್, ಸಚಿನ ಮಠಪತಿ, ಮೋಜೆಸ್ ಮಿತ್ರಾ, ಶರಣು ಗಡಮಿ, ಪ್ರವೀಣ ಇಂಜಿನಿಯರ್, ಜಾಫರ್ ಖಾನ್, ಮಸ್ತಾನ, ಸಿಬ್ಬಂದಿಗಳಾದ ಚಿದಾನಂದ ಪತ್ರಿ, ಸಂತೋಷ ಬಿರಾದಾರ್, ಖಾಜಾಮಿಯಾ, ರವಿಕುಮಾರ ಸ್ವಾಮಿ, ಸಂತೋಷ ಹಳ್ಳಿಖೇಡ, ಬಸವರಾಜ ಬಿರಾದಾರ್, ಕವಿತಾ, ಸೊರೋಜನಿ, ಅಶ್ವಿನಿ ಚವ್ಹಾಣ, ಮಂಜುಳಾ, ಮಲ್ಲಮ್ಮ, ಸಚಿನ ಡಾಂಗೆ, ನಥನಿಲ್, ರಾಜು ತೆಲಂಗ, ಧನರಾಜ ನೆಳಕುಡಕ್ಕರ್, ಭೀಮಶಾ ಕಾಂಬಳೆ, ಬಕ್ಕಣ್ಣ ಜಾಬಾ, ನಾಗೇಂದ್ರ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಜನಪ್ರತಿನಿಧಿಗಳು, ಅಧಿಕಾರಿಗಳೊಂದಿಗೆ ಜರುಗಿದ ಸಮಾಲೋಚನಾ ಸಭೆ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ:–ಗ್ರಾಮ ಪಂಚಾಯತಿಗೆ ನಿಗದಿಪಡಿಸಿ ಬಿಡುಗಡೆಯಾದ ಅನುದಾನವು ಸದ್ಬಳಕೆಯಾಗುವಲ್ಲಿ ಎಲ್ಲರ ಪಾತ್ರ ಮುಖ್ಯವಾಗಿದೆಂದು ರಾಜ್ಯ 5ನೇ ಹಣಕಾಸು ಆಯೋಗದ ಅಧ್ಯಕ್ಷರಾದ ಡಾ.ಸಿ ನಾರಾಯಣಸ್ವಾಮಿ ಹೇಳಿದರು.

ಕಿನ್ನಾಳ ಗ್ರಾಮ ಪಂಚಾಯತಿಗೆ ರಾಜ್ಯ 5ನೇ ಹಣಕಾಸು ಆಯೋಗ ಅಧ್ಯಕ್ಷರು ಹಾಗು ಸದಸ್ಯರ ಒಳಗೊಂಡ ತಂಡವು ಚುನಾಯಿತ ಪ್ರತಿನಿಧಿಗಳೊಂದಿಗೆ ಜರುಗಿದ ಸಮಾಲೋಚನಾ ಸಭೆಯ ಅಧ್ಯಕ್ಷತೆಯನ್ನು ವಹಿಸಿಕೊಂಡು ಮಾತನಾಡಿದರು.

ರಾಜ್ಯ ಸರ್ಕಾರವು ಗ್ರಾಮ ಪಂಚಾಯತಿಗೆ ಹಲವು ಯೋಜನೆಗಳ ಮೂಲಕ ಅನುದಾನವನ್ನು ಬಿಡುಗಡೆ ಮಾಡುತ್ತಿದ್ದು ಗ್ರಾಮ ಪಂಚಾಯತಿಗೆ ಅಭಿವೃದ್ದಿಗೆ ನಿಗದಿಪಡಿಸಿದ ಮಾರ್ಗಸೂಚಿಯನ್ವಯ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ಕರೆ ನೀಡಿದರು. ಗ್ರಾಮ ಪಂಚಾಯತಿಯಿಂದ ಸ್ವಂತ ಸಂಪನ್ಮೂಲ ಮೂಲಕ ಅಭಿವೃದ್ದಿ ಕಾಮಗಾರಿಗಳನ್ನು ಕೈಗೊಳ್ಳಿರಿ. ಗ್ರಾಮ ಪಂಚಾಯತಿ ಬಜೆಟ್




ಮೂಲಕ ಅನುದಾನವನ್ನು ಖರ್ಚು ಭರಿಸತಕ್ಕದ್ದು. ಗ್ರಾಮ ಪಂಚಾಯತಿಯ ಎಲ್ಲಾ ಕೊಳವೆಬಾವಿಗಳ ವಿದ್ಯುತ್ ಬಿಲ್ ಪಾವತಿಗಾಗಿ ಗ್ರಾಮೀಣಾಭಿವೃದ್ದಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಜೆಸ್ಕಾಂ ಇಲಾಖೆಯೊಂದಿಗೆ ಮರುಹೊಂದಾಣಿಕೆ ಮಾಡಿಕೊಳ್ಳಲು ಅನುದಾನವು ನೇರವಾಗಿ ಜೆಸ್ಕಾಂ ಇಲಾಖೆಗೆ ಬಿಡುಗಡೆಯಾಗಿರುತ್ತದೆ. ಪ್ರತಿ ತಿಂಗಳು ತಾಲೂಕ ಹಂತದಲ್ಲಿ ಕಾರ್ಯನಿರ್ವಾಹಕ ಅಧಿಕಾರಿಗಳ ನೇತೃತ್ವದಲ್ಲಿ ಸಭೆ ಜರುಗಿಸಿ ಈ ಕುರಿತು ಪರಿಶೀಲನೆಯಾಗಬೇಕೆಂದರು. ಒಂದು ವೇಳೆ ಜೆಸ್ಕಾಂನೊಂದಿಗೆ ವಿದ್ಯುತ್ ಬಿಲ್ಲು ಪಾವತಿ ಮರು ಹೊಂದಾಣಿಕೆಯಾಗಿರದೇ ಇದ್ದಲ್ಲಿ ಕೂಡಲೇ ಕ್ರಮವಹಿಸುವಂತೆ ಪಂಚಾಯತ ಅಭಿವೃದ್ದಿ ಅಧಿಕಾರಿಗೆ ಸೂಚಿಸಿದರು.

ಗ್ರಾಮ ಪಂಚಾಯತಿ ಸದಸ್ಯರಿಂದ ಅನುದಾನ ಬೇಡಿಕೆಗೆ ಮನವಿ:– ಈ ಹಿಂದೆ ರಾಜಧನ, ಮುದ್ರಾಂಕ ಶುಲ್ಕ, ಕುಡಿಯುವ ನೀರು ನಿರ್ವಹಣೆಗಾಗಿ ಪ್ರತ್ಯೇಕವಾಗಿ ಅನುದಾನ ಬಿಡುಗಡೆಯಾಗುತ್ತಿತ್ತು. ಅದರಂತೆ ಅನುದಾನ ಬಿಡುಗಡೆ ಮಾಡುವಂತೆ ಆಯೋಗದ ತಂಡದ ಮುಂದೆ ಗ್ರಾಮ ಪಂಚಾಯತಿ ಸದಸ್ಯರು ಮನವರಿಕೆ ಮಾಡಿದರು. ಗ್ರಾಮ ಪಂಚಾಯತಿಗೆ ನೀರಗಂಟಿ ಹುದ್ದೆ ಹೆಚ್ಚಿಸಬೇಕೆಂದು ತಿಳಿಸಿದರು. ಕಿನ್ನಾಳ ಗ್ರಾಮವು ಬಹುದೊಡ್ಡ ಗ್ರಾಮವಾಗಿದ್ದು ನೀರಗಂಟಿಗಳಿಂದ ಕೊಳವೆ ಬಾವಿಗಳ ಮೂಲಕ ಪ್ರತಿ ಮನೆಗೆ ಕುಡಿಯುವ ನೀರು ಸರಬರಾಜು ಆಗುವಂತೆ ಕ್ರಮವಹಿಸಲು ಅನುಕೂಲವಾಗುತ್ತದೆ ಎಂದರು. ಇದೇ ಸಂದರ್ಭದಲ್ಲಿ ವಿವಿಧ ಯೋಜನೆಗಳ ಅನುದಾನದಲ್ಲಿ ಗ್ರಾಮ ಪಂಚಾಯತಿಯಿಂದ ಕೈಗೊಂಡ ಅಭಿವೃದ್ದಿ ಕಾಮಗಾರಿಗಳ ಪಿಪಿಟಿಯನ್ನು ಆಯೋಗದ ತಂಡದ ಮುಂದೆ ಗ್ರಾಮ ಪಂಚಾಯತಿ ಪಿಡಿಒ ಪ್ರಸುತಪಡಿಸಿದರು.

ಈ ಸಂದರ್ಭದಲ್ಲಿ ರಾಜ್ಯ 5ನೇ ಹಣಕಾಸು ಆಯೋಗದ ಸದಸ್ಯರಾದ ಮೊಹಮದ ಸನಾವುಲ್ಲಾ ಭಾ.ಆ.ಸೇ(ನಿವೃತ್ತ), ಆರ್ ಎಸ್ ಪೋಂಡೆ, ರಾಜ್ಯ 5ನೇ ಹಣಕಾಸು ಆಯೋಗದ ಸಮಾಲೋಚಕರಾದ ಎಂ.ಕೆ ಕೆಂಪೇಗೌಡ, ಸಿ.ಜಿ.ಸುಪ್ರಸನ್ನ, ರಾಜ್ಯ 5ನೇ ಹಣಕಾಸು ಆಯೋಗದ ಅಧ್ಯಕ್ಷರ ಆಪ್ತ ಕಾರ್ಯದರ್ಶಿ ಕೆಯಾಲಕ್ಕಿಗೌಡ, ಜಿಲ್ಲಾ ಪಂಚಾಯತ ಮುಖ್ಯ ಯೋಜನಾಧಿಕಾರಿ ಡಿ.ಮಂಜುನಾಥ, ಗ್ರಾಮ ಪಂಚಾಯತ ಅಧ್ಯಕ್ಷರಾದ ಶ್ವೇತಾ ಡಂಬಳ, ಉಪಾಧ್ಯಕ್ಷರಾದ ದುರಗಪ್ಪ ಡಂಬರ, ತಾಲೂಕ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ದುಂಡಪ್ಪ ತುರಾದಿ, ತಹಶೀಲ್ದಾರ ವಿಠ್ಠಲ್ ಚೌಗಲಾ ತಾಲೂಕ ಪಂಚಾಯತ ಸಹಾಯಕ ನಿರ್ದೇಶಕ ಮಹೇಶ್, ತಾಲೂಕ ಯೋಜನಾಧಿಕಾರಿ ರಾಜೇಸಾಬ ನದಾಫ್, ಪಂಚಾಯತ ಅಭಿವೃದ್ದಿ ಅಧಿಕಾರಿ ಪರಮೇಶ್ವರಯ್ಯ ತೆಳಗಡೆಮಠ, ಕಾರ್ಯದರ್ಶಿ ನೀಲಮ್ಮ, ದ್ವಿತಿಯ ದರ್ಜೆ ಲೆಕ್ಕ ಸಹಾಯಕ ತಾಜುದ್ದೀನ್, ಗ್ರಾಮ ಪಂಚಾಯತಿ ಸರ್ವ ಸದಸ್ಯರು, ಜೆಸ್ಕಾಂ ಇಲಾಖೆ, ಆರೋಗ್ಯ ಇಲಾಖೆ, ಶಿಕ್ಷಣ ಇಲಾಖೆಯ ಸಿಬ್ಬಂದಿಗಳು ಹಾಗು ಗ್ರಾಮ ಪಂಚಾಯತ ಸಿಬ್ಬಂದಿಗಳು ಹಾಜರಿದ್ದರು.

# ಬಹುಮುಖ ಪ್ರತಿಭಾ ಸಂಪನ್ನರಾಗಿದ್ದ ದಿ.ಸಗರ ಕೃಷ್ಣಾಚಾರ್ಯರು: ಲಿಂಗಣ್ಣ ಪಡಶೆಟ್ಟಿ

ಮಲ್ಲಮ್ಮ ನುಡಿ ವಾರ್ತೆ

ಶಹಾಪುರ: ಶಿಕ್ಷಣ ಸೇವೆಯ ಜೊತೆಗೆ ಸಾಹಿತ್ಯದ ಕೃಷಿ ಮಾಡಿ, ಸಗರನಾಡಿನ ಸಾಹಿತ್ಯಕ್ಕೆ ಹೊಸ ಬೆಳಕು ನೀಡಿ ಸಾಹಿತ್ಯದ ಅಭಿರುಚಿಗೆ ಸಾಕ್ಷಿಯಾದವರು ದಿ.ಸಗರ ಕೃಷ್ಣಾಚಾರ್ಯರು ಎಂದು ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಲಿಂಗಣ್ಣ ಪಡಶೆಟ್ಟಿ ತಿಳಿಸಿದರು.




ನಗರದ ಎಸ್‌ಎಂಸಿ ಜೈನ್ ಬಿಇಡಿ ಕಾಲೇಜಿನಲ್ಲಿ ಕರ್ನಾಟಕ ಸಾಹಿತ್ಯ ಅಕಾಡೆಮಿ ಬೆಂಗಳೂರು ಸಹಯೋಗದಲ್ಲಿ ಚಕೋರ ಸಾಹಿತ್ಯ ವಿಚಾರ ವೇದಿಕೆಯಡಿಯಲ್ಲಿ ಆಯೋಜಿಸಿದ್ದ ಸಗರನಾಡಿನ ಹಿರಿಯ ಲೇಖಕ ದಿ.ಸಗರ ಕೃಷ್ಣಾಚಾರ್ಯರ ಬದುಕು ಬರಹ ಕುರಿತು ವಿಶೇಷ ಉಪನ್ಯಾಸ ನೀಡಿದ ಅವರು, ಚಿಕ್ಕಂದಿನಲ್ಲಿಯೇ ಸಣ್ಣ ಕವಿತೆಗಳು ರಚನೆ ಮಾಡುತ್ತಾ, ಸಾಹಿತ್ಯದ ರುಚಿ ಹಚ್ಚಿಕೊಂಡು ಮುಂದೆ ಶಿಕ್ಷಕರಾಗಿ, ಮುಖ್ಯಗುರುಗಳಾಗಿ, ಪ್ರಾಚಾರ್ಯರಾಗಿ, ಶಿಕ್ಷಣ ಇಲಾಖೆಯ ಅಧಿಕಾರಿಯಾಗಿ ನಾಡಿಗೆ ಉತ್ತಮ ಕೊಡುಗೆ ನೀಡಿ ಸಾವಿರಾರು ಶಿಷ್ಯಂದಿರನ್ನು ಸಜ್ಜುಗೊಳಿಸಿದ ಕೀರ್ತಿ ಅವರಿಗೆ ಸಲ್ಲುತ್ತದೆ. ದ.ರಾ.ಬೇಂದ್ರೆ, ಡಾ.ಹಾಮಾನಾಯಕ, ಜಿ.ಎಸ್.ಶಿವರುದ್ರಪ್ಪನವರು ಸೇರಿದಂತೆ ನಾಡಿನ ಸಾಧಕರ ಜೊತೆಯಲ್ಲಿ ಬೆರೆತು, ಸಗರ ನಾಡಿನ ಕೀರ್ತಿ ಹೆಚ್ಚಿಸಿದ್ದಾರೆ ಇಂದಿಗೂ ರಂಗಂಪೇಟೆಯ ಕನ್ನಡ ಸಾಹಿತ್ಯ ಸಂಘ ದಿ.ಕೃಷ್ಣಾಚಾರ್ಯ ಕೊಡುಗೆಯನ್ನು ಮರೆತಿಲ್ಲ, ಅಂದಿನ ನಿಜಾಮ ಶಾಹಿ ಕಾಲಘಟ್ಟದಲ್ಲಿ ಕನ್ನಡ ಕಟ್ಟಿದವರು ನಮ್ಮೆಲ್ಲರಿಗೂ ಪ್ರೇರಣೆ ಎಂದರು. ಹಿರಿಯ ಸಾಹಿತಿ ಕರ್ನಾಟಕ ಸಾಹಿತ್ಯ ಅಕಾಡೆಮಿ ಸದಸ್ಯರಾದ ಡಾ.ಸಿದ್ದರಾಮ ಹೊನ್ಕಲ್ ಆಶಯ ನುಡಿಗಳನ್ನುಡುತ್ತಾ, ಸಾಹಿತ್ಯ ಕೃಷಿಯಲ್ಲಿ ದಿ.ಕೃಷ್ಣಾಚಾರ್ಯರ ಮಾರ್ಗದರ್ಶನದಲ್ಲಿ ನಾವುಗಳೆಲ್ಲ ಸಾಹಿತ್ಯದಲ್ಲಿ ಗಟ್ಟಿತನ ಬೆಳೆಸಿಕೊಳ್ಳಲು ಸಾಧ್ಯವಾಯಿತು, ಕನ್ನಡ ಭಾಷೆಯನ್ನು ಉಳಿಸಿ ಬೆಳೆಸುವಲ್ಲಿ ಮಂದಾಕಿನಿ ಪತ್ರಿಕೆ ಮೂಲಕ ಸಾಕ್ಷಿಯಾದರು ಅವರ ಆತ್ಮಕಥೆ, ಕವನ ಸಂಕಲನ, ಪ್ರಬಂಧಗಳು ,ಭಕ್ತಿಗೀತೆಗಳು ಶೈಕ್ಷಣಿಕ ಬಲವರ್ಧನೆಯ ಲೇಖನಗಳು ಜೊತೆಗೆ ಉರ್ದು ಪ್ರಬಂಧಗಳು ಅವರ ಸಾಹಿತ್ಯ ಸಾಧನೆಗೆ ಹಿಡಿದ ಕನ್ನಡಿಯಾಗಿದೆ ಎಂದರು. ಇದೇ ಸಂದರ್ಭದಲ್ಲಿ ಮುಖ್ಯ ಅತಿಥಿಯಾಗಿದ್ದ ನಾರಾಯಣಚಾರ್ಯ ಸಗರ, ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಂಶುಪಾಲರಾದ ಶಬಾನ ಮಾತನಾಡಿದರು. ಕಲಾನಿಕೇತನ ಟ್ರಸ್ಟ್ ಅಧ್ಯಕ್ಷ ಬಸವರಾಜ ಶಿಣ್ಣೂರ ಕಾರ್ಯಕ್ರಮ ನಿರೂಪಿಸಿದರು, ದಿ.ಸಗರ ಕೃಷ್ಣಾಚಾರ್ಯರ ಭಾವಚಿತ್ರಕ್ಕೆ ವಿಶೇಷವಾಗಿ ಗೌರವ ಸಮರ್ಪಿಸಲಾಯಿತು. ಈ ಸಂದರ್ಭದಲ್ಲಿ ಉಪನ್ಯಾಸಕರಾದ ಶರಣು ಭಾವಿಕಟ್ಟಿ, ಅನ್ನಪೂರ್ಣ ಮುಂಡಾಸ, ಸಂಪಿಗೆ, ಮಾರುತಿ, ಅಶೋಕ ಸೇರಿದಂತೆ ಇನ್ನಿತರರು ಉಪಸಿತರಿದ್ದರು. ಸಂಗೀತ ಪ್ರಾರ್ಥಿಸಿದರು, ದೇವರಾಜ ದೇಸಾಯಿ ಸ್ವಾಗತಿಸಿದರು. ಬಿಎಡಿ ಕಾಲೇಜಿನ ಪ್ರಥಮ, ದ್ವಿತೀಯ ಸೆಮಿಸ್ಟರ್ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

# ಗೋಡಿಟೆಕ್ನಾಲಜಿಸ್ ಸಂಸ್ಥಾಪಕ ಪ್ರದೀಪಕುಮಾರ ಅವರಿಗೆ 'ಸೇವಾ ಸಾಧಕ' ಪ್ರಶಸ್ತಿ ಪ್ರದಾನ..!

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಪ್ರೆಸ್ ಕ್ಲಬ್ ಕೌನ್ಸಿಲ್ (ರಿ) ಬೆಂಗಳೂರು ಇದರ ಸಂಘಟನೆ ಉದ್ಘಾಟನೆ ಮತ್ತು ಅಮೃತ ಘಳಿಗೆ ಕವನ ಸಂಕಲನ ಬಿಡುಗಡೆ ಕಾರ್ಯಕ್ರಮವು ಬೆಂಗಳೂರಿನ ಕೇಂದ್ರ ಕನ್ನಡ ಸಾಹಿತ್ಯ ಪರಿಷತ್ ಭವನದಲ್ಲಿ ಆಯೋಜಿಸಲಾಗಿತ್ತು.

ಕಾರ್ಯಕ್ರಮಗಳ ಉದ್ಘಾಟನೆಯನ್ನು ರಾಜ್ಯ ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿ ವಿಶ್ರಾಂತ ನ್ಯಾಯಧೀಶರಾದ ಅರಳಿ ನಾಗರಾಜ, ನೆಲಮಂಗಲ ಶಾಸಕ ಎನ್.ಶ್ರೀನಿವಾಸ ಜಂ–ಟಿಯಾಗಿ ಕಾರ್ಯಕ್ರಮವನ್ನು ಉದ್ಘಾಸಿದರು. ಲಕ್ಷ್ಮೀ ಶ್ರೀನಾವಸ ಗೂರೂಜಿ ಸಾನಿಧ್ಯ ವಹಿಸಿದ್ದರು. ರಾ.ಕ.ಸಾ.ಪ ಅಧ್ಯಕ್ಷ ನಾಡೋಜ ಡಾ. ಮಹೇಶ್ ಜೋಶಿ ಹಾಗೂ ರಾ.ಪ್ರೆಸ್ ಕ್ಲಬ್ ಕೌನ್ಸಿಲ್ ಅಧ್ಯಕ್ಷ ಆರ್.ರಾಘವೇಂದ್ರಾಚಾರ್ ಅಧ್ಯಕ್ಷತೆಯನ್ನು ವಹಿಸಿದ್ದರು. ಸಂಘಟಕರಾದ ಡಾ.ಎಸ್. ಬಾಲಾಜಿ ಹಾಗೂ ಕನ್ನಡ ಚಲನಚಿತ್ರ ನಟ ಅಹಿಂಸಾ ಚೇತನ್ ಅವರು "ಅಮೃತ ಘಳಿಗೆ" ವಿನೂತನವಾದ ಕವನ ಸಂಕಲವನ್ನು ಬಿಡುಗಡೆಗೊಳಿಸಿದರು. ತದನಂತರ ನಡೆದ ರಾಜ್ಯದ ಸಾಧಕರನ್ನು ಗುರುತಿಸುವ ಕಾರ್ಯಕ್ರಮದಲ್ಲಿ ಕೊಪ್ಪಳದ ಯುವ ಪತ್ರಕರ್ತ ಹಾಗೂ ಗೋಡಿ ಟೆಕ್ನಾಲಜಿ ಸಂಸ್ಥಾಪಕ "ಪ್ರದೀಪಕುಮಾರ ಗೋಡಿ" ಅವರನ್ನು ವಿಶೇಷ ಸಾಧಕರೆ–ಂದು ಪರಿಗಣಿಸಿ, ಪ್ರಶಸ್ತಿ ಪ್ರದಾನ ಮಾಡಿ ಸನ್ಮಾನಿಸಲಾಯಿತು. ಪ್ರದೀಪಕುಮಾರ ಗೋಡಿ ಅವರ ಸೇವಾನಿಷ್ಠೆಯ "ಸೇವಾ ಸಾಧಕ" ಎಂದು ತಿಳಿದು ನಾಡಿನ ವಿವಿಧ ಸಂಘಟನೆ ಮತ್ತು ಅವರ ಸ್ನೇಹ ವಲಯ ಅಭಿನಂದನೆ ವ್ಯಕ್ತಪಡಿಸಿದೆ.




ಕಲಬುರಗಿ: ವಕ್ಸ್ ಕಾಯಿದೆ ತಿದ್ದುಪಡಿಗೆ ವಿರೋಧಿಸಿ, ವಿವಿಧ ಬೇಡಿಕೆಗಳಿಗೆ ಆಗ್ರಹಿಸಿ ಇಂದು ಆಲ್ ಇಂಡಿಯಾ ಮುಸ್ಲಿಂ ಪರ್ಸನಲ್ ಲಾ ಬೋರ್ಡ್– ಕುಲ್ ಜಮಾತಿ ಇತ್ತೆಹಾದ್ ಇ ಮಿಲ್ಲತ್ ಗುಲಬರ್ಗ ಸಂಘಟನೆಯಿಂದ ಜಿಲ್ಲಾಧಿಕಾರಿ ಕಚೇರಿ ಮುಂದೆ ಪ್ರತಿಭಟನೆ ನಡೆಸಿ ಜಿಲ್ಲಾಡಳಿತದ ಮೂಲಕ ರಾಷ್ಟ್ರಪತಿಗಳಿಗೆ ಮನವಿ ಸಲ್ಲಿಸಲಾಯಿತು.ಮೊಹಮ್ಮದ್ ಆ. ಮೊಹಮ್ಮದ್ ಅಸ್ಗರ್ ಚುಲಬುಲ್,ಮುಸ್ತಾಕ್ ಇಂಜಿನಿಯರ್, ಮುಬೀನ್ ಅಹ್ಮದ್, ರಿಜ್ವಾನೂರ್ ರೆಹಮಾನ್ ಸಿದ್ದಕಿ, ಜಬ್ಬಾರ್ ಗೋಳಾ, ಲಕ್ಷ್ಮೀಕಾಂತ ಹುಬ್ಬಿ,ನಜೀರ್ ಅಹ್ಮದ್ ಮುತವಲ್ಲಿ,ಸಂಜಯ್ ಮಾಕಲ್.ಜಾಕೀರ್ ಹುಸೇನ್ ಶರೀಫ್ ಮಜಾರಿ ಸೇರಿದಂತೆ ಇತರರಿದ್ದರು.

# ಸಂಘಟನೆ ಕಚೇರಿಗೆ ನಿವೇಶನ ಒದಗಿಸಲು ಸಚಿವ ರಹೀಂಖಾನ್‌ರಿಗೆ ಮನವಿ



ಮಲ್ಲಮ್ಮ ನುಡಿ ವಾರ್ತೆ

ಬೀದರ.ಜೂ.17:ಕರ್ನಾಟಕ ಕಾರ್ಯನಿರತ ಪತ್ರಕರ್ತರ ಧ್ವನಿ ಸಂಘಟನೆಯ ಕಚೇರಿಗೆ ಮಹಾನಗರಪಾಲಿಕೆ,ನಗರಸಭೆ, ಪುರಸಭೆ ಹಾಗೂ ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ನಿವೇಶನ ಒದಗಿಸಬೇಕು ಎಂದು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಧ್ವನಿ ಸಂಘಟನೆಯ ರಾಜ್ಯ ಕಾರ್ಯದರ್ಶಿ ಜಾನಸನ್ ಘೋಡೆ ಮನವಿ ಮಾಡಿದ್ದಾರೆ.

ಈ ಕುರಿತು ಅವರು ಬೆಂಗಳೂರಿನಲ್ಲಿ ಮಂಗಳವಾರ ಪೌರಾಡಳಿತ ಹಾಗೂ ಹಜ್ ಸಚಿವ ರಹೀಂಖಾನ್ ಅವರಿಗೆ ಮನವಿ ಪತ್ರ ಸಲ್ಲಿಸಿದರು.

ಸಂಘಟನೆ ರಾಜ್ಯದಾದ್ಯಂತ ಸಾರ್ವಜನಿಕ ಹಿತದ ಕಾರ್ಯಗಳಲ್ಲಿ ತೊಡಗಿಸಿಕೊಂಡಿದೆ. ಸರ್ಕಾರದ ಯೋಜನೆಗಳನ್ನು ಸಾರ್ವಜನಿಕರಿಗೆ ತಲುಪಿಸುವ ಕೆಲಸ ಮಾಡುತ್ತಿದೆ ಎಂದು ಗಮನ ಸೆಳೆದರು.

ನಿವೇಶನ ಒದಗಿಸಿದ್ದಲ್ಲಿ ಸಂಘಟನೆ ಕಚೇರಿ ಆರಂಭಿಸಲು ಅನುಕೂಲವಾಗಲಿದೆ ಎಂದು ತಿಳಿಸಿದರು.

# ರೆಡ್ ಕ್ರಾಸ್ ಸಂಸ್ಥೆಗೆ ದಿಲೀಪ್ ಕಮಠಾಣೆ ನಾಮ ನಿರ್ದೇಶನ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜೂ. 17 : ಇಲ್ಲಿಯ ಬಸವ ತತ್ವ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ಡಾ. ದಿಲೀಪ್ ಕಮಠಾಣೆ ಅವರನ್ನು ಭಾರತೀಯ ರೆಡ್ ಕ್ರಾಸ್ ಸಂಸ್ಥೆಯ ರಾಜ್ಯ ವ್ಯವಸ್ಥಾಪಕ ಸಮಿತಿಯ ಸಹ ಸದಸ್ಯರನ್ನಾಗಿ ನಾಮ ನಿರ್ದೇಶನ ಮಾಡಲಾಗಿದೆ.

ಸಂಸ್ಥೆಯ ರಾಜ್ಯ ಘಟಕದ ಪ್ರಧಾನ ಕಾರ್ಯದರ್ಶಿ ಎಚ್. ಎಸ್. ಬಾಲಸುಬ್ರಹ್ಮಣ್ಯ ಈ ನಾಮ ನಿರ್ದೇಶನ ಮಾಡಿ ಆದೇಶ ಹೊರಡಿಸಿದ್ದಾರೆ. ಕಮಠಾಣೆ ಅವರ ನಾಮ ನಿರ್ದೇಶನ ಅವಧಿ ಮೂರು ವರ್ಷಗಳದ್ದಾಗಿದೆ. ಸಂಸ್ಥೆಯ ಜಿಲ್ಲಾ ಘಟಕದ ಉಪಾಧ್ಯಕ್ಷ ಹಾಗೂ ಕಲಬುರಗಿ ವಿಭಾಗ ಪ್ರತಿನಿಧಿಯಾಗಿ ಉತ್ತಮ ಸೇವೆ ಸಲ್ಲಿಸಿದ್ದರಿಂದ ಅವರಿಗೆ ಈಗ ರಾಜ್ಯ ವ್ಯವಸ್ಥಾಪಕ ಸಮಿತಿಯ ಸಹ ಸದಸ್ಯ ಹುದ್ದೆ ಒಲಿದು ಬಂದಿದೆ. ಕಮಠಾಣೆ ಅವರು ವಿ.ಕೆ. ಇಂಟರ್‌ನ್ಯಾಷನಲ್ ಶಿಕ್ಷಣ ಸಂಸ್ಥೆಗಳ ಸಮೂಹ ಹಾಗೂ ಶ್ರೀಮತಿ ಲಕ್ಷ್ಮಿಬಾಯಿ ಕಮಠಾಣೆ ಶಿಕ್ಷಣ ಸಂಸ್ಥೆಗಳ ಸಮೂಹದ ಮುಖ್ಯಸ್ಥರಾಗಿದ್ದಾರೆ.

# ಕರವೇ ತಾಲ್ಲೂಕಾಧ್ಯಕ್ಷರಾಗಿ ಮಂಜುನಾಥ ಸ್ವಾಮಿ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜೂ. 17 : ಕರ್ನಾಟಕ ರಕ್ಷಣಾ ವೇದಿಕೆಯ ಕಮಲನಗರ ತಾಲ್ಲೂಕು ಘಟಕದ ನೂತನ ಅಧ್ಯಕ್ಷರಾಗಿ ಮಂಜುನಾಥ ಸ್ವಾಮಿ ಅವರನ್ನು ನೇಮಕ ಮಾಡಲಾಗಿದೆ.

ವೇದಿಕೆಯ ಜಿಲ್ಲಾ ಘಟಕದ ಅಧ್ಯಕ್ಷ ಸೋಮನಾಥ ಮುಧೋಳ ಈ ನೇಮಕ ಮಾಡಿ ಆದೇಶ ಹೊರಡಿಸಿದ್ದಾರೆ.

ಕೂಡಲೇ ಜವಾಬ್ದಾರಿ ವಹಿಸಿಕೊಂಡು ಗಡಿ ತಾಲ್ಲೂಕಿನಲ್ಲಿ ಸಂಘಟನೆ ಬಲಪಡಿಸಬೇಕು. ಕನ್ನಡದ ಕೆಲಸಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಳ್ಳಬೇಕು ಎಂದು ಸೂಚಿಸಿದ್ದಾರೆ.

# ರತ್ನಮ್ಮಾ ನಾರಾಯಣರಾವ್ ಸೋಪ್ರೆ ನಿಧನ



ಬೀದರ. ಜೂ. 17 : ನಗರದ ಗುಂಪಾ ಸಂಗಮೇಶ್ವರ ಕಾಲೋನಿಯ ನಿವಾಸಿ, ರತ್ನಮ್ಮಾ ನಾರಾಯಣರಾವ್ ಸೋಪ್ರೆ(55) ಅವರು (ಜೂನ್ 17 ರಂದು) ಮಂಗಳವಾರ ಬೆಳಿಗ್ಗೆ ಹೃದಯಾಘಾತದಿಂದ ನಿಧನರಾದರು. ಅವರಿಗೆ ಟೋಕರೆ ಕೋಳಿ ಸಮಾಜದ ಮುಖಂಡ ಸೋಪಾನರಾವ್ ಸೋಪ್ರೆ ಸೇರಿ ಐವರು ಪುತ್ರರು ಹಾಗೂ ಇಬ್ಬರು ಪುತ್ರಿಯರು ಸೇರಿದಂತೆ ಅಪಾರ ಬಂಧು ಬಳಗ ಇದ್ದರೆ. ಅಂತ್ಯಕ್ರಿಯೆ ಔರಾದ (ಬಿ) ತಾಲೂಕಿನ ಸ್ವ–ಗ್ರಾಮವಾದ ದೇಶಮುಖ ವಡಗಾಂವ್ ಗ್ರಾಮದ ರುದ್ರಭೂಮಿಯಲ್ಲಿ ಜೂನ್ 18 ರಂದು ಬುಧವಾರ ಮಧ್ಯಾನ 12 ಗಂಟೆಗೆ ಅಂತ್ಯಕ್ರಿಯೆ ನಡೆಯಲಿದೆ ಎಂದು ಕುಟುಂಬಸ್ಥರು ತಿಳಿಸಿದ್ದಾರೆ.

# ಬಾಲ ಪುರಸ್ಕಾರ ಪ್ರಶಸ್ತಿಗಾಗಿ ಅರ್ಜಿ ಆಹ್ವಾನ

ಬೀದರ, ಜೂ.17: ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವಾಲಯದಿಂದ ಭಾರತ ಸರ್ಕಾರವು "ಪ್ರಧಾನಮಂತ್ರಿ ರಾಷ್ಟ್ರೀಯ ಬಾಲ ಪುರಸ್ಕಾರ" ಪ್ರಶಸ್ತಿಯನ್ನು ನೀಡಲು 18 ವರ್ಷದೊಳಗಿನ ಮಕ್ಕಳಿಂದ ಅನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ ಎಂದು ಜಿಲ್ಲಾಧಿಕಾರಿಗಳಾದ ಶಿಲ್ಪಾ ಶರ್ಮಾ ಅವರು ತಿಳಿಸಿದ್ದಾರೆ. ಮಕ್ಕಳ ಧೈರ್ಯ ಮತ್ತು ಸಾಹಸದಿಂದ ಇತರರನ್ನು ರಕ್ಷಿಸಿದ ಶೌರ್ಯ, ಕ್ರೀಡೆ, ಸಮಾಜ ಸೇವೆ, ವಿಜ್ಞಾನ ಮತ್ತು ತಾಂತ್ರಿಕತೆ, ಪರಿಸರ, ಕಲೆ ಮತ್ತು ಸಂಸ್ಕೃತಿ ಹಾಗೂ ಸಂಶೋಧನೆಯಲ್ಲಿ (ಹೊಸ ಅವಿಷ್ಕಾರ) ಕ್ಷೇತ್ರಗಳಲ್ಲಿ ಅಸಾಧಾರಣ ಸಾಧನೆಗೈದ 31–07–2025ಕ್ಕೆ ಅನ್ವಯವಾಗುವಂತೆ 05 ವರ್ಷ ಮೇಲ್ಪಟ್ಟ ಹಾಗೂ 18 ವರ್ಷದೊಳಗಿರುವ ಎಲ್ಲಾ ಮಕ್ಕಳು ರಾಷ್ಟ್ರೀಯ ಪ್ರಧಾನಮಂತ್ರಿ ಬಾಲ ಪುರಸ್ಕಾರ ಪ್ರಶಸ್ತಿ 2025ಕ್ಕೆ ಅರ್ಜಿ ಸಲ್ಲಿಸಲು ಅರ್ಹರಿರುತ್ತಾರೆ.

# ಕನ್ನಡ ಶಾಲೆಗಳ ಉಳಿವಿಗೆ ಹೋರಾಟಕ್ಕೆ ಸಿದ್ಧತೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜೂ. 17 : ಕನ್ನಡ ಶಾಲೆಗಳ ಉಳಿವಿಗೆ ಸರ್ಕಾರದ ಮೇಲೆ ಒತ್ತಡ ತರುವ ದಿಸೆಯಲ್ಲಿ ರಾಜ್ಯಮಟ್ಟದಲ್ಲಿ ಹೋರಾಟ ಸಂಘಟಿಸಲು ಕನ್ನಡ ಸಂರಕ್ಷಣಾ ಸಮಿತಿಯ ಬೀದರ್ ಜಿಲ್ಲಾ ಘಟಕದ ನಿಯೋಗವು ಬೆಂಗಳೂರಿನಲ್ಲಿ ಸೋಮವಾರ ಕನ್ನಡ ಪರ ಸಂಘಟನೆಗಳ ಮುಖಂಡರನ್ನು ಭೇಟಿ ಮಾಡಿತು.

ಕನ್ನಡ ಸಾಹಿತ್ಯ ಪರಿಷತ್ ರಾಜ್ಯ ಅಧ್ಯಕ್ಷ ಮಹೇಶ ಜೋಶಿ, ಕರ್ನಾಟಕ ರಕ್ಷಣಾ ವೇದಿಕೆಯ ರಾಜ್ಯ ಅಧ್ಯಕ್ಷ ನಾರಾಯಣಗೌಡ, ಕರ್ನಾಟಕ ರಕ್ಷಣಾ ವೇದಿಕೆಯ ಪ್ರವೀಣಶೆಟ್ಟಿ ಬಣದ ರಾಜ್ಯ ಅಧ್ಯಕ್ಷ ಪ್ರವೀಣಶೆಟ್ಟಿ, ನಮ್ಮ ಕರ್ನಾಟಕ ಸೇನೆಯ ರಾಜ್ಯ ಅಧ್ಯಕ್ಷ ಬಸವರಾಜ ಅವರನ್ನು ನಿಯೋಗದ ಸದಸ್ಯರು ಭೇಟಿ ಮಾಡಿ ಗಡಿ ಜಿಲ್ಲೆ ಬೀದರ್ ಸೇರಿದಂತೆ ರಾಜ್ಯದಲ್ಲಿ ಕನ್ನಡ ಶಾಲೆಗಳು ಎದುರಿಸುತ್ತಿರುವ ಸಮಸ್ಯೆಗಳನ್ನು ಮನವರಿಕೆ ಮಾಡಿದರು.

ರಾಜ್ಯ ಸರ್ಕಾರದ ಕಠಿಣ ನಿಯಮಗಳಿಂದಾಗಿ ರಾಜ್ಯದಲ್ಲಿ 10 ವರ್ಷಗಳ ಅವಧಿಯಲ್ಲಿ ಸಾವಿರಾರು ಕನ್ನಡ ಶಾಲೆಗಳು ಮುಚ್ಚಿವೆ. ರಾಜ್ಯ ಸರ್ಕಾರವೇ ಕರ್ನಾಟಕ ಪಬ್ಲಿಕ್ ಸ್ಕೂಲ್ ಹೆಸರಲ್ಲಿ ಕನ್ನಡ ಮಾಧ್ಯಮ ಶಾಲೆಗಳನ್ನು ಆಂಗ್ಲ ಮಾಧ್ಯಮ ಶಾಲೆಗಳನ್ನಾಗಿ ಪರಿವರ್ತಿಸುತ್ತಿದೆ. ಗೋಕಾಕ್ ಚಳವಳಿ ಮಾದರಿಯಲ್ಲಿ ಹೋರಾಟ ನಡೆಸದಿದ್ದರೆ ಕರ್ನಾಟಕದಲ್ಲಿ ಕನ್ನಡಕ್ಕೆ ಉಳಿಗಾಲವಿಲ್ಲ ಎಂದು ಗಮನ ಸೆಳೆದರು.

ಕನ್ನಡ ಶಾಲೆಗಳ ಸಮಸ್ಯೆಗಳನ್ನು ಕನ್ನಡ ಪರ ಸಂಘಟನೆಗಳ ಪ್ರಮುಖರ ಗಮನಕ್ಕೆ ತರಲಾಗಿದೆ. ಕನ್ನಡ ಶಾಲೆಗಳ ಉಳಿವಿಗೆ ನಡೆಸುವ ಎಲ್ಲ ಪ್ರಯತ್ನಗಳಿಗೆ ಬೆಂಬಲ ನೀಡುವುದಾಗಿ ತಿಳಿಸಿದ್ದಾರೆ. ಕನ್ನಡ ಶಾಲೆಗಳ ಉಳಿವಿಗೆ ರಾಜ್ಯದಾದ್ಯಂತ ಹೋರಾಟ ನಡೆಸುವ ನಿಟ್ಟಿನಲ್ಲಿ ಸಿದ್ಧತೆ ನಡೆದಿದೆ ಎಂದು ಕನ್ನಡ ಸಂರಕ್ಷಣಾ ಸಮಿತಿಯ ಬೀದರ್ ಜಿಲ್ಲಾ ಘಟಕದ ಸಂಚಾಲಕ ರೇವಣಸಿದ್ದಪ್ಪ ಜಲಾದೆ ಹೇಳಿದ್ದಾರೆ.

ಕನ್ನಡ ಶಾಲೆ ಆರಂಭಿಸುವ ಹಾಗೂ ಮಾನ್ಯತೆ ನವೀಕರಿಸುವ ಪ್ರಕ್ರಿಯೆ ಸರಳೀಕರಿಸಬೇಕು. ಕನ್ನಡ ಶಾಲೆಗಳಲ್ಲಿ ಶಿಕ್ಷಕರ ಕೊರತೆ ನೀಗಿಸಬೇಕು. ಅರ್ಹ ಖಾಸಗಿ ಕನ್ನಡ ಶಾಲೆಗಳನ್ನು ಅನುದಾನಕ್ಕೆ ಒಳಪಡಿಸಬೇಕು. ಬಡ ಮಕ್ಕಳ ಶಿಕ್ಷಣಕ್ಕೆ ಆಸರೆಯಾಗಿದ್ದ ಆರ್‌ಟಿಇ ಮರು ಜಾರಿಗೊಳಿಸಬೇಕು. ಕನ್ನಡ ಶಾಲೆಗಳ ಸಬಲೀಕರಣ ಕಾಯ್ದೆ ಜಾರಿಗೊಳಿಸಬೇಕು ಎಂಬುದು ತಮ್ಮ ಪ್ರಮುಖ ಬೇಡಿಕೆಗಳಾಗಿವೆ ಎಂದು ತಿಳಿಸಿದ್ದಾರೆ.

ನಿಯೋಗ ಇನ್ನೂ ಅನೇಕ ಮುಖಂಡರು ಹಾಗೂ ಕನ್ನಡ ಪರ ಹೋರಾಟಗಾರರನ್ನು ಭೇಟಿ ಮಾಡಲಿದೆ ಎಂದು ಹೇಳಿದ್ದಾರೆ.

ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾ ಘಟಕದ ಅಧ್ಯಕ್ಷ ಸುರೇಶ ಚನಶೆಟ್ಟಿ, ಕನ್ನಡ ಸಂರಕ್ಷಣಾ ಸಮಿತಿಯ ಅಧ್ಯಕ್ಷ ಸೋಮನಾಥ ಮುದ್ದಾ, ಕಲ್ಯಾಣ ಕರ್ನಾಟಕ ಅನುದಾನ ರಹಿತ ಖಾಸಗಿ ಶಾಲಾ ಆಡಳಿತ ಮಂಡಳಿ ಸಂಘದ ಜಿಲ್ಲಾ ಅಧ್ಯಕ್ಷ ರಾಜೇಂದ್ರ ಮಣಗೇರಿ, ಕಾರ್ಯದರ್ಶಿ ಗುರುನಾಥ ರೆಡ್ಡಿ, ಪ್ರಮುಖರಾದ ಗುರುನಾಥ ದೇಶಮುಖ, ಸೈಯದ್ ಅಹಮ್ಮದ್, ಮಾಣಿಕಪ್ಪ ಗೋರನಾಳೆ, ರಮೇಶ ಧಬಾಲೆ, ಸಂತೋಷ್ ಕೃಷ್ಣಮೂರ್ತಿ, ಸಂಜುಕುಮಾರ ಬಿರಾದಾರ ನಿಯೋಗದಲ್ಲಿ ಇದ್ದಾರೆ.

# ಆರೋಗ್ಯಪೂರ್ಣ ಜೀವನಕ್ಕೆ ಯೋಗ ಮಾಡಿ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜೂ. 17 : ಆರೋಗ್ಯಪೂರ್ಣ ಜೀವನಕ್ಕೆ ಪ್ರತಿಯೊಬ್ಬರೂ ನಿತ್ಯ ಯೋಗ ಮಾಡಬೇಕು ಎಂದು ರಾಮಕೃಷ್ಣ ವಿವೇಕಾನಂದ ಆಶ್ರಮದ ಅಧ್ಯಕ್ಷ ಜ್ಯೋತಿರ್ಮಯಾನಂದ ಸ್ವಾಮೀಜಿ ಹೇಳಿದರು.

ಸೂರ್ಯ ನಮಸ್ಕಾರ ಸಂಘದ ವತಿಯಿಂದ ಅಂತರರಾಷ್ಟ್ರೀಯ ಯೋಗ ದಿನಾಚರಣೆ ನಿಮಿತ್ತ ಇಲ್ಲಿಯ ರಾಮಕೃಷ್ಣ ವಿವೇಕಾನಂದ ಆಶ್ರಮದಲ್ಲಿ ಹಮ್ಮಿಕೊಂಡ ಯೋಗ ಸಪ್ತಾಹವನ್ನು ಮಂಗಳವಾರ ಸಸಿಗೆ ನೀರೆರೆದು ಉದ್ಘಾಟಿಸಿ ಅವರು ಮಾತನಾಡಿದರು.

ನಿತ್ಯ ಒಂದು ತಾಸು ಯೋಗಕ್ಕೆ ಮೀಸಲಿಟ್ಟರೆ, ಇಡೀ ದಿನ ಉತ್ಸಾಹದಿಂದ ಕಳೆಯಬಹುದು. ಮನಸ್ಸನ್ನು ಉಲ್ಲಸಿತಗೊಳಿಸುವ ಶಕ್ತಿ ಯೋಗಕ್ಕೆ ಇದೆ ಎಂದು ತಿಳಿಸಿದರು.

ಇಂದಿನ ಒತ್ತಡದ ಜೀವನದಲ್ಲಿ ಮಾನಸಿಕ ಶಾಂತಿ ಹಾಗೂ ನೆಮ್ಮದಿ ಕಾಪಾಡಲು ಯೋಗ ಸಹಕಾರಿಯಾಗಿದೆ ಎಂದು ಸೂರ್ಯ ನಮಸ್ಕಾರ ಸಂಘದ ಅಧ್ಯಕ್ಷ ಕಾಮಶೆಟ್ಟಿ ಚಿಕ್ಕಬಸೆ ಹೇಳಿದರು.

ಯೋಗದಿಂದ ಆರೋಗ್ಯಕ್ಕೆ ಅನೇಕ ಅನುಕೂಲಗಳಿವೆ. ಏಕಾಗ್ರತೆ ಕಾಯ್ದುಕೊಳ್ಳಲೂ ಸಾಧ್ಯವಾಗುತ್ತದೆ. ಹೀಗಾಗಿ ಯೋಗವನ್ನು ದೈನಂದಿನ ಜೀವನ ಭಾಗವಾಗಿಸಿಕೊಳ್ಳುವುದು ಅವಶ್ಯಕವಾಗಿದೆ ಎಂದು ತಿಳಿಸಿದರು.

ಯೋಗ ಸಪ್ತಾಹವನ್ನು ರೋಟರಿ ಕ್ಲಬ್ ಆಫ್ ಬೀದರ್, ರೋಟರಿ ಕ್ಲಬ್ ಆಫ್ ಬೀದರ್ ನ್ಯೂ ಸೆಂಚುರಿ, ರೋಟರಿ ಕ್ಲಬ್ ಆಫ್ ಬೀದರ್ ಫೋರ್ಟ್, ಲಘು ಉದ್ಯೋಗ ಭಾರತಿ ಹಾಗೂ ಗ್ಲೋಬಲ್ ಫ್ರೆಂಡ್ಸ್ ಅಸೋಸಿಯೇಷನ್ ಸಹಯೋಗದಲ್ಲಿ ಹಮ್ಮಿಕೊಳ್ಳಲಾಗಿದೆ. ಸಪ್ತಾಹ ಅಂಗವಾಗಿ ಆಶ್ರಮದಲ್ಲಿ ಒಂದು ವಾರ ಪ್ರತಿ ದಿನ ಬೆಳಿಗ್ಗೆ 6 ರಿಂದ 7.30 ರ ವರೆಗೆ ಪುರುಷರು, ಮಹಿಳೆಯರಿಗೆ ಹಾಗೂ ಸಂಜೆ 5.30 ರಿಂದ 6.30 ರ ವರೆಗೆ ಮಹಿಳೆಯರಿಗೆ ಯೋಗ ಹೇಳಿಕೊಡಲಾಗುವುದು ಎಂದು ಹೇಳಿದರು.

ಸತ್ಯಪ್ರಕಾಶ, ಶಿವಲೀಲಾ ಚಿದ್ರೆ ಹಾಗೂ ಡಾ. ಲೋಕೇಶ ಹಿರೇಮಠ ಯೋಗದ ವಿವಿಧ ಪ್ರಕಾರಗಳನ್ನು ಹೇಳಿಕೊಟ್ಟರು.

ಸೂರ್ಯ ನಮಸ್ಕಾರ ಸಂಘದ ಕಾರ್ಯದರ್ಶಿ ಶಿವಕುಮಾರ ಪಾಟೀಲ, ನಿತಿನ್ ಕರ್ಪೂರ, ರೋಟರಿ ಕ್ಲಬ್ ಆಫ್ ಬೀದರ್ ನ್ಯೂ ಸೆಂಚುರಿ ಅಧ್ಯಕ್ಷ ಶಿವಕುಮಾರ ಪಾಖಾಲ್, ಕಾರ್ಯದರ್ಶಿ ಪ್ರಭು ತಟಪಟ್ಟಿ, ರೋಟರಿ ಕ್ಲಬ್ ಆಫ್ ಬೀದರ್ ಫೋರ್ಟ್ ಅಧ್ಯಕ್ಷ ಗುಂಡಪ್ಪ ಘೋದೆ, ಕಾರ್ಯದರ್ಶಿ ಡಾ. ಉಲ್ಲಾಸ್ ಕಟ್ಟಿಮನಿ, ರೋಟರಿ ಕ್ಲಬ್ ಆಫ್ ಬೀದರ್ ಅಧ್ಯಕ್ಷ ಸೋಮಶೇಖರ ಪಾಟೀಲ, ಕಾರ್ಯದರ್ಶಿ ಕೃಪಾಸಿಂಧು, ಲಘು ಉದ್ಯೋಗ ಭಾರತಿ ಅಧ್ಯಕ್ಷ ಸಚ್ಚಿದಾನಂದ ಚಿದ್ರೆ, ಗ್ಲೋಬಲ್ ಫ್ರೆಂಡ್ಸ್ ಅಸೋಸಿಯೇಷನ್ ಅಧ್ಯಕ್ಷ ಶರಣು ಚಳಕಾಪುರೆ, ಕಾರ್ಯದರ್ಶಿ ಜಗನ್ನಾಥ ರೆಡ್ಡಿ ಮತ್ತಿತರರು ಇದ್ದರು.

# ನಮ್ಮ ಕರ್ನಾಟಕ ಸೇನೆಗೆ ಆಯ್ಕೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜೂ. 17 : ನಮ್ಮ ಕರ್ನಾಟಕ ಸೇನೆಯ ಜಿಲ್ಲಾ ಘಟಕ ಹಾಗೂ ಜಿಲ್ಲಾ ರೈತ ಘಟಕದ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಗಿದೆ.

ಜಿಲ್ಲಾ ಘಟಕ: ದತ್ತಾತ್ರೇಯ ಅಲಂಕೇರೆ, ಶಶಿಕುಮಾರ ಅಷ್ಟೂರೆ (ಉಪಾಧ್ಯಕ್ಷರು) ಮತ್ತು ಸಂತೋಷ್ ಮಳಚಾಪುರೆ (ReÁAa).ಜಿಲ್ಲಾ ರೈತ ಘಟಕ: ರಾಜಕುಮಾರ ಸ್ವಾಮಿ (ಅಧ್ಯಕ್ಷ). ಹುಮನಾಬಾದ್ ತಾಲ್ಲೂಕು ಘಟಕ: ಸಚಿನ್ ತಿಬಶೆಟ್ಟೆ (ಅಧ್ಯಕ್ಷ). ಸೇನೆಯ ಜಿಲ್ಲಾ ಘಟಕದ ಅಧ್ಯಕ್ಷ ಗಣೇಶ ಪಾಟೀಲ ಜ್ಯಾಂತಿ ಅವರ ಅಧ್ಯಕ್ಷತೆಯಲ್ಲಿ ನಡೆದ ಪದಾಧಿಕಾರಿಗಳ ಆಯ್ಕೆ ಸಭೆಯಲ್ಲಿ ಜಿಲ್ಲಾ ಘಟಕದ ಪ್ರಧಾನ ಕಾರ್ಯದರ್ಶಿ ಸಂಜು ಯಾದವ್, ಸಂಚಾಲಕ ಸುಧಾಕರ ರಾಠೋಡ್, ನಗರ ಘಟಕದ ಅಧ್ಯಕ್ಷ ಸಂತೋಷ್, ಪಾಟೀಲ್, ಬೀದರ್ ಉತ್ತರ ಘಟಕದ ಅಧ್ಯಕ್ಷ ಅನಿಲ್ ರಾಜಗೀರಾ, ಭಾಲ್ಕಿ ತಾಲ್ಲೂಕು ಘಟಕದ ಅಧ್ಯಕ್ಷ ಬಸವರಾಜ ಕಾರಬಾರಿ, ಔರಾದ್ ತಾಲ್ಲೂಕು ಘಟಕದ ಅಧ್ಯಕ್ಷ ಬಾಲಾಜಿ ದಾಮಾ ಮತ್ತಿತರರು ಇದ್ದರು. ಆನ್‌ಲೈನ್ ಜೂಜು ನಿಷೇಧಿಸುವವರೆಗೆ ಹೋರಾಟ

ಬೀದರ್: ಆನ್‌ಲೈನ್ ಬೆಟ್ಟಿಂಗ್, ಜೂಜು ಹಾಗೂ ಇತರ ಆಟಗಳನ್ನು ರಾಜ್ಯದಲ್ಲಿ ನಿಷೇಧಿಸುವ ವರೆಗೆ ನಮ್ಮ ಕರ್ನಾಟಕ ಸೇನೆ ನಿರಂತರ ಹೋರಾಟ ನಡೆಸಲಿದೆ ಎಂದು ಸೇನೆಯ ಜಿಲ್ಲಾ ಘಟಕದ ಅಧ್ಯಕ್ಷ ಗಣೇಶ ಪಾಟೀಲ ಹೇಳಿದರು. ನಗರದಲ್ಲಿ ನಡೆದ ಸೇನೆಯ ಜಿಲ್ಲಾ ರೈತ ಘಟಕದ ಪದಾಧಿಕಾರಿಗಳ ಆಯ್ಕೆ ಸಭೆಯಲ್ಲಿ ಅವರು ಮಾತನಾಡಿದರು. ಆನ್‌ಲೈನ್ ಜೂಜು ಹಾಗೂ ಬೆಟ್ಟಿಂಗ್‌ನಿಂದಾಗಿ ಜಿಲ್ಲೆಯಲ್ಲಿ ಅನೇಕ ಯುವಕರು ಪ್ರಾಣ ಕಳೆದುಕೊಂಡಿದ್ದಾರೆ. ಬಹಳಷ್ಟು ಕುಟುಂಬಗಳು ಬೀದಿಗೆ ಬಂದಿವೆ. ಕಾರಣ, ಸರ್ಕಾರ ಆನ್‌ಲೈನ್ ಗೇಮ್‌ಗಳನ್ನು ನಿಷೇಧಿಸಬೇಕು ಎಂದು ಒತ್ತಾಯಿಸಿದರು.

# ಬೀದರ್ ಚಲೊ ಚಳುವಳಿ ಮುಂದೂಡಿಕೆ : ವಿಷ್ಣುವರ್ಧನ್ ವಾಲದೊಡ್ಡಿ




ಬೀದರ. ಜೂ. 17 : ಜೂ.19 ರಂದು ಬೀದರ್ ಚಲೊ ಚಳುವಳಿ ನಡೆಸಲು ತೀರ್ಮಾನಿಸಲಾಗಿತ್ತು. ಆದರೆ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ್ ಖಂಡ್ರೆ ಅವರ ಭರವಸೆ ಮೇರೆಗೆ ಈ ಚಳುವಳಿ ಮುಂದೂಡಲಾಗಿದೆ ಎಂದು ಕರ್ನಾಟಕ ಭೀಮ ಸೇನೆಯ ರಾಜ್ಯ ಕಾರ್ಯದರ್ಶಿ ವಿಷ್ಣುವರ್ಧನ್ ವಾಲ್ದೊಡ್ಡಿ ತಿಳಿಸಿದರು.

ಮಂಗಳವಾರ ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ಅಂಬೇಡ್ಕರ್ ಅವರ ಪ್ರತಿಮೆಗಳಿಗೆ ಅವಮಾನ ಮಾಡುತ್ತಿರುವ ಘಟನೆಗಳು ಹೆಚ್ಚಾಗಿ ನಡೆಯುತ್ತಿವೆ. ಹಾಗೆಯೇ ದಲಿತರ ಮೇಲೆ ಹಲ್ಲೆ, ಜಾತಿನಿಂದನೆ ಮಾಡುವುದು ಹೆಚ್ಚಾಗಿ ಕಂಡು ಬರುತ್ತಿದೆ. ಅದೇ ರೀತಿ ಹೋರಾಟಗಾರರ ಮೇಲೆ ಸುಳ್ಳು ಪ್ರಕರಣ ದಾಖಲಿಸಲಾಗುತ್ತಿದೆ. ಇವುಗಳ ವಿರುದ್ಧ ನಾವು ಬೃಹತ್ ಮಟ್ಟದಲ್ಲಿ ಬೀದರ್ ಚಲೋ ಪ್ರತಿಭಟನೆ ಹಮ್ಮಿಕೊಂಡಿದ್ದೆವು. ಆದರೆ ಆ ಪ್ರತಿಭಟನೆ ಮುಂದೂಡಲಾಗಿದೆ ಎಂದು ಅವರು ತಿಳಿಸಿದರು.

ಈ ವಿಷಯಗಳು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ್ ಖಂಡ್ರೆ ಅವರ ಗಮನಕ್ಕೆ ತಂದಿದ್ದೇವೆ. ಅವರು ವೇದಿಕೆ ಸಜ್ಜುಗೊಳಿಸಿ ಬಹಿರಂಗ ಸಭೆಯಲ್ಲಿ ಅಂಬೇಡ್ಕರ್ ಅವರನ್ನು ಅವಮಾನ ಮಾಡುವ, ಜಾತಿ ನಿಂದನೆ ಮಾಡುವವರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಲಾಗುವುದು. ಹಾಗೆಯೇ ಅಧಿಕಾರ ದುರುಪಯೋಗ ಮಾಡಿಕೊಳ್ಳುತ್ತಿರುವ ಅಧಿಕಾರಿಗಳ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳುವುದಾಗಿ ಆಶ್ವಾಸನೆ ನೀಡಿದ್ದಾರೆ. ಅವರ ಭರವಸೆ ಮೇರೆಗೆ ಶೀಘ್ರದಲ್ಲಿಯೇ ದಿನಾಂಕ ನಿಗದಿಪಡಿಸಿ, ಬಹಿರಂಗ ಸಭೆ ಏರ್ಪಡಿಸಲಾಗುವುದು ಎಂದರು. ಈ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷ ನಾಗಸೇನ್ ಬನ್ನೇರ್, ಲಕ್ಷ್ಮಣ ಕಾಂಬ್ಳೆ, ಅಂಬರೀಷ ಕುದರೆ ಹಾಗೂ ಸಂದೀಪ್ ಉಪಸ್ಥಿತರಿದ್ದರು.

## ಮಾಧ್ವಾರ ಗ್ರಾಮದಲ್ಲಿ ಜನರ ಸಮಸ್ಯೆ ಆಲಿಸಿದ ಶಾಸಕ ಕಂದಕೂರ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಮಾಧ್ವಾರಗ್ರಾಮದ ವಾರ್ಡ್ ನಂ1ರಲ್ಲಿನಅಂಗನವಾಡಿ ಕೇಂದ್ರದಲ್ಲಿ ಮಳೆ ಬಂದರೆ ಸಾಕು ಇಡಿ ಅಂಗನವಾಡಿಯಲ್ಲಿ ನೀರು ನಿಲ್ಲುತ್ತವೆ. ಇದರಿಂದ ಮಕ್ಕಳಿಗೆ ತೀವ್ರ ತೊಂದರೆಯಾಗುತ್ತಿದ್ದು, ಕ್ರಮಕೈಗೊಳ್ಳಬೇಕು ಎಂದು ಗ್ರಾಮಸ್ಥರು ಶಾಸಕ ಶರಣಗೌಡ ಕಂದಕೂರ ಅವರಲ್ಲಿ ಮನವಿ ಮಾಡಿದರು.



ಇದೇ ವೇಳೆ ತಾಪಂ ಇಒ ಅವರಿಗೆ ಕ್ರಮಕೈಗೊಳ್ಳುವಂತೆ ಸೂಚಿಸಿ,ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಅಧಿಕಾರಿಗೆ ಫೋನ್ ಮಾಡಿ ಅಂಗನವಾಡಿ ಸಮಸ್ಯೆಯನ್ನು ಪರಿಶೀಲಿಸಿ, ಕ್ರಮಕೈಗೊಳ್ಳುವಂತೆ ತಾಕೀತು ಮಾಡಿದರು. ಅಧಿಕಾರಿಗಳು ಬಂದು ಪರಿಶೀಲಿಸಿದ ನಂತರ ಹೊಸ ಅಂಗನವಾಡಿ ಕಟ್ಟಡ ಕಟ್ಟಬೇಕಾದ್ರು ಕಟ್ತಿವಿ ಅಥವಾ ಅದನ್ನೇಮೇಲ್ದರ್ಜೆಗೇರಿಸಬೇಕಾದರು ಅದನ್ನು ಮಾಡ್ತಿವಿ ಒಟ್ಟಿನಲ್ಲಿ ನಿಮ್ಮೂರಿನ ಅಂಗನವಾಡಿ ಸಮಸ್ಯೆ ಬಗೆಹರಿಸ್ತೇನೆ ಎಂದು ಹೇಳಿದರು.

ಗ್ರಾಮೀಣ ಭಾಗದ ಪ್ರತಿಯೊಂದು ಹಳ್ಳಿಗಳಲ್ಲಿ ಜನರಿಗೆ ಶುದ್ಧ ಕುಡಿಯುವ ನೀರು ಒದಗಿಸಲು ಕ್ರಮಕೈಗೊಳ್ಳಬೇಕಿದೆ,ಪಿಡಿಒಗಳು ಜನರಿಗೆ ಶುದ್ಧ ಕುಡಿಯುವ ನೀರು ಒದಗಿಸುವಜವಾಬ್ದಾರಿಯಿಂದಹಿಂದೆ ಸರಿಯಬಾರದು,ಪ್ರತಿಯೊಂದು ಹಳ್ಳಿಯಲ್ಲಿನ ಆರ್‌ಒ ಪ್ಲಾಂಟ್ ಪರಿಶೀಲಿಸಬೇಕು,ಆರ್‌ಡಬ್ಲುಎಸ್‌ಗೆ ಹೇಳಿದೆ, ತಾಪಂ ಗೆ ಹೇಳಿದೆ ಅಂತ ಸಬೂಬು ಹೇಳಬೇಡಿ ಪೈಲ್ ಕಳಿಸಿ ಕೂಡಬೇಡಿ ಎಲ್ಲಾ ವಾಟರ್ ಪ್ಲಾಂಟ್‌ಗಳನ್ನುಪರಿಶೀಲಿಸಿ ಜನರ ಕುಡಿಯುವ ನೀರಿನ ಸಮಸ್ಯೆಬಗೆಹರಿಸಬೇಕು,ತಾಪಂ ಅಧಿಕಾರಿಗಳು ಮೇಲ್ವಿಚಾರಣೆ ಮಾಡಬೇಕು ಎಂದು ತಾಕಿತು ಮಾಡಿದರು.

ಕಳೆದ 2 ವರ್ಷಗಳಿಂದ ಹಲವು ಗ್ರಾಮ ಮತ್ತು ತಾಂಡಾಗಳಲ್ಲಿ ಶಾಲೆ, ಆಸ್ಪತ್ರೆ, ಅಂಗನವಾಡಿ ನಿರ್ಮಾಣ ಮಾಡಿದ್ದೇವೆ,ಆದರೂ ಇನ್ನೂ ಹೆಚ್ಚಿನ ರೀತಿಯಲ್ಲಿ ಕಾಮಗಾರಿಗಳನ್ನುನಿರ್ವಹಿಸುತ್ತೇವೆ, ಮುಂದಿನ ದಿನಗಳಲ್ಲಿ ರಸ್ತೆ, ಚರಂಡಿ ಸೇರಿದಂತೆ ಹಲವು ಮೂಲಸೌಕರ್ಯಗಳಅಭಿವೃದ್ಧಿಗೆ ಹೆಚ್ಚಿನ ಅನುದಾನವನ್ನುಮುಂದಿನ ದಿನಗಳಲ್ಲಿ ಗ್ರಾಮೀಣ ಪ್ರದೇಶದಲ್ಲಿ ನೀಡುತ್ತೇನೆ ಎಂದು ಹೇಳಿದರು.

ವಂಕ್ರಸಂಬ್ರ ಗ್ರಾಮದ ಜನರ ಮನವಿ ಆಲಿಸಿದ ಶಾಸಕರು, ಕೂಡಲೇ ವಿದ್ಯುತ್ ಸಮಸ್ಯೆ ನಿವಾರಿಸಬೇಕು ಎಂದು ಜೆಸ್ಕಾಂ ಅಧಿಕಾರಿ ರಾಠೋಡ ಅವರಿಗೆ ಸೂಚಿಸಿದರು.

## ಗುಣಮಟ್ಟದ ರಸ್ತೆ ನಿರ್ಮಿಸಿ ಶಾಸಕ ಶರಣಗೌಡ ಕಂದಕೂರ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಗುರುಮಠಕಲ್ ಮತಕ್ಷೇತ್ರದವ್ಯಾಪ್ತಿಯಲ್ಲಿಗುಣಮಟ್ಟದ ರಸ್ತೆಗಳಸುಧಾರಣೆಗೆವಿಶೇಷಆದ್ಯತೆ ನೀಡಲಾಗಿದೆ. ಕ್ಷೇತ್ರ ವ್ಯಾಪ್ತಿಯ ಕೆಟ್ಟುಹೋದ ರಸ್ತೆಗಳನ್ನುಮರು ನಿರ್ಮಿಸಲಾಗುತ್ತಿದೆ.ಗುಣಮಟ್ಟದ ರಸ್ತೆನಿರ್ಮಾಣಕ್ಕೆಗುತ್ತಿಗೆದಾರರು ಆದ್ಯತೆನೀಡಬೇಕು,ಅಧಿಕಾರಿಗಳು ಹಾಗಾಗ ಪರಿಶೀಲಿಸಬೇಕು, 6 ತಿಂಗಳ ಗಡುವಿನಲ್ಲಿ ಕಾಮಗಾರಿ ಪೂರ್ಣಗೊಳಿಸಬೇಕು ಎಂದು ಗುರುಮಠಕಲ್ ಶಾಸಕ ಶರಣಗೌಡ ಕಂದಕೂರ ಹೇಳಿದರು.




ಗುರುಮಠಕಲ್ ತಾಲೂಕಿನ ಮಾಧ್ವಾರಗ್ರಾಮದಲ್ಲಿ ಮುಧೋಳ ಯಲಗೇರಾ ಆಂಧ್ರ ಬಾರ್ಡ್ರ್ ವರೆಗೆ4 ಕೋಟಿ ವೆಚ್ಚದ ರಸ್ತೆ ನಿರ್ಮಾಣ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿ ಮಾತನಾಡಿದರು.

ಮತಕ್ಷೇತ್ರದಎಲ್ಲಸಮುದಾಯವರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಮುಂದಿನ ದಿನಗಳಲ್ಲಿ ಗ್ರಾಮೀಣ ಭಾಗದಲ್ಲಿಮೂಲಸೌಕರ್ಯಕ್ಕೆಹೆಚ್ಚಿನ ಒತ್ತುನೀಡಲಾಗುವುದು,ಸಿಸಿ ರಸ್ತೆ ಸೇರಿದಂತೆ ಗುಣಮಟ್ಟದ ರಸ್ತೆಗಳ ಸುಧಾರಣೆ ಕೈಗೊಳ್ಳಲಾಗುವುದು ಎಂದು ತಿಳಿಸಿದರು.ಗ್ರಾಮೀಣ ಭಾಗದ ರಸ್ತೆಗಳ ಅಭಿವೃದ್ಧಿಯಿಂದ ಮಾತ್ರಹಳ್ಳಿಗಳ ಪ್ರಗತಿ ಸಾಧ್ಯವಿದ್ದು, ತಾಲೂಕಿನ ಎಲ್ಲಾ ಗ್ರಾಮಗಳಿಗೂ ಪಕ್ಕಾ ರಸ್ತೆ ನಿರ್ಮಾಣಕ್ಕೆ ಆದ್ಯತೆ ನೀಡಲಾಗುತ್ತಿದೆ ಎಂದು ಹೇಳಿದರು.


ಗುತ್ತಿಗೆದಾರರು ಗುಣಮಟ್ಟದ ಕಾಮಗಾರಿ ಮಾಡಬೇಕು. ರಸ್ತೆ ಸುಧಾರಣೆ ಕಾರ್ಯ ನಡೆಯುವಾಗ ಯಾವುದೇ ತೊಂದರೆ-ಯಾಗದಂತೆ ಸಾರ್ವಜನಿಕರೂ ಸಹ ಸಹಕರಿಸಬೇಕು ಎಂದು ಹೇಳಿದರು. ಈ ಸಂದರ್ಭದಲ್ಲಿ ಜೆಡಿಎಸ್ ಜಿಲ್ಲಾಧ್ಯಕ್ಷರಾದ ಸುಭಾಶ್ಚಂದ್ರ ಕಟಕಟಿ, ಪಿಡಬ್ಲುಡಿ ಎಇಇ ಪರಶುರಾಮ ಮುಷ್ಟೂಕರ್, ತಾಪಂ ಇಒ ಅಮರೇಶ ಪಾಟೀಲ, ಅಮರನಾಥರಡ್ಡಿ ವಂಕಸಂಬ್ರ, ಬನ್ನಪ್ಪಗೌಡ ವಂಕಸಂಬ್ರ,ಶಂಕ್ರಪ್ಪ ಕಾಳಗಿ, ಶರಣಗೌಡ, ಸಾಯಪ್ಪ, ಗೋಪಾಲ, ಶಿವರಾಜ, ಜಾನಪ್ಪ, ಶಂಕರರಡ್ಡಿಯಲಸತ್ತಿ,ವೀರೇಂದ್ರರಡ್ಡಿ ಯಲಸ್ತಿ , ರಾಘವೇಂದ್ರ ರಡ್ಡಿ ವಡವಟ್, ಆನಂದ ವಡವಟ್, ಗುರುನಾಥರಡ್ಡಿ,ಮಲ್ಲಿಕಾರ್ಜುನ ಅರುಣಿ, ನರಸಪ್ಪ ಕವಡೆ, ಪರ್ವತರಡ್ಡಿ ಕಾಳಬೆಳಗುಂದಿ, ರಾಘವೇಂದ್ರ ಜೈಗ್ರಾಮ, ಭೀಮರಾಯ ಗುಡ್ಲಗುಂಟಾ ಸೇರಿದಂತೆ ಇತರರಿದ್ದರು.

### ಪಿಡಿಒಗಳು ಫೋನ್ ಸ್ವಿಚ್ ಮಾಡ್ಬೇಡಿ : ಪಿಡಿಒ ಗಿರಿಮಲ್ಲಣ್ಣಗೆ ಶಾಸಕರ ತರಾಟೆ

ಯಾದಗಿರಿ : ಗ್ರಾಮೀಣ ಭಾಗದಲ್ಲಿ ಜನ ಸಮಸ್ಯೆ ಪರಿಹರಿಸಲು ಸರ್ಕಾರದ ಸೌಲತ್ತುಗಳನ್ನು ಜನರಿಗೆ ತಲುಪಿಸಬೇಕಾದ ಪಿಡಿಒಗಳು ಫೋನ್ ಸ್ವಿಚ್ ಆಫ್ ಮಾಡಬಾರದು, ಹೀಗೆ ಮಾಡಿದರೆ ಹೇಗೆ ಎಂದು ಮಾಧ್ವಾರ ಗ್ರಾಮದ ಗ್ರಾಪಂ ಅಭಿವೃದ್ಧಿ ಅಧಿಕಾರಿ(ಪಿಡಿಒ) ಗಿರಿಮಲ್ಲಣ್ಣರವರನ್ನು ತರಾಟೆಗೆ ತೆಗೆದುಕೊಂಡರು.

ರಸ್ತೆ ಅಭಿವೃದ್ಧಿ ಕಾಮಗಾರಿಗೆ ಚಾಲನೆ ಕಾರ್ಯಕ್ರಮದಲ್ಲಿ ಜನ ಸಮಸ್ಯೆ ಕೇಳುತ್ತಿರುವ ಸಂದರ್ಭದಲ್ಲಿ ಅಲ್ಲಿನ ಜನರು ಪಿಡಿಒ ಫೋನ್ ಸ್ವಿಚ್ ಆಫ್ ಮಾಡಿರುತ್ತಾರೆ, ಯಾರಿಗೆ ಮಾತನಾಡಬೇಕು ಎಂದು ಶಾಸಕರ ಬಳಿ ದೂರಿದಾಗ ಸ್ಥಳದಲ್ಲಿ ತಾಪಂ ಇಒ ರವರಿಗೆ ನಿಮ್ಮ ಪಿಡಿಒಗಳು ಯಾವುದೇ ಕಾರಣಕ್ಕೂ ಫೋನ್ ಸ್ವಿಚ್ ಆಫ್ ಮಾಡದಂತೆ ಕ್ರಮಕೈಗೊಳ್ಳಿ, ಗ್ರಾಮೀಣ ಪ್ರದೇಶದಲ್ಲಿನ ಕುಡಿಯುವ ನೀರಿನ ಸೌಲಭ್ಯ ಒದಗಿಸಲು ಗ್ರಾಪಂ ಅನುದಾನದಲ್ಲಿ ಕ್ರಮಕೈಗೊಳ್ಳಬೇಕು, ಒಂದು ವೇಳೆ 1 ಲಕ್ಷಕ್ಕೂ ಮೀರಿದರೆ ನಾನು ಶಾಸಕರ ಅನುದಾನದಲ್ಲಿ ಹಣ ನೀಡುತ್ತೇನೆ ಯಾವುದೇ ಕಾರಣಕ್ಕೂ ಸಬೂಬು ಹೇಳದರೆ ಕುಡಿಯುವ ನೀರಿನ ಸಮಸ್ಯೆ ಬಗೆಹರಿಸಬೇಕು ಎಂದು ತಾಕೀತು ಮಾಡಿದರು.

## ಜಾನುವಾರುಗಳ ಮಾಲೀಕರಿಗೆ ಶಾಸಕ ಕಂದಕೂರ ಪರಿಹಾರ ಚೆಕ್ ವಿತರಣೆ




ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಗುರುಮಠಕಲ್ ಮತಕ್ಷೇತ್ರದಲ್ಲಿ ವಿದ್ಯುತ್ ಅವಘಡಗಳಿಂದ ಮೃತಪಟ್ಟ ಜಾನುವಾರುಗಳ ಮಾಲೀಕರಿಗೆ ಶಾಸಕ ಶರಣಗೌಡ ಕಂದಕೂರ್ ಪರಿಹಾರದ ಚೆಕ್ ವಿತರಣೆ ಮಾಡಿದರು.


ತಮ್ಮ ಯಾದಗಿರಿಯ ಕಚೇರಿ ಆವರಣದಲ್ಲಿ ಮಲ್ಹಾರ ಗ್ರಾಮದ ಮೃತಜಾನುವಾರುಗಳಮಾಲೀಕರಿಗೆ ಚೆಕ್ ವಿತರಿಸಿ ಮಾತನಾಡಿದ ಅವರು, ಯಾವುದೇ ಕಾರಣಕ್ಕೂ ಪರಿಹಾರ ಚೆಕ್ ಸ್ವಂತ ಖರ್ಚಿಗೆ ಬಳಸಬೇಡಿ,ಮೃತುಜಾನುವಾರುಗಳ ಜಾಗದಲ್ಲಿ ಮತ್ತೊಂದು ಹೊಸ ಜಾನುವಾರು ತೆಗೆದುಕೊಂಡು ಬಂದು ಸದುಪಯೋಗ ಪಡಿಸಿಕೊಳ್ಳಬೇಕು, ಸ್ವಂತ ಖರ್ಚಿಗೆ ಬಳಸಿಕೊಂಡಲ್ಲಿ ಬಡವರಿಗೆ ಮತ್ತೊಮ್ಮೆ ಜಾನುವಾರು ಖರೀದಿಸಲು ಆಗಲ್ಲ ಆದ್ದರಿಂದ ಮರಳಿ ಜಾನುವಾರು ಖರೀದಿಸಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಮಲ್ಹಾರ ಗ್ರಾಮದ ಮುಖಂಡರಾದ ಮಹಿಪಾಲರಡ್ಡಿ,ಸಿದ್ದಲಿಂಗರಡ್ಡಿಗೌಡ, ವೆಂಕಟರಡ್ಡಿ, ಆಂಜನೇಯ ನಾಯಕ ಸೇರಿದಂತೆ ಇತರರಿದ್ದರು.

## ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ವಿರುದ್ಧ ಕೇಂದ್ರ ಮಂತ್ರಿ ಕುಮಾರಸ್ವಾಮಿ ಟೀಕೆಗೆ ಶಾಸಕ ಚನ್ನಾರಡ್ಡಿ ತಿರುಗೇಟು

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ಅಭಿವೃದ್ಧಿ ವಿಷಯದಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಟೀಕಿಸುವ ಯಾವ ನೈತಿಕತೆಯು ಕೇಂದ್ರ ಮಂತ್ರಿ ಕುಮಾರಸ್ವಾಮಿ ಅವರಿಗೆ ಇಲ್ಲ ಎಂದು ಶಾಸಕ ಚನ್ನಾರಡ್ಡಿ ಪಾಟೀಲ್ ತುನ್ನೂರು ಹೇಳಿದ್ದಾರೆ.



ಈ ಕುರಿತು ಹೇಳಿಕೆ ನೀಡಿರುವ ಅವರು, ರಾಜಕಾರಣ ಮತ್ತು ಅಧಿಕಾರದಲ್ಲಿ ಸುಮಾರು ಐವತ್ತು ವರ್ಷಗಳಿಂದಲ್ಲೂ ಇರುವ ಖರ್ಗೆ ಅವರ ಅಭಿವೃದ್ಧಿ ಮತ್ತು ಸಾಧನೆ ಬಗ್ಗೆ ನಾಡಿನ ಸಮಸ್ತ ಜನತೆಗೆ ಗೊತ್ತಿದೆ. ತಮಗೆ ಕಾಣಿಸಿಲ್ಲ ಮತ್ತು ಈ ಬಗ್ಗೆ ಓದಿಕೊಂಡಿಲ್ಲ ಎಂದರೇ ಇತಿಹಾಸ ತಿರುವಿ ನೋಡಿ, ದಾಖಲೆಗಳನ್ನು ತೆಗೆಸಿ ನೋಡಿ ಎಂದು ಸವಾಲು ಹಾಕಿದ್ದಾರೆ. ಕಲ್ಯಾಣ ಕರ್ನಾಟಕದ ಅಭಿವೃದ್ಧಿಗಾಗಿ 371(ಜೆ) ಜಾರಿ, ಕೇಂದ್ರೀಯ ವಿಶ್ವವಿದ್ಯಾಲಯ, ಇಎಸ್ಐ ಆಸ್ಪತ್ರೆ, ಹೈಕೋರ್ಟ್ ಪೀಠ್, ಪೊಲೀಸ್ ತರಬೇತಿ ಕೇಂದ್ರ ಹೀಗೆ ಬೆರಳೆಣಿಕೆಯಷ್ಟು ಕೆಲಸಗಳು ನಿಮ್ಮ ಗಮನಕ್ಕೆ ತರಲಾಗಿದ್ದು, ಬೇಕಾದರೇ ಒಂದು ದೊಡ್ಡ ಪಟ್ಟಿಯೇ ಸಿದ್ದಪಡಿಸಿ ನೀಡಲಾಗುವುದೆಂದು ಶಾಸಕರು ಕುಮಾರಸ್ವಾಮಿಯವರ ಟೀಕೆಗೆ ಉತ್ತರಿಸಿದ್ದಾರೆ.

ದೇಶ ಮತ್ತು ರಾಜ್ಯವನ್ನೇ ಆಳಿದ ಕುಟುಂಬ ನಿಮ್ಮದು. ನೀವೆಷ್ಟು ಅಭಿವೃದ್ಧಿ ಮಾಡಿದ್ದಿರಿ, ಎಷ್ಟು ಜನಕ್ಕೆ ಬೆಳೆಸಿದ್ದಿರಿ ಎಂದು ಪಾಟೀಲ್ ಪ್ರಶ್ನಿಸಿದ್ದಾರೆ.

ಹಿಂದುಳಿದ ಜಿಲ್ಲೆಗಳ ಅಭಿವೃದ್ಧಿಗೆ ರಾಜ್ಯ ಸರ್ಕಾರ ಹೊಸ,ಹೊಸ ಯೋಜನೆಗಳ ಮೂಲಕ ಸಕಾರಗೊಳಿಸಲು ಮುಂದಾಗಿದ್ದು ತಮಗೆ ಸಹಿಸಿಕೊಳ್ಳಲು ಆಗುತ್ತಿಲ್ಲ. ನಿಖರ ಕಾರಣವಿಲ್ಲದೇ ಅಕ್ಕ,ಪಕ್ಕ ಕುಳಿತವರಿಂದ ಕೇಳಿ,ಕೇಳಿ ಖರ್ಗೆ ಅವರ ಬಗ್ಗೆ ಟೀಕಿಸುವುದು ನೋಡಿದರೇ ಬಾಯಿ ಚಪಲಕ್ಕೆ ಮತ್ತುಯಾರನ್ನೋ ಖುಷಿಪಡಿಸಲು ಮಾತಾಡಿದ್ದರಿ ಎಂಬುವುದು ಓರ್ವ ಅನಕ್ಷಸ್ಥರನಿಗೂ ಅರ್ಥವಾಗುತ್ತದೆ ಎಂದು ತುನ್ನೂರು ತಿರುಗೇಟು ನೀಡಿದ್ದಾರೆ.

ಹಿರಿಯರು, ಎರಡು ಸಲ ಸಿಎಂ ಆದವರು ತಾವು. ನಿಮ್ಮಿಂದ

ಹಿರಿಯ ಮುತ್ಸದಿ, ರಾಷ್ಟ್ರೀಯ ನಾಯಕರಾದ ಮಲ್ಲಿಕಾರ್ಜುನ ಖರ್ಗೆ ಅವರ ಬಗ್ಗೆ ಈ ರೀತಿಯ ಇಲ್ಲದ ಸಲ್ಲದ ಟೀಕೆಗಳು ಶೋಭೆ ತರುವಂತಹದಲ್ಲ ಎಂದು ಶಾಸಕ ಚನ್ನಾರಡ್ಡಿ ಪಾಟೀಲ್ ಅವರು, ಕುಮಾರಸ್ವಾಮಿ ಅವರ ಆರೋಪಗಳನ್ನುತಳ್ಳಿಹಾಕಿದ್ದಾರೆ.

## ರೆಡ್ ಕ್ರಾಸ್ ಸಮಾಜಮುಖಿ ಕಾರ್ಯ ಹತ್ತುಹಲವು – ಸಿದ್ದರಾಮೇಶ್ವರ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಭಾರತೀಯ ರೆಡ್ ಕ್ರಾಸ್ ಸಂಸ್ಥೆ ಕೇವಲ ರಕ್ತಭಂಡಾರವನ್ನಷ್ಟೇ ನಡೆಸುವುದಿಲ್ಲ. ವಿಪತ್ತು ನಿರ್ವಹಣೆ ಸೇರಿದಂತೆ ಹತ್ತುಹಲವು ಸಮಾಜಮುಖಿ ಕಾರ್ಯಗಳನ್ನು ನಡೆಸುತ್ತದೆ ಎಂದು ಅಪರ ಜಿಲ್ಲಾಧಿಕಾರಿ ಸಿದ್ದರಾಮೇಶ್ವರ ಅವರು ಹೇಳಿದರು.

ನಗರದ ಜಿಲ್ಲಾ ಪಂಚಾಯಿತಿ ಜೆ.ಚ್.ಪಟೇಲ್ ಸಭಾಂಗಣದಲ್ಲಿ ಭಾರತೀಯ ರೆಡ್ ಕ್ರಾಸ್ ಜಿಲ್ಲಾ ಶಾಖೆ ಹಮ್ಮಿಕೊಂಡಿದ್ದ ವಿಶ್ವರಕ್ತದಾನಿಗಳ ದಿನಾಚರಣೆ ಕಾರ್ಯಮಕ್ರಮವನ್ನುಉದ್ಘಾಟಿಸಿ ಅವರು ಮಾತನಾಡಿದರು.

ಅಸಹಾಯಕರಿಗೆ ಸಹಾಯ ಮಾಡುವುದು, ನೊಂದವರಿಗೆ ನೆರವು ನೀಡುವುದು, ವಿಪತ್ತು ಸಂದರ್ಭದಲ್ಲಿ ತುರ್ತು ಪರಿಹಾರ ಮತ್ತು ಚಿಕಿತ್ಸೆಯನ್ನು ನೀಡುವ ಅಂತರಾಷ್ಟ್ರೀಯ ಮಟ್ಟದ ಸಂಸ್ಥೆಯಾಗಿದೆ. ಕೊಪ್ಪಳದಲ್ಲಿನ ತನ್ನ ಶಾಖೆ ಅತ್ಯುತ್ತಮವಾಗಿ ಕಾರ್ಯನಿರ್ವಹಿಸುತ್ತಿರುವುದು ಶ್ಲಾಘನೀಯ ಎಂದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಲಿಂಗರಾಜ ಟಿ.ಅವರು ಮಾತನಾಡಿ, ಭಾರತೀಯ ರೆಡ್ ಕ್ರಾಸ್ ಸಂಸ್ಥೆಯ ಬ್ಲಡ್ ಬ್ಯಾಂಕ್ ಇರುವುದರಿಂದಲೇ ಜಿಲ್ಲೆಯಲ್ಲಿ ಆಸ್ಪತ್ರೆಯಲ್ಲಿ ಚಿಕಿತೆ-ಗೂ ಸಹಕಾರಿಯಾಗಿದೆ. ಹೆರಿಗೆ ಸಂದರ್ಭದಲ್ಲಿ ಬೇಕಾಗುವ ರಕ್ತ ಸುಲಭವಾಗಿ ದೊರೆಯುವುದರಿಂದ ಬೇರೆ ಬೇರೆ ಜಿಲ್ಲೆಯವರು ಇಲ್ಲಿಗೆ ಹೆರಿಗೆಗೆ ಬರುತ್ತಿದ್ದಾರೆ. ಹುಬ್ಬಳ್ಳಿಯಲ್ಲಿ ರಕ್ತಬೇಕಾದಗೂ ಕೊಪ್ಪಳ ಬ್ಲಡ್ ಬ್ಯಾಂಕಿನಿಂದ ನಾನೇ ಕಳುಹಿಸಿಕೊಟ್ಟಿದ್ದೇನೆ. ರೆಡ್ ಕ್ರಾಸ್ ಸಂಸ್ಥೆಯವರು ನಿಜಕ್ಕೂ ಸಾಕಷ್ಟು ಒಳ್ಳೆಯ ಕಾರ್ಯ ಮಾಡುತ್ತಿದ್ದಾರೆ. ಹಳ್ಳಿ ಹಳ್ಳಿಯಲ್ಲಿಯೂ ಜಾಗೃತಿ ಮೂಡಿಸಿದ್ದಾರೆ ಎಂದರು.

ಅರ್ಹ ಫಲಾನುಭಿಗಳಿಗೆ ಕನ್ನಡಕ, ಶ್ರವಣಸಾಧನ ಹಾಗೂ ಜಿಲ್ಲಾಸ್ಪತ್ರೆ, ತಾಲೂಕು ಕಚೇರಿ ಹಾಗೂ ರೈಲ್ವೆ ನಿಲ್ದಾಣಗಳಿಗೆ ವೀಲ್ ಚೇರ್ ವಿತರಣೆ ಮಾಡಲಾಯಿತು. ಹೆಚ್ಚುಬಾರಿ ರಕ್ತದಾನ ಮಾಡಿದವರನ್ನು ಸನ್ಮಾನಿಸಲಾಯಿತು. ಜಿಲ್ಲಾ ಶಾಖೆ ಸಭಾಪತಿ ಸೋಮರಡ್ಡಿ ಅಳವಂಡಿ ಅಧ್ಯಕ್ಷತೆ ವಹಿಸಿದ್ದರು. ರೆಡ್ ಕ್ರಾ ಸಂಸ್ಥೆಯ ರಾಜ್ಯ ಶಾಖೆಯ ಉಪಸಭಾಪತಿ ಡಾ. ಶ್ರೀನಿವಾಸ ಹ್ಯಾಟಿ ಪ್ರಸ್ಥಾವಿಕವಾಗಿ ಮಾತನಾಡಿ, ಅಮೃತಾ ಸಜ್ಜನ ಪ್ರಾರ್ಥನಾ ಗೀತೆ ಹಾಡಿದರು. ಶಿವನಗೌಡ ಪಾಟೀಲ್ ಸ್ವಾಗತಿಸಿದರು. ರಮೇಶ ತುಪ್ಪದ ವಂದನಾರ್ಪಣೆ ಮಾಡಿದರು. ಡಾ. ಮಂಜುನಾಥ ಸಜ್ಜನ ಕಾರ್ಯಕ್ರಮ ನಿರೂಪಿಸಿದರು.

ಡಾ. ರವಿಕುಮಾರ ದಾನಿ, ಶಿವಕುಮಾರ ದಾನರಡ್ಡಿ, ಡಾ. ಗವಿ ಪಾಟೀಲ್ ಇದ್ದರು.

## ಒಕ್ಕೂಟಗಳ ಬಲವರ್ಧನೆ ಸಂಜೀವಿನಿ ಯೋಜನೆಯು ಸಹಕಾರಿ : ಬಸವರಾಜ ಮುಂಡರಗಿ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ರಾಷ್ಟ್ರಿಯ ಜೀವನಘಾಯ ಅಭಿಯಾನವು ಮಹಿಳೆಯರಿಗೆ ಸ್ವಾತಂತ್ರ್ಯವಾಗಿ ಸುಸ್ಥಿರ ಜೀವನೋಪಾಯ ಚಟುವಟಿಕೆಗಳನ್ನುಕೈಗೊಳ್ಳುವಲು ಒಕ್ಕೂಟಗಳ ಬಲವರ್ಧನೆ ಅಗತ್ಯವಾಗಿದೆಂದು ಸಂಜೀವಿನಿ ಯೋಜನೆಯ ಜಿಲ್ಲಾ ಸಂಪನ್ಮೂಲ ವ್ಯಕ್ತಿ ಬಸವರಾಜ ಮುಂಡರಗಿ ಹೇಳಿದರು .



ಅವರು ಗಂಗಾವತಿ ತಾಲೂಕಿನ ಮರಳಿ ಗ್ರಾಮ ಪಂಚಾಯತ ಸಂಜೀವಿನಿ ಒಕ್ಕೂಟದ ದೂರದೃಷ್ಟಿ ಹಾಗೂ ವ್ಯಾಪಾರ ಅಭಿವೃದ್ಧಿ ಯೋಜನೆಯ ಒಂದನೇ ಹಂತದ ತರಬೇತಿ ಕಾರ್ಯಕ್ರಮದಲ್ಲಿ ಮಾತನಾಡಿದರು

ಪ್ರತಿ ಗ್ರಾಮ , ಕುಟುಂಬ ಅಭಿವೃದ್ಧಿಯಾಗಬೇಕದರೆ ದುಡಿಮೆ ಉಗ್ಯೋಗ, ಪುರುಷರಷ್ಟೆ ದುಡಿದರೆ ಸಾಲದು ಪ್ರತಿಯೊಬ್ಬ ಮಹಿಳೆಯರು ಆರ್ಥಿಕವಾಗಿ ಸಭಲಿಕರಣ ಹೊಂದುವದರ ಜೊತೆಗೆ ಶೈಕ್ಷಣಿಕವಾಗಿ ಸಾಮಾಜಿಕವಾಗಿ ರಾಜಕೀಯವಾಗಿ ಬೆಳೆದು ಔದ್ಯೋಗಿಕ ಬೆಳೆದು ಸ್ವಾವಲಂಬಿ ಬದಕು ಕಟ್ಟಿಕೊಳ್ಳಬೇಕು ಎನ್ನುವದು ಸರಕಾರ ದ ಉದ್ದೇಶವಾಗಿದೆ ಸಂಜೀವಿ ಸ್ವ ಸಹಾಯ ಗುಂಪು ಸದಸ್ಯರಿಗೆ ಕಡಿಮೆ ಸೇವಾ ಶುಲ್ಕ ದರದಲ್ಲಿ ಸಾಲ ನೀಡಲಾಗುತ್ತದೆ ಸದುಪಯೊಗ ಪಡೆದು ವಿವಿಧ ಇಲಾಖೆಗಳ ಸರಕಾರಿ ಸೌಲಭ್ಯಗಳನ್ನು ಪಡೆದು ಸ್ವಯಂ ಉದ್ಯೋಗ ಪಡೆಯಲು ಸಹಾಯ ಮಾಡಲಾಗುತ್ತದೆ ,ಹಾಗೂ ಗುಂಪಿನ ಸದಸ್ಯರು ತಯಾರಿಸಿದ ಉತ್ಪನಗಳಿಗೆ ಮಾರುಕಟ್ಟೆಯ ವ್ಯವಸ್ಥೆ ಕಲ್ಪಿಸುವಲ್ಲಿ ಮಹತ್ವದ ಪಾತ್ರ ವಹಿಸುತ್ತದೆ

ಸಂಜೀವಿನಿ ಒಕ್ಕೂದ ಸದಸ್ಯರಾಗಿ ಒಕ್ಕೂಟದಿಂದ ಸಾಲ ಪಡೆದು ಬದುಕು ಕಟ್ಟಿಕೊಳ್ಳಬೇಕು ಮತ್ತು ಒಕ್ಕೂವೂ ಮುಂದಿನ ಐದು ವರ್ಷಗಳಲ್ಲಿ ಕ್ರೀಯಾ ಯೋಜನೆ ತಯಾರಿಸಿ ದೂರದೃಷ್ಟಿ ಚಿಂತನೆಯಿಂದ ಪ್ರತಿಯೋಬ್ಬರ ಕನಸು ನನಸು ಮಾಡಲು ಪ್ರಯತ್ನ ಮಾಡಲಾಗುತ್ತದೆ ಸದಸ್ಯರು ತರಬೇತಿ ಪಡೆದು ಸದುಪಯೋಗ ಪಡೆಯಲು ಸಲಹೆ ನೀಡಿದರು

ಕಾರ್ಯಕ್ರಮ ಅಧ್ಯಕ್ಷತೆಯನ್ನು ಒಕ್ಕೂಟ ಅಧ್ಯಕ್ಷೆ ಪಾರ್ವತಿ ಹೇಮಗುಡ್ಡ ವಹಿಸಿದ್ದರು ವಹಿಸಿದ್ದರು ಕಾರ್ಯದರ್ಶಿ ವನಜಾಕ್ಷಿ ಹಾದಿಮನಿ, ಖಜಾಂಚಿ ಶರಣಮ್ಮ ಯರಡೋಣಿ, ಎಬಿಕೆ ದೊಡ್ಡಬಸಮ್ಮ ಎಲ್ ಸಿ ಆರ್ ಪಿಗಳಾದ ಶಶಿಕಲಾ ಅರಳಿಹಳ್ಳಿ ಎಲ್ ಸಿ ಆರ್ ಪಿ . ಯಂಕಮ್ಮ ನಾಗರತ್ನಮ್ಮ ಕಳಿಮಠ, ಅನ್ನಪೂರ್ಣ ಚಲವಾದಿ, ಸಖಿಗಳಾದ ಸುನಿತಾ ಚಲವಾದಿ, ರಂಜಾನಬೀ ಹೊಸಮನಿ, ತ್ರೀವೇಣಿ ನೆಕ್ಕುಂಟಿ, ಸಂಘದ ಸದಸ್ಯರು ಭಾಗವಹಿಸಿದ್ದರು.

## ಪ್ರವಚನ ಕಾರ್ಯಕ್ರಮದಲ್ಲಿ ಪೂಜ್ಯ ಪ್ರಭುಲಿಂಗ ಶರಣರ ಅಭಿಮತ

## ಮದುವೆಯ ಎಂಬುದು ಪವಿತ್ರ ಬಂಧನ



ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ: ವೀರಶೈವ ಲಿಂಗಾಯತ ಧರ್ಮದಲ್ಲಿ ಮದುವೆ ಎಂಬ ಕರ್ಮವು ಬಹಳ ವೈಶಿಷ್ಟತೆಯನ್ನು ಪಡೆದು-ಕೊಂಡಿದೆ. ಅದು ಕೇವಲ ಒಂದು ಗಂಡು ಮತ್ತು ಹೆಣ್ಣಿನ ನಡುವೆ ಮಾಡಿಕೊಂಡ ಒಪ್ಪಂದವಾಗಿರದೆ ಜೀವನ ಪೂರ್ತಿ ನಿರ್ವಹಿಸುವ ಒಂದು ಜವಾಬ್ದಾರಿ ಹಾಗೂ ಪವಿತ್ರವಾದ ಬಂಧನವಾಗಿದೆ ಎಂದು ಪ್ರವಚನಕಾರ ಹಿಕ್ಕನಗುತ್ತಿ ಲಿಂಗಾಯತ ಮಹಾಮಠದ ಪೂಜ್ಯ ಪ್ರಭುಲಿಂಗ ಶರಣರು ಹೇಳಿದರು. ಪಟ್ಟದ ರಾಜವಾಡೆ ಮೈದಾನದಲ್ಲಿ ಕಿತ್ತೂರು ರಾಣಿ ಚೆನ್ನಮ್ಮಳ ಪುತ್ಥಳಿ ಸ್ಥಾಪನೆಯ ದ್ವಿತೀಯ ವಾರ್ಷಿಕೋತ್ಸವದ ಅಂಗವಾಗಿ ಹಮ್ಮಿಕೊಂಡಿರುವ ಚೆನ್ನಮ್ಮಾಜಿ ಜೀವನ ಚರಿತ್ರೆ ಪ್ರವಚನ ಕಾರ್ಯಕ್ರಮದಲ್ಲಿ ಸೋಮವಾರ "ಚೆನ್ನಮ್ಮಾಜಿಯ ಮದುವೆ" ಕಾರ್ಯಕ್ರಮದ ಸಾನಿಧ್ಯ ವಹಿಸಿ ಅವರು ಆಶೀರ್ವಚನ ನೀಡಿದರು. ಚೆನ್ನಮ್ಮಳ ಮದುವೆ ಅವಳ 15ನೇ ವಯಸ್ಸಿನಲ್ಲಿ ಕಿತ್ತೂರಿನ ದೇಸಾಯಿ ಮನೆತನದ ಪ್ರಸಿದ್ಧ ರಾಜಾ ಮಲ್ಲಸರ್ಜನನ ಜೊತೆಯಲ್ಲಿ ನೆರವೇರಿತು. ಇದರ ಪ್ರತೀಕವಾಗಿ ಇಂದಿನ ಪ್ರವಚನದ ಈವೇದಿಕೆಯಲ್ಲಿ ಎರಡು ವಿವಾಹಿತ ಜೋಡಿಗಳ ಮದುವೆಯನ್ನು ಶಾಸ್ತ್ರೋಕ್ತವಾಗಿ ಮಾಡಲಾಗಿದೆ, ಸತಿ-ಪತಿಗಳು ಪರಸ್ಪರ ಅರಿತು ಬಾಳಿದರೆ ಬಾಳು ಬಂಗಾರ ಹಾಗೂ ಅರ್ಥಪೂರ್ಣವಾಗುತ್ತದೆ ಎಂದರು. ರಾಜವಾಡೆಯ ಪ್ರತಿಷ್ಠಿತ ವೀರನಗೌಡ ದೊಡ್ಡಪ್ಪಗೌಡ ಪಾಟೀಲ ಇವರ ಮೊಮ್ಮಕ್ಕಳು ಮದುವೆ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ಕಾರ್ಯಕ್ರಮದಲ್ಲಿ ಸಮಿತಿಯ ಗೌರವಾಧ್ಯಕ್ಷ ಸಿ.ಎಸ್.ಪಾಟೀಲ, ಅಧ್ಯಕ್ಷೆ ನೀಲಮ್ಮ ಎಸ್.ಪಾಟೀಲ, ಉಪಾಧ್ಯಕ್ಷ ಕಲ್ಲಪ್ಪ ಪಾಟೀಲ, ಪ್ರಧಾನ ಕಾರ್ಯದರ್ಶಿ ಎಂ.ಬಿ.ಕೋಟಿ, ಕಾರ್ಯದರ್ಶಿ ಬಿ.ಕೆ.ಪಾಟೀಲ, ಸಮಾಜದ ಗಣ್ಯರು ಹಿರಿಯರು ಹಾಗು ಮಹಿಳೆಯರು ಇದ್ದರು. ಖಾಸ್ಗತೇಶ್ವರ ಸಂಗೀತ ಶಾಲೆಯ ದಿಲೀಪಸಿಂಗ್ ಹಜೇರಿ ಹಾಗೂ ಸಂಗಡಿಗರು ಸಂಗೀತ ಕಾರ್ಯಕ್ರಮ ನಡೆಸಿಕೊಟ್ಟರು.

## ಯೋಗ ದಿನಾಚರಣೆ ಶಿಬಿರ ಸಸಿ ಗೆ ನೀರು ಹಾಕುವ ಮೂಲಕ ಉದ್ಘಾಟನೆ

ಮಲ್ಲಮ್ಮ ನುಡಿ ವಾರ್ತೆ

ಲಿಂಗಸುಗೂರು:ಪಟ್ಟಣದ ಜ್ಯೂನಿಯರ್ ಕಾಲೇಜ ಆವರಣದಲ್ಲಿ ನಡೆದ 5 ದಿನಗಳ ಕಾಲ ಉಚಿತ ಯೋಗ ಶಿಬಿರ ಮತ್ತು ಅಂತರಾಷ್ಟ್ರಿಯ ಯೋಗ ದಿನಾಚರಣೆ ಅಂಗವಾಗಿ ಪುರಸಭೆ ಅಧ್ಯಕ್ಷ ಬಾಬು ರೆಡ್ಡಿ ಮುನ್ನೂರು ಸಸಿ ಗೆ ನೀರು ಹಾಕುವ ಮೂಲಕ ಉದ್ಘಾಟನೆ ಮಾಡಿದರು.ನಂತರ ಮಾತನಾಡಿದ ಯೋಗ ದಿನಾಚರಣೆ ಪ್ರತಿ ವರ್ಷದಂತೆ ಈ ವರ್ಷವು ಕೂಡ ಲಿಂಗಸುಗೂರು ಪಟ್ಟಣದಲ್ಲಿ ಮಾಡುತ್ತಿರುವದು ಸಂತಸ ತಂದಿದೆ ಯೋಗವನ್ನು ವಿಸ್ತಾರವಾಗಿ ತಿಳಿದುಕೊಂಡು ಯೊಗ ಶರೀರದ ಆರೋಗ್ಯಕ್ಕೆ ಒಳ್ಳೆದು ಯೋಗ ಶಾಂತಿ ನೆಮ್ಮದಿ ಕಾಪಡುತ್ತೆ ಎಂದು ಹೇಳಿದರು.ಪತಂಜಲಿ ಯೋಗ ಸಮಿತಿ ಅಧ್ಯಕ್ಷ ಈರಣ್ಣ ಶೆಟ್ಟಿ ಗುರುಸ್ವಾಮಿ ಮಾತನಾಡಿ ಭಾರತೀಯ ಶ್ರೇಷ್ಟವಿದ್ಯೆಗಳಲ್ಲಿ ಯೋಗವಿದ್ಯೆಯು ಒಂದು ಸಣಾತನ ಪರಂಪರೆಯ ಗೌರವ,ವೇದ,ಉಪನಿಷತ್ತುಗಳಲ್ಲಿ



ಯೋಗದ ಮಹಿಮೆಯ ವರ್ಣನೆಗಳಿವೆ ಯೋಗವು ಪ್ರತಿ ಮನೆ ಮನಗಳ ಪ್ರಮುಖ ಜೀವನ ಪದ್ಧತಿಯಾಗಿದೆ ಕೇವಲ ಭಾರತವಷ್ಟೆ ಅಲ್ಲದೇ ಇಡಿ ವಿಶ್ವವೆಲ್ಲಾ ಯೋಗಮಯ ವಾತವರಣದಿಂದ ತುಂಬಿದೆ ಇದು ಭಾರತೀಯ ಗೌರವ ಪರಂಪರೆಯ ವಿಜಯ ಯಾತ್ರೆಯಾಗಿದೆ ಸಾಕಷ್ಟು ದೇಶಗಳ ಯೋಗದ ಮೂಲಕ ನಮ್ಮ ದೇಶದೊಂದಿಗೆ ಯೋಗ,ಶರೀರ,ಮನಸ್ಸು,ಬುದ್ದಿಯನ್ನು ಜೋಡಿವ ಕಾರ್ಯ ಮಾಡುತ್ತದೆ.ಯೋಗ ಮನಸ್ಸುನ್ನು ಸ್ಥಿರಗೊಳಿಸಿ ಜೀವನದ ಎಲ್ಲ ಅನುಕೂಲ ಅನಾನುಕುಲಗಳ ಮಧ್ಯ ಸ್ವಸ್ಥ ಮನಸ್ಸಿನೊಂದಿಗೆ ಬದುಕುವ ಕಲೆಯನ್ನು ನೀಡುತ್ತದೆ ಹಾಗಗಿ ಯೋಗ ಕೇವಲ ಗೋಗಗಳಿಗಷ್ಟೇ ಅಲ್ಲದ ಮನಸ್ಸನ್ನು ಪ್ರಸನ್ನಗೊಳಿಸಲು ಸಾಮಾಜಿ ಶಾಂತತೆಗಾಗಿ ಹಾಗೂ ವಿಶ್ವಭಂದುತ್ವದಲ್ಲಿ ಯೋಗದ ಪಾತ್ರ ಅತ್ಯಂತ ಮಹತ್ವದ್ದಾಗಿದೆ ಎಂದು ಹೇಳಿದರು.ಯೋಗ ಶಿಬಿರ ಕಾರ್ಯಕ್ರಮದಲ್ಲಿ ಬಸವಲಿಂಗಯ್ಯ ಹಿರೇಮಠ,ಭೀಮನಗೌಡ ಗೌಡರ್,ಬಾಲಕ್ರಿಷ್ಣಒಡೆಯರ್,ವೇಂಕಟೇಶ ಕೊಂಪಲ್,ಅಶೋಕ ಬಿಜಾಪೂರ,ಡಾ.ವಿಕ್ರಮಗೌಡ ಪೋಲಿಸ್ ಪಾಟೀಲ್, ಮಲ್ಲಿಕಾರ್ಜುನಗೌಡ,ನಾಗರಾಜ ತಿಪ್ಪಣ್ಣ,ಉಮೇಶ ಶಿಕ್ಷಕರು,ಚನ್ನಬಸವ ಬರಿಗಲ್,ಬಸನಗೌಡ ಪಾಟೀಲ್ ಶಿಕ್ಷಕರು,ವೀರೇಶ ಮಾಟೂರು,ರಂಗಣ್ಣ ಯಮನಾಳ ಶಿಕ್ಷಕರು,ಸೇರಿದಂತೆ ಮಹಿಳೆಯರು, ಯೋಗ ಶಿಬಿರಾರ್ಥಿಗಳು ಅನೇಕರು ಇದ್ದರು.

## ಕಲಾವಿದರನ್ನು ತಬ್ಬಲಿ ಮಾಡಿದ ರಂಗಭೂಮಿ ಕಲಾವಿದ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ತಾಲೂಕಿನ ಇಲ್ಕಲ್ಗಡ ಗ್ರಾಮದಲ್ಲಿ ರಂಗಭೂಮಿ ಕಲಾವಿದ ಶರಣಪ್ಪಗೋಸಲದೊಡ್ಡಿ ಹೃದಯ ಅಪಘಾತದಿಂದ ಇಂದು ಬೆಳಗಿನ ಜಾವ ನಿಧನ ಹೊಂದಿದ್ದಾರೆ ಸಂಗೀತವನ್ನೇ ತನ್ನ ಜೀವಾಳ ಎಂದುಕೊಂಡು ಹಲವಾರು ಕಾರ್ಯಕ್ರಮಗಳಲ್ಲಿ ಸಂಬಳವಿಲ್ಲದೆ ಕೆಲಸ ಮಾಡುತ್ತಿದ್ದ ಕುಟುಂಬ ನಿರ್ವಹಣೆಗಾಗಿ ಎನ್‌ಜಿಒದಲ್ಲಿ ಕೆಲಸ ಮಾಡುತ್ತಿದ್ದ ಯಾವುದಾದರೂ ಭಜನೆ ಊರಿನ ಕಾರ್ಯಕ್ರಮ ಊರಿನ ಜಾತ್ರೆ ನಾಟಕ ಎಂದರೆ ಸಾಕು ತಾನು ಮಾಡುತ್ತಿದ್ದ ಕೆಲಸವನ್ನು ಬಿಟ್ಟು ಕಾರ್ಯಕ್ರಮದಲ್ಲಿ ಭಾಗಿಯಾಗುತ್ತಿದ್ದ ಸುಮಾರು ವರ್ಷಗಳ ಹಿಂದೆ ಇರ್ಕಲ್ಗಡ



ಗ್ರಾಮದಲ್ಲಿ ಪುಟ್ಟರಾಜ ಗವಾಯಿಗಳ ನಾಟಕ ಕಂಪನಿ ಸುಮಾರು ತಿಂಗಳು ಗ್ರಾಮದಲ್ಲಿ ಹಮ್ಮಿಕೊಂಡ ನಾಟಕದಲ್ಲಿ ಹಾರ್ಮೋನಿಯಂ ಸೇವೆ ಸಲ್ಲಿಸಿದ ಹಲವಾರು ಕಲಾವಿದರಿಗೆ ಮಾದರಿಯಾಗಿದ್ದ ಊರಿನ ಜಾತ್ರೆ ಬಂದರೆ ಸಾಕು ಸಂಗೀತ ಕಾರ್ಯಕ್ರಮವನ್ನು ತಾನೆ ಮುಂದೆ ನಿಂತುಕೊಂಡು ಕಾರ್ಯಕ್ರಮವನ್ನು ನಡೆಸಿಕೊಡುತ್ತಿದ್ದ ಕಲಾವಿದನ ಅಗಲಿಕೆಯಿಂದ ಹೆಂಡತಿ ಚಿಕ್ಕ ಮಕ್ಕಳನ್ನು ಹೊಂದಿರುವ ಕುಟುಂಬ ದಿಕ್ಕು ತೋಚದೆ ಕಂಗಾಲಾಗಿದೆ ಆಕಸ್ಮಿಕ ನಿಧನದಿಂದ ವಿಧಿವಶವಾದ ಶರಣಪ್ಪ ಗೋಸಲ ದೊಡ್ಡಿ ಕುಟುಂಬಕ್ಕೆ ಸಂಬಂಧಪಟ್ಟ ರಾಜಕಾರಣಿಗಳು ಅಧಿಕಾರಿಗಳು ನರವಿನ ಹಸ್ತ ಬೇಕಾಗಿದೆ ಈ ಸಂದರ್ಭದಲ್ಲಿ ಕಲಾವಿದರಾದ ರಮೇಶ್ ಬುಡ್ಯಟ್ನಾಳ್ ಶೇಖಪ್ಪ ಪಿನ್ನಿ ಶಿವು ಉಪ್ಪಾರ್ ರಾಜು ದೇಸಾಯಿ ರವಿ ಗುತ್ತೂರ್ , ಮಂಜು ದೇಸಾಯಿ ಪರಶುರಾಮ್ ಬೋವಿ ಕರಿಯಪ್ಪ ಕದ್ರಳ್ಳಿ ಪ್ರಕಾಶ್ ಪತ್ತಾರ್ , ಮುದಿಯಪ್ಪ ಚೆನ್ನಿ ಹಾಳ ಒತ್ತಾಯಿಸಿದರು ಮಂಗಳವಾರ ಸಂಜೆ ಇಲ್ಕಲ್ಗಡ ರುದ್ರಭೂಮಿಯಲ್ಲಿ ಕಲಾವಿದನ ಅಂತ್ಯಕ್ರಿಯೆ ನೆರವೇರಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

# ತೀವ್ರತರ ಅತಿಸಾರ ಭೇದಿ ಇದ್ದಲ್ಲಿ ಓಆರ್‌ಎಸ್ ದ್ರಾವಣ ಹಾಗೂ ಜಿಂಕ್ ಮಾತ್ರೆ ಬಳಸಿ: ಡಿಹೆಚ್‌ಓ ಡಾ.ಯಲ್ಲಾ ರಮೇಶ್ ಬಾಬು



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.17-ಮಕ್ಕಳಲ್ಲಿ ತೀವ್ರತರ ಅತಿಸಾರ ಭೇದಿ ಕಂಡುಬಂದಲ್ಲಿ ಓಆರ್‌ಎಸ್ ದ್ರಾವಣ ಹಾಗೂ ಜಿಂಕ್ ಮಾತ್ರೆ ಬಳಸಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ಹೇಳಿದರು. ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಸಹಯೋಗದೊಂದಿಗೆ ನಗರದ ಬ್ರೂಸ್‌ಪೇಟೆ ನಗರ ಆರೋಗ್ಯ ಕೇಂದ್ರ ವ್ಯಾಪ್ತಿಯ ಬಟ್ಟಿ ಏರಿಯಾ ಕೊರಚಗೇರಿ ಕಾಲೋನಿಯ ಬಸಮ್ಮ ಸ್ಮಾರಕ ಪ್ರಾಥಮಿಕ ಮತ್ತು ಪ್ರೌಢಶಾಲೆಯಲ್ಲಿ ಸೋಮವಾರ ಹಮ್ಮಿಕೊಂಡಿದ್ದ ತೀವ್ರತರ ಅತಿಸಾರ ಭೇಧಿ ನಿಯಂತ್ರಣ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಅತಿಸಾರಭೇದಿಯು ಹುಟ್ಟಿನಿಂದ 5 ವರ್ಷದೊಳಗಿನ ಮಕ್ಕಳ ಮರಣ ಕಾರಣಗಳಲ್ಲಿ ಒಂದಾಗಿದ್ದು, ಶೇ.10 ರಷ್ಟು ಇದರಿಂದ ಮರಣ ಹೊಂದುತ್ತಾರೆ. ಈ ಹಿನ್ನಲೆಯಲ್ಲಿ ಓಆರ್‌ಎಸ್ ದ್ರಾವಣ ಹಾಗೂ ಜಿಂಕ್ ಮಾತ್ರೆಯನ್ನು 14 ದಿನಗಳ ಕಾಲ ಮಗುವಿಗೆ ನೀಡುವ ಮೂಲಕ ಮಗುವಿನ ಆರೋಗ್ಯ ಕಾಪಾಡುವ ಅತಿಸಾರ ಭೇದಿಯನ್ನು ಬಹು ಸುಲಭವಾಗಿ ನಿಯಂತ್ರಿಸಬಹುದಾಗಿದೆ ಎಂದರು.

ರಾಜ್ಯದಲ್ಲಿ ತೀವ್ರತರ ಅತಿಸಾರ ಭೇದಿ ನಿಯಂತ್ರಣ ಕಾರ್ಯಕ್ರಮವನ್ನು 2014-15ನೇ ಸಾಲಿನಿಂದ "ತೀವ್ರತರ ಅತಿಸಾರ ಭೇದಿಯಿಂದ ಶೂನ್ಯ ಮಕ್ಕಳ ಮರಣ" ಎಂಬ ಧ್ಯೇಯ ವಾಕ್ಯದೊಂದಿಗೆ ಆಚರಿಸಲಾಗುತ್ತಿದೆ. ಪ್ರಸ್ತುತ 2025-26ನೇ ಸಾಲಿನಲ್ಲಿ ಜೂನ್ 16 ರಿಂದ ಜುಲೈ 31 ರವರೆಗೆ ಜಿಲ್ಲೆಯಾದ್ಯಂತ ಆಚರಿಸಲಾಗುತ್ತಿದ್ದು, ಜಿಲ್ಲೆಯಲ್ಲಿ ಒಟ್ಟು 1,97,264 ಮಕ್ಕಳಿಗೆ ಓಆರ್‌ಎಸ್ ಪೊಟ್ಟಣ ಹಾಗೂ ಅಗತ್ಯಯುಳ್ಳವರಿಗೆ ಜಿಂಕ್ ಮಾತ್ರೆ ವಿತರಿಸಲಾಗುವುದು.

ಪೋಷಕರು ಮತ್ತು ಮಕ್ಕಳಿಗೆ ಪರಿಸರ ನೈರ್ಮಲ್ಯ, ಕೈತೊಳೆಯುವ ವಿಧಾನ, ವೈಯಕ್ತಿಕ ಶುಚಿತ್ವದ ಬಗ್ಗೆ ಹಾಗೂ ಅತಿಸಾರ ಭೇದಿಗೆ ಒಳಗಾದ ಮಕ್ಕಳಿಗೆ ಆರೈಕೆ ಮತ್ತು ಚಿಕಿತ್ಸೆ ನೀಡುವ ವಿಧಾನದ ಅರಿವು ಮೂಡಿಸಲು ತಮ್ಮ ಮನೆಗೆ ಆಗಮಿಸುವ ವೈದ್ಯಕೀಯ ತಂಡಗಳಿಗೆ ಸಹಕರಿಸುವಂತೆ ಕೋರಿದರು.

ಶಾಲಾ ಮುಖ್ಯೋಪಾಧ್ಯಾಯರಾದ ರಾಜಶೇಖರ್ ಅಧ್ಯಕ್ಷತೆ ವಹಿಸಿ ಮಾತನಾಡಿ, ಕೊಳಚೆ ಪ್ರದೇಶದ ಈ ಶಾಲೆಯಲ್ಲಿ 600ಕ್ಕೂ ಹೆಚ್ಚು ಮಕ್ಕಳು ಓದುತಿದ್ದು, ವೈಯಕ್ತಿಕ ಶುಚಿತ್ವದ ಕಾರ್ಯಕ್ರಮ ನಮ್ಮ ಶಾಲೆಯಲ್ಲಿ ಹಮ್ಮಿಕೊಳ್ಳುವ ಮಕ್ಕಳಿಗೆ ಜಾಗೃತಿ ನೀಡುವ ಆರೋಗ್ಯ ಇಲಾಖೆಯ ಕಾರ್ಯ ಶ್ಲಾಘನೀಯವಾಗಿದೆ ಎಂದರು.

ವೈದ್ಯರು ಹೇಳಿದಂತೆ ಊಟದ ಪೂರ್ವ ಹಾಗೂ ಶೌಚದ ನಂತರ 6 ವಿಧಾನಗಳ ಮೂಲಕ ಕೈಗಳನ್ನು ತೊಳೆದುಕೊಂಡು ರೋಗ ಹರಡದಂತೆ ಹಾಗೂ ಓಆರ್‌ಎಸ್ ದ್ರಾವಣ ಸಿದ್ದಪಡಿಸಿದ ನಂತರ 24 ಗಂಟೆಯೊಳಗಡೆ ಬಳಸುವಂತೆ ಮಕ್ಕಳು ಜಾಗೃತಿ ವಹಿಸಬೇಕು ಎಂದು ತಿಳಿಸಿದರು.

ಕೈತೊಳೆಯುವ ವಿಧಾನ ಹಾಗೂ ಓಆರ್‌ಎಸ್ ದ್ರಾವಣ ತಯಾರಿ-ಕೆ ಕುರಿತು ಸಿಬ್ಬಂದಿಯವರು ಪ್ರಾತ್ಯಕ್ಷತೆಯ ಮೂಲಕ ಮಕ್ಕಳಿಗೆ ಜಾಗೃತಿ ನೀಡಿದರು.

ಈ ಸಂದರ್ಭದಲ್ಲಿ ಬ್ರೂಸ್‌ಪೇಟೆಯ ನಗರ ಆರೋಗ್ಯ ಕೇಂದ್ರದ ಆಡಳಿತ ವೈದ್ಯಾಧಿಕಾರಿ ಡಾ.ಸುರೇಖಾ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ್ ದಾಸಪ್ಪನವರ್, ಮುಖ್ಯ ಗುರುಗಳಾದ ಚೆನ್ನನಗೌಡ, ಶಿಕ್ಷಕರಾದ ನಾಗರಾಜ್, ವಿರುಪಾಕ್ಷಿ, ಜಿಲ್ಲಾ ನರ್ಸಿಂಗ್ ಅಧಿಕಾರಿ ಜಿ.ಗಿರೀಶ್ ಕುಮಾರ್, ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿಗಳಾದ ಚೈತ್ರ, ಪ್ರಸನ್ನ ಜ್ಯೋತಿ, ಅರುಣಾ ಜ್ಯೋತಿ, ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಶಿಲ್ಪ, ದೀಪ ಸೇರಿದಂತೆ ಶಿಕ್ಷಕರು, ಆಶಾ ಕಾರ್ಯಕರ್ತೆಯರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಜಿಟಿಟಿಸಿ: ತರಬೇತಿಗಾಗಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.17-ಜಿಲ್ಲೆಯಲ್ಲಿ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಸಂಸ್ಥೆಯ ಬಹುಕೌಶಾಲ್ಯಾಭಿವೃದ್ಧಿ ಕೇಂದ್ರವು ನೂತನವಾಗಿ ಪ್ರಾರಂಭವಾಗಿದ್ದು, ತರಬೇತಿಗಾಗಿ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಹತ್ತನೇ ತರಗತಿ ಉತ್ತೀರ್ಣ ಮತ್ತು ಅನುತ್ತೀರ್ಣರಾದ ಯುವಕರಿಗೆ 'ಟೂಲರೂಮ್ ಮಶಿನಿಸ್ಟ್' ತಾಂತ್ರಿಕ ವೃತ್ತಿ ತರಬೇತಿಗೆ ಪ್ರವೇಶಾತಿ ಪ್ರಾರಂಭವಾಗಿದೆ. ಎಸ್.ಎಸ್.ಎಲ್.ಸಿ ಉತ್ತೀರ್ಣರಾದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಉಚಿತ ತರಬೇತಿ ನೀಡಲಾಗುತ್ತದೆ.

ತರಬೇತಿ ಹೊಂದಿದ ಅಭ್ಯರ್ಥಿಗಳಿಗೆ ಕೈಗಾರಿಕೆಗಳಲ್ಲಿ ಹೆಚ್ಚಿನ ಬೇಡಿಕೆಯಿದ್ದು, ಒಂದೇ ಕೋರ್ಸಿನಲ್ಲಿ ಟರ್ನರ್, ಮಿಲ್ಲರ್, ಗ್ರೈಂಡರ್, ಸಿಎನ್‌ಸಿ, ಕ್ಯಾಡ್-ಕ್ಯಾಮ್ ಮತ್ತು ಟೂಲ್ ಆಂಡ್ ಡೈ ಮೇಕಿಂಗ್ ಟ್ರೇಡ್‌ಗಳಲ್ಲಿ ಆನ್ ದಿ ಜಾಬ್ ತರಬೇತಿ ನೀಡುವುದರಿಂದ ವಿದ್ಯಾರ್ಥಿಗಳಿಗೆ ಹೆಚ್ಚು ಉದ್ಯೋಗಾವಕಾಶಗಳು ದೊರಕುತ್ತವೆ. ಜೊತೆಗೆ ಆಟೊಕ್ಯಾಡ್, ಕನ್ನಡ ಮತ್ತು ಇಂಗ್ಲಿಷ್ ಭಾಷಾ ಕೌಶಲ್ಯ ಹಾಗೂ ಉದ್ಯೋಗ ಕೌಶಲ್ಯಗಳನ್ನು ಕಲಿಸಲಾಗುತ್ತದೆ.

ಜಿಟಿಟಿಸಿ ಸಂಸ್ಥೆಯು ಉನ್ನತ ತಂತ್ರಜ್ಞಾನ ಮತ್ತು ತರಬೇತಿ ಸೌಲಭ್ಯಗಳನ್ನು ಅಳವಡಿಸಿಕೊಂಡಿದ್ದು, ಕೈಗಾರಿಕೆಗಳಲ್ಲಿ ಅನುಭವ ಹೊಂದಿದ ಶಿಕ್ಷಕರನ್ನು ಹೊಂದಿದೆ. ತರಬೇತಿಯ ನಂತರ ವಿದ್ಯಾರ್ಥಿಗಳಿಗೆ ಟೂಲಿಂಗ್, ವಿಮಾನ ತಯಾರಿಕೆ, ಮತ್ತು ಆಟೊಮೊಬೈಲ್ ವಲಯಗಳ ಕೈಗಾರಿಕೆಗಳಲ್ಲಿ ಉದ್ಯೋಗ ದೊರಕಿಸಿ ಕೊಡಲಾಗುವುದು.

ಸರ್ಕಾರದ ವಿವಿಧ ಯೋಜನೆಯಡಿ "ಮೆಕ್ಯಾನಿಕಲ್-ಕ್ಯಾಡ್/ಕಾಮ್", "ಎಲೆಕ್ಟ್ರಾನಿಕ್ಸ್-ಆಟೋಮೇಶನ್ ಮನೆ/ಕೈಗಾರಿಕೆ, ಪಿ.ಎಲ್.ಸಿ ಪ್ರೋಗ್ರಾಮಿಂಗ್, ಅಡ್ವಾನ್ಸ್ ಹೈಡ್ರಾಲಿಕ್ಸ್ ಮತ್ತು ನ್ಯೂಮ್ಯಾಟಿಕ್ಸ್", "ಎಲೆಕ್ಟ್ರಿಕಲ್- ಮನೆ/ಕೈಗಾರಿಕೆ ಇನ್ಸಾಲೇಷನ್, ಸಿಕ್ಯಾಡ್ ಮತ್ತು ಕಂಪ್ಯೂಟರ್ ಸೈನ್ಸ್-ಕಂಪ್ಯೂಟರ್ ಅಪ್ಲಿಕೇಷನ್ ವಿಭಾಗದ ಉಚಿತ ಮತ್ತು ಪಾವತಿ ತಾಂತ್ರಿಕ ಕೌಶಲ್ಯ ಅಲ್ಪಾವಧಿ ತರಬೇತಿಗಳನ್ನು ಪ್ರಾರಂಭಿಸಲಾಗುತ್ತಿದೆ.

ಕನಿಷ್ಠ 8ನೇ ತರಗತಿ, ಎಸ್‌ಎಸ್‌ಎಲ್‌ಸಿ, ಪಿಯುಸಿ, ಪದವಿ, ಐಟಿಐ, ಡಿಪ್ಲೋಮಾ, ಬಿ.ಇ ಉತ್ತೀರ್ಣರಾದ 16 ರಿಂದ 35 ವಯೋಮಿತಿಯೊಳಗಿನ ಅಭ್ಯರ್ಥಿಗಳು ತರಬೇತಿ ಪಡೆಯಲು ಅರ್ಹರು. ತರಬೇತಿ ಪಡೆಯಲು ಆದಾಯದ ಮಿತಿ ಇರುವುದಿಲ್ಲ.

ಹೆಚ್ಚಿನ ಮಾಹಿತಿಗಾಗಿ ನಗರದ ಕಂಟೋನ್‌ಮೆಂಟ್‌ನ ಐಶ್ವರ್ಯ ಕಾಲೋನಿಯ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರ (ಐ.ಟಿ.ಐ. ಕ್ಯಾಂಪಸ್) ಅಥವಾ ಮೊ.9972320076,9620057086 ಗೆ ಸಂಪರ್ಕಿಸಬಹುದು ಎಂದು ಜಿಟಿಟಿಸಿಯ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ: ಯುಪಿಎಸ್‌ಸಿ ಮುಖ್ಯ ಪರೀಕ್ಷಾ ಪೂರ್ವ ತರಬೇತಿಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.17-ಅಲ್ಪಸಂಖ್ಯಾತರ ನಿರ್ದೇಶನಾಲಯ ವತಿಯಿಂದ ಪ್ರಸಕ್ತ ಸಾಲಿನಲ್ಲಿ ಅಲ್ಪಸಂಖ್ಯಾತರ ಸಮುದಾಯದವರಿಗೆ ಯುಪಿಎಸ್‌ಸಿ ಮುಖ್ಯ ಪರೀಕ್ಷಾ ಪೂರ್ವ ತರಬೇತಿ ಪಡೆಯಲು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ವಿಠೋಬಾ ಹೊನಕಾಂಡೆ ಅವರು ತಿಳಿಸಿದ್ದಾರೆ. ಆಸಕ್ತ ಅಭ್ಯರ್ಥಿಗಳು ನಿರ್ದೇಶನಾಲಯದ ಪೋರ್ಟಲ್‌ನ ್ಣಣಈ://ಜಠಟ.ಇಚಿಡಿಟಚಿ-ಣಚಿಇಚಿ.ರಠತ.ಟ ಗೆ ಭೇಟಿ ನೀಡಿ ಅರ್ಜಿ ಸಲ್ಲಿಸಬೇಕು.

ಅರ್ಜಿಯೊಂದಿಗೆ ಪೂರಕ ದಾಖಲೆಗಳನ್ನು ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಕಚೇರಿಗೆ ಸಲ್ಲಿಸಬೇಕು. ಆಯ್ಕೆಯಾದ ಅಭ್ಯರ್ಥಿಗಳಿಗೆ ಬೆಂಗಳೂರು ನಗರದ ಹಜ್ ಭವನದಲ್ಲಿ 03 ತಿಂಗಳ ವಸತಿ ಸಹಿತ ಶಿಷ್ಯವೇತನದೊಂದಿಗೆ ತರಬೇತಿಯನ್ನು ನೀಡಲಾಗುವುದು.

ಅರ್ಜಿ ಸಲ್ಲಿಸಲು ಜೂ.21 ಕೊನೆಯ ದಿನವಾಗಿದೆ.

ಹೆಚ್ಚಿನ ಮಾಹಿತಿಗಾಗಿ ನಗರದ ಜೋಳದರಾಶಿ ದೊಡ್ಡನಗೌಡ ರಂಗಮಂದಿರ ಹತ್ತಿರದ ಮೌಲನಾ ಅಜಾದ ಭವನದ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳ ಕಚೇರಿ ಅಥವಾ ದೂ.08392-200125/224ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷ ಕೆ.ನಾಗಣ್ಣ ಗೌಡ ಅವರ ಪ್ರವಾಸ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.17-ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷ ಕೆ.ನಾಗಣ್ಣ ಗೌಡ ಅವರು ಜೂ.18 ರಂದು ಬಳ್ಳಾರಿಯಲ್ಲಿ ಪ್ರವಾಸ ಕೈಗೊಳ್ಳುವರು.

ಅಂದು ಬೆಳಿಗ್ಗೆ 10 ಗಂಟೆಗೆ ಬಳ್ಳಾರಿಗೆ ಆಗಮಿಸಿ, ಜಿಲ್ಲೆಯ ವಿವಿಧ ಮಕ್ಕಳ ಪಾಲನಾ ಸಂಸ್ಥೆಗಳಿಗೆ ಅನೀರಿಕ್ಷಿತ ಭೇಟಿ ಮತ್ತು ಪರಿಶೀಲನೆ ನೀಡುವರು.

ಬಳಿಕ ಮಧ್ಯಾಹ್ನ 02.30 ಕ್ಕೆ ನಗರದ ಜಿಲ್ಲಾ ಪಂಚಾಯತ್‌ನ ನಜೀರ್ ಸಭಾಂಗಣದಲ್ಲಿ ಆರ್.ಟಿ.ಇ, ಪೋಕ್ಸೋ ಮತ್ತು ಬಾಲನ್ಯಾಯ ಕಾಯ್ದೆ ಅನುಷ್ಠಾನ ಕುರಿತು ಜಿಲ್ಲಾ ಪ್ರಗತಿ ಪರಿಶೀಲನಾ ಸಭೆ ನಡೆಸುವರು. ಬಳಿಕ ಬೆಂಗಳೂರಿಗೆ ತೆರಳುವರು ಎಂದು ಪ್ರಕಟಣೆ ತಿಳಿಸಿದೆ.

# ವಿಜಯನಗರ ಶ್ರೀ ಕೃಷ್ಣದೇವರಾಯ ವಿವಿ: ಎರಡು ಪ್ರಕರಣಗಳ ತನಿಖೆಗೆ ನಿವೃತ್ತ ನ್ಯಾಯಾಧೀಶರ ನೇಮಕ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.17-ಬಳ್ಳಾರಿಯ ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದಲ್ಲಿ ಕಾನೂನು ಬಾಹಿರವಾಗಿ ನಡೆದ ಎರಡು ಪ್ರಕರಣಗಳ ಕುರಿತು ತನಿಖೆಗೆ ಬೆಳಗಾವಿ ಜಿಲ್ಲಾ ಸತ್ರ ನ್ಯಾಯಾಲಯದ ನಿವೃತ್ತ ಜಿಲ್ಲಾ ನ್ಯಾಯಾಧೀಶರಾದ ಡಿ.ಎಸ್.ಶಿಂಧೆ ಅವರನ್ನು ತನಿಖಾಧಿಕಾರಿಯಾಗಿ ನೇಮಿಸಿ ಆದೇಶ ಜಾರಿಗೊಳಿಸಲಾಗಿದೆ ಎಂದು ವಿವಿಯ ಕುಲಪತಿ ಪ್ರೊ.ಎಂ.ಮುನಿರಾಜು ಅವರು ತಿಳಿಸಿದ್ದಾರೆ.

ವಿವಿಯ ಪರೀಕ್ಷಾ ವಿಭಾಗದಲ್ಲಿ ಜರುಗಿದ ಕಾನೂನುಬಾಹಿರ ಘಟಿಕೋತ್ಸವ ಪ್ರಮಾಣ ಪತ್ರ ವಿತರಣೆ ಪ್ರಕರಣ ಮತ್ತು ವಿವಿಯ ಇತಿಹಾಸ, ಪುರಾತತ್ವ ಅಧ್ಯಯನ ವಿಭಾಗದ ಸಹ ಪ್ರಾಧ್ಯಾಪಕ ಡಾ.ಅನಂತ್ ಎಲ್ ಝುಂಡೇಕರ್ ಇವರು ವಿಶ್ವವಿದ್ಯಾಲಯದಲ್ಲಿನ ಸಹ ಪ್ರಾಧ್ಯಾಪಕ ಹುದ್ದೆಯ ನೇಮಕಾತಿ ಮತ್ತು ಪ್ರಭಾರ ಕುಲಪತಿಗಳಾಗಿ ಸೇವೆ ಸಲ್ಲಿಸಿದ ಅವಧಿಯಲ್ಲಿನ ಕೆಲ ಕಾನೂನುಬಾಹಿರ ಆದೇಶಗಳ ಕುರಿತಂತೆ ಕುಲಾಧಿಪತಿಗಳ ಕಚೇರಿಯಲ್ಲಿ ದಾಖಲಾದ ಸಾರ್ವಜನಿಕ ಹಿತಾಸಕ್ತಿ ದೂರಿನ ಪ್ರಕರಣಗಳ ಕುರಿತಂತೆ ಇತ್ತೀಚೆಗೆ ಜರುಗಿದ ವಿಶ್ವವಿದ್ಯಾಲಯದ ಸಿಂಡಿಕೇಟ್ ಸಭೆಯಲ್ಲಿ ವಿಷಯ ಮಂಡಿಸಲಾಗಿದ್ದು, ಸಭೆಯು ವಿಸ್ತ್ರತವಾಗಿ ಚರ್ಚಿಸಿ ಈ ಪ್ರಕರಣಗಳ ಕುರಿತಂತೆ ಓರ್ವ ನಿವೃತ್ತ ನ್ಯಾಯಾಧೀಶರಿಂದ ನ್ಯಾಯಾಂಗ ತನಿಖೆ ನಡೆಸಲು ತೀರ್ಮಾನಿಸಲಾಗಿದೆ.

ಹಾಗಾಗಿ ಎರಡೂ ಪ್ರಕರಣಗಳ ಕುರಿತು ತನಿಖೆಗೆ ಬೆಳಗಾವಿ ಜಿಲ್ಲಾ ಸತ್ರ ನ್ಯಾಯಾಲಯದ ನಿವೃತ್ತ ಜಿಲ್ಲಾ ನ್ಯಾಯಾಧೀಶರಾದ ಡಿ.ಎಸ್.ಶಿಂಧೆ ಅವರನ್ನು ತನಿಖಾಧಿಕಾರಿಯಾಗಿ ನೇಮಿಸಿ ಆದೇಶ ಜಾರಿಗೊಳಿಸಲಾಗಿದ್ದು, ಇವರು ಪ್ರಕರಣ ಕುರಿತು 45 ದಿನಗಳ ಒಳಗಾಗಿ ತನಿಖೆ ಕೈಗೊಂಡು ವಿಶ್ವವಿದ್ಯಾಲಯಕ್ಕೆ ವರದಿ ಸಲ್ಲಿಸಲು ಸೂಚಿಸಲಾಗಿದೆ.

ತನಿಖಾ ವರದಿಗಳು ವಿಶ್ವವಿದ್ಯಾಲಯಕ್ಕೆ ಸಲ್ಲಿಕೆಯಾದ ನಂತರ ತಪ್ಪಿತಸ್ಥರ ವಿರುದ್ಧ ಮುಂದಿನ ಶಿಸ್ತು ಕ್ರಮ ಜರುಗಿಸಲಾಗುವುದು ಎಂದು ವಿಶ್ವವಿದ್ಯಾಲಯದ ಕುಲಪತಿಯವರು ಹಾಗೂ ಕುಲಸಚಿವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕುಡತಿನಿ ಪಟ್ಟಣ ಪಂಚಾಯಿತಿ: ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.17-ಕುಡತಿನಿ ಪಟ್ಟಣ ಪಂಚಾಯಿತಿ ವತಿಯಿಂದ 2025-26ನೇ ಸಾಲಿನ ಎಸ್‌ಎಫ್‌ಸಿ ಎಸ್‌ಸಿಎಸ್‌ಪಿ, ಟಿಎಸ್‌ಪಿ ಹಾಗೂ ಇತರೆ ಶೇ.7.25, ವಿಕಲಚೇತನರ ಸೌಲಭ್ಯ ಶೇ.5ರ ಯೋಜನೆಯಡಿ ವೈಯಕ್ತಿಕ ಕಾರ್ಯಕ್ರಮಗಳನ್ನು ಅನುಷ್ಟಾನಗೊಳಿಸಲಾಗುತ್ತಿದ್ದು, ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ.

ಕುಡತಿನಿ ಪಟ್ಟಣ ವ್ಯಾಪ್ತಿಯಲ್ಲಿ ಬರುವ ಪರಿಶಿಷ್ಟ ಪಂಗಡ ವರ್ಗ ಮತ್ತು ಹಿಂದುಳಿದ ವರ್ಗದವರಿಗೆ ನಳ ಸಂಪರ್ಕ ಶುಲ್ಕ ವೆಚ್ಚ ಭರಿಸಲಾಗುವುದು ಮತ್ತು ಕುಡತಿನಿ ಪಟ್ಟಣ ವ್ಯಾಪ್ತಿಯಲ್ಲಿ ಬರುವ ವಿಶೇಷ ಚೇತನರಿಗೆ ಜೀವವಿಮೆ ಮಾಡಿಸಲಾಗುವುದು.

ಅರ್ಜಿ ನಮೂನೆಗಳನ್ನು ಕುಡತಿನಿ ಪಟ್ಟಣ ಪಂಚಾಯಿತಿ ಕಾರ್ಯಾಲಯದಿಂದ ಉಚಿತವಾಗಿ ಪಡೆದು ಭರ್ತಿ ಮಾಡಿ ಪೂರಕ ದಾಖಲೆಗಳೊಂದಿಗೆ ಜುಲೈ 07 ರೊಳಗಾಗಿ ಪಟ್ಟಣ ಪಂಚಾಯಿತಿ ಕಚೇರಿಗೆ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಕುಡತಿನಿ ಪಟ್ಟಣ ಪಂಚಾಯಿತಿ ಕಚೇರಿಗೆ ಸಂಪರ್ಕಿಸಬಹುದು ಎಂದು ಮುಖ್ಯಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬಳ್ಳಾರಿ: ಅಸಮತೋಲನ ನಿವಾರಣೆ ಕುರಿತು ಪರಾಮರ್ಶೆ

# ಸೂಚ್ಯಂಕ ಆಧರಿಸಿ ಸರ್ಕಾರಕ್ಕೆ ವರದಿ ಸಲ್ಲಿಕೆ: ಪ್ರೊ.ಎಂ.ಗೋವಿಂದ ರಾವ್



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.17-ಜಿಲ್ಲೆಯಲ್ಲಿ ಯಾವ ರೀತಿಯ ಬೆಳವಣಿಗೆ ಬದಲಾವಣೆಯಾಗಿದೆ, ಇನ್ನೂ ಏನೇನು ಅಭಿವೃದ್ಧಿಯಾಗಬೇಕಿದೆ ಎಂಬುದನ್ನು ಗುರುತಿಸಿ ಜಿಲ್ಲೆಯಲ್ಲಿ ವಿವಿಧ ವಲಯಗಳ ಸೂಚ್ಯಂಕ ಆಧರಿಸಿ ಪ್ರಾದೇಶಿಕ ಅಸಮತೋಲನ ನಿವಾರಣೆಗೆ ಪರಾಮರ್ಶಿಸಿ ಸರ್ಕಾರ-ಕ್ಕೆ ವರದಿ ನೀಡಲಾಗುವುದು ಎಂದು ಕರ್ನಾಟಕ ಪ್ರಾದೇಶಿಕ ಅಸಮತೋಲನ ನಿವಾರಣಾ ಸಮಿತಿ ಅಧ್ಯಕ್ಷರಾದ ಪ್ರೊ.ಎಂ. ಗೋವಿಂದ ರಾವ್ ಅವರು ಹೇಳಿದರು.

ನಗರದ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ಪ್ರಾದೇಶಿಕ ಅಸಮತೋಲನ ನಿವಾರಣೆ ಕುರಿತು ಮಂಗಳವಾರ ಏರ್ಪಡಿಸಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಡಾ.ಡಿ.ಎಂ.ನಂಜುಂಡಪ್ಪ ಅವರ 2002ರ ವರದಿಯಲ್ಲಿ ಅಂದಿನ 176 ತಾಲೂಕುಗಳನ್ನು ಹಿಂದುಳಿದ, ಅತಿ ಹಿಂದುಳಿದ, ಅತ್ಯಂತ ಹಿಂದುಳಿದ ಹಾಗೂ ಅಭಿವೃದ್ಧಿ ಹೊಂದಿದ ತಾಲೂಕುಗಳೆಂದು 4 ವರ್ಗದಲ್ಲಿ ವರ್ಗೀಕರಿಸಿ ಅದಕ್ಕನುಗುಣವಾಗಿ ಅನುದಾನ ಹಂಚಿಕೆಗೆ ಶಿಫಾರಸ್ಸು ಮಾಡಿದ್ದರು. ಇದರನ್ವಯ ಗುರುತಿಸಲಾದ ಹಿಂದುಳಿದ ತಾಲೂಕುಗಳ ಅಭಿವೃದ್ಧಿಗೆ ಸರ್ಕಾರ 31 ಸಾವಿರ ಕೋಟಿ ರೂ. ವೆಚ್ಚ ಮಾಡಿದೆ ಎಂದರು.

ಅಸಮತೋಲನ ಹೆಚ್ಚಾದಾಗ ಪ್ರದೇಶಗಳು ಹಿಂದುಳಿಯಲಿವೆ. ನಂಜುಂಡಪ್ಪವರದಿ ಅನುಷ್ಠಾನದಿಂದ ಹೇಗೆ ಅಭಿವೃದ್ಧಿಯಾಗಿದೆ ಎಂಬುದನ್ನು ಸೂಚ್ಯಂಕದ ಅಧಾರದ ಮೇಲೆ ನೋಡಲಾಗುತ್ತದೆ. ಹಿಂದುಳಿದಿದ್ದಲ್ಲಿ ಯಾವ ಕಾರಣಕ್ಕಾಗಿ ಯಾವ ಕ್ಷೇತ್ರದಲ್ಲಿ ಹಿಂದೆ ಉಳಿದಿದೆ ಎಂಬುದನ್ನು ಸಮಿತಿಯು ಪರಾಮರ್ಶಿಸಲಿದೆ. ತಲಾ ಆದಾಯ, ಶಿಕ್ಷಣ, ಆರೋಗ್ಯ ಇನ್ನಿತರ ಕ್ಷೇತ್ರಗಳಲ್ಲಿನ ಸುಧಾರಣೆ, ಬೆಳವಣಿಗೆಯ ಬಗ್ಗೆಯು ಸಮಿತಿಯು ಪರಿಶೀಲಿಸಲಿದೆ ಎಂದು ತಿಳಿಸಿದರು.

ರಾಜ್ಯ ಸರ್ಕಾರ 2024 ಸೆಪ್ಟಂಬರ್‌ನಲ್ಲಿ ಪ್ರಾದೇಶಿಕ ಅಸಮತೋಲನ ನಿವಾರಣೆಗಾಗಿ ಆರ್ಥಿಕ ತಜ್ಞರನ್ನೊಳಗೊಂಡ ಸಮಿತಿ ರಚಿಸಿದ್ದು, ಈ ಸಮಿತಿಯು ಕೃಷಿ, ಕೈಗಾರಿಕೆ, ಆರ್ಥಿಕ ಮೂಲ ಸೌಲಭ್ಯ, ಸಾಮಾಜಿಕ ಸೌಲಭ್ಯ, ಹಣಕಾಸಿನ ಮತ್ತು ತಾಂತ್ರಿಕ ಮೂಲ ಸೌಲಭ್ಯ ಮುಂತಾದ ವಲಯಗಳ ಅಭಿವೃದ್ಧಿಯನ್ನು ಗುರುತಿಸಿ ಸೂಚ್ಯಂಕ ನಿಗದಿಪಡಿಸಲಿದೆ. ಬಳಿಕ ಸಮಿತಿಯು ಸರ್ಕಾರಕ್ಕೆ ವರದಿ ಸಲ್ಲಿಸುತ್ತದೆ ಎಂದರು.

ಜಿಲ್ಲೆಯಲ್ಲಿ ಕೈಗಾರಿಕಾ ಅಭಿವೃದ್ಧಿ ಬಹಳ ಮುಖ್ಯವಾಗಿದೆ. ಇಲ್ಲಿನ ಯುವಕರಿಗೆ ಉದ್ಯೋಗ ದೊರೆಯುವಂತೆ ಮಾಡುವುದು ಹಾಗೂ ವಲಸೆ ಹೋಗುವುದನ್ನು ಕಡಿಮೆ ಮಾಡುವುದು ಬಹಳ ಮುಖ್ಯವಾಗಿದೆ ಹಾಗೂ ಜಿಲ್ಲೆಯ ಸರ್ವಾಂಗೀಣ ಅಭಿವೃದ್ಧಿಗಾಗಿ ಹಲವಾರು ಕಾರ್ಯಕ್ರಮಗಳನ್ನು ಹಾಕಿಕೊಳ್ಳಲಾಗಿದೆ ಎಂದು ತಿಳಿಸಿದರು.

ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಮಾತನಾಡಿ, ಇಲ್ಲಿ ಉತ್ಪಾದಿಸುವ ಬೆಳೆಗಳಿಗೆ ಮೌಲ್ಯವರ್ಧನೆ ಆಗಬೇಕಿದೆ. ಮೂಲ ಸೌಕರ್ಯಗಳ ಅಭಿವೃದ್ಧಿಗೆ ಒತ್ತು ಕೊಡಲಾಗಿದೆ. ಟೆಕ್ಸ್‌ಟೈಲ್ಸ್ ಹಬ್, ಮೈನಿಂಗ್, ಕೃಷಿ ಆಧಾರಿತ ಕೈಗಾರಿಕೆಗಳು, ಕೋಲ್ಡ್ ಸ್ಟೋ-ರೇಜ್ ಘಟಕಗಳು, ಬೆಳೆಗಳಿಗೆ ಬೆಂಬಲ ಬೆಲೆ, ನೀರಾವರಿ, ಆಧುನಿಕ ಆಸ್ಪತ್ರೆಗಳು, ಸಣ್ಣ ಉದ್ಯಮಗಳಿಗೂ ಹೆಚ್ಚಿನ ಉತ್ತೇಜನ, ಶಿಕ್ಷಣ ಸಂಸ್ಥೆಗಳಿಗೆ ಮೂಲ ಸೌಕರ್ಯ ಸೇರಿದಂತೆ ಇನ್ನಿತರ ಅಂಶಗಳ ಬಗ್ಗೆ ಮಾಹಿತಿ ನೀಡಿದರು.

ಸಭೆಯಲ್ಲಿ ಜಿಲ್ಲೆಗೆ ಸಂಬಂಧಿಸಿದಂತೆ ಶಿಕ್ಷಣ, ಆರೋಗ್ಯ, ಕೈಗಾರಿಕೆ, ಕೃಷಿ, ಮೂಲಸೌಕರ್ಯ, ತಂತ್ರಜ್ಞಾನ, ಅಭಿವೃದ್ಧಿ, ಸಮಸ್ಯೆಗಳ ಬಗ್ಗೆ ವಿಷಯಾಧಾರಿತ ಚರ್ಚೆ ನಡೆಸಿದ ಸಮಿತಿಯು ಅಧಿಕಾರಿಗಳಿಂದ, ಜಿಲ್ಲೆಯ ಸಂಘ ಸಂಸ್ಥೆಗಳ ಮುಖಂಡರಿಂದ ಮಾಹಿತಿ ಪಡೆದುಕೊಂಡರು. ಸಮಿತಿಯು ಗುರುತಿಸಿರುವ ವಿಷಯಗಳಲ್ಲದೇ ಜಿಲ್ಲೆಗೆ ಸಂಬಂಧಿಸಿದಂತೆ ಇನ್ನೂ ಅನೇಕ ವಿಷಯಗಳನ್ನು ಗಮನಿಸಲಿದೆ ಎಂದರು.

ಈ ಸಂದರ್ಭದಲ್ಲಿ ಕರ್ನಾಟಕ ಪ್ರಾದೇಶಿಕ ಅಸಮತೋಲನ ನಿವಾರಣಾ ಸಮಿತಿಯ ಸದಸ್ಯರಾದ ಪ್ರೊ.ಡಾ.ಎಸ್.ಟಿ. ಬಾಗಲಕೋಟಿ, ಡಾ.ಸಂಗೀತಾ ಕಟ್ಟಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಮಹಮ್ಮದ್ ಹ್ಯಾರೀಸ್ ಸುಮೈರ್, ಜಂಟಿ ಕೃಷಿ ನಿರ್ದೇಶಕ ಸೋಮಸುಂದರ್, ತೋಟಗಾರಿಕೆ ಇಲಾಖೆಯ ಉಪನಿರ್ದೇಶಕ ಸಂತೋಷ್ ಸಪ್ಪಂಡಿ, ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕ ಸೋಮಶೇಖರ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕರಾದ ಉಮಾದೇವಿ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಮತ್ತು ವಿವಿಧ ಸ್ಥಳೀಯ ಸಂಸ್ಥೆಗಳ ಪದಾಧಿಕಾರಿಗಳು, ಮತ್ತಿತರರು ಉಪಸ್ಥಿತರಿದ್ದರು.

# ಸರ್ಕಾರಿ ಪಾಲಿಟೆಕ್ನಿಕ್ ಡಿಪ್ಲೋಮಾ ಪ್ರಥಮ ವರ್ಷಕ್ಕೆ ಪ್ರವೇಶಾತಿಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.17-ನಗರದ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನಲ್ಲಿ 2025-26ನೇ ಸಾಲಿಗೆ ಪೋಸ್ಟ್ ಡಿಪ್ಲೋಮಾ ಇಂಡಸ್ಟ್ರಿಯಲ್ ಸೇಫ್ಟಿ ಪ್ರಥಮ ಸೆಮಿಸ್ಟರ್ ಡಿಪ್ಲೋಮಾ ಕೋರ್ಸ್ ಪ್ರವೇಶಾತಿಗೆ ಆಫ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿಯನ್ನು ಕಾಲೇಜಿನಲ್ಲಿ ಪಡೆದುಕೊಂಡು ಭರ್ತಿ ಮಾಡಿದ ಅಗತ್ಯ ದಾಖಲೆಗಳೊಂದಿಗೆ ಅರ್ಜಿಗಳನ್ನು ಇದೇ ಪಾಲಿಟೆಕ್ನಿಕ್ ಕಾಲೇಜ್‌ನ ಪ್ರಾಂಶುಪಾಲರ ಕಚೇರಿಗೆ ಜೂನ್ 25 ಸಂಜೆ 05 ಗಂಟೆಯೊಳಗೆ ಸಲ್ಲಿಸಬಹುದು.

ಜೂನ್ 26 ರಂದು ಬೆಳಿಗ್ಗೆ 11 ಗಂಟೆಗೆ ತಾತ್ಕಾಲಿಕ ಮೆರಿಟ್ ಪಟ್ಟಿ ಪ್ರಕಟ, ಅಂದು ಸಂಜೆ 03 ರ ವರೆಗೆ ತಿದ್ದುಪಡಿಗೆ ಅವಕಾಶ, ಸಂಜೆ 05 ಗಂಟೆಯವರೆಗೆ ಅಂತಿಮ ಮೆರಿಟ್ ಪಟ್ಟಿ ಪ್ರಕಟಿಸಲಾಗುವುದು. ಜೂನ್ 27 ರಿಂದ ಪ್ರವೇಶ ಪ್ರಕ್ರಿಯೆ ಪ್ರಾರಂಭವಾಗಲಿದೆ.

ಹೆಚ್ಚಿನ ಮಾಹಿತಿಗಾಗಿ ನಗರದ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜ್‌ನ ಪ್ರಾಚಾರ್ಯರ ಕಚೇರಿ ಅಥವಾ ದೂ.08392-242228 ಗೆ ಸಂಪರ್ಕಿಸಬಹುದು ಎಂದು ಸರ್ಕಾರಿ ಪಾಲಿಟೆಕ್ನಿಕ್‌ನ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಿರುಗುಪ್ಪ ನಗರಸಭೆ: ವಿವಿಧ ಸೌಲಭ್ಯಗಳಿಗಾಗಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.17-ಸಿರುಗುಪ್ಪ ನಗರಸಭೆ ವ್ಯಾಪ್ತಿಯಲ್ಲಿ 2019-20 ರಿಂದ 2025-26ನೇ ಸಾಲಿನ ಎಸ್.ಎಫ್.ಸಿ ಯೋಜನೆ ಮತ್ತು ನಗರಸಭೆ ನಿಧಿಯಡಿ ಶೇ.24.10 (ಎಸ್‌ಸಿಎಸ್‌ಪಿ, ಟಿಎಸ್‌ಪಿ), ಶೇ.7.25 ಮತ್ತು ಶೇ.5 ಅನುದಾನದಡಿ ವಿವಿಧ ಯೋಜನೆಗಳಡಿ ಸೌಲಭ್ಯಗಳಿಗಾಗಿ ಸಿರುಗುಪ್ಪ ನಗರದ ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ಜೂ.25 ಕೊನೆಯ ದಿನ.

*ಸೌಲಭ್ಯಗಳು:*

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ವರ್ಗದ ಕಾನೂನು ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಪುಸ್ತಕ ಖರೀದಿಸಲು ಸಹಾಯಧನ ಮತ್ತು ಎಂ.ಬಿ.ಬಿ.ಎಸ್ ಹಾಗೂ ಬಿ.ಇ ವಿದ್ಯಾರ್ಥಿಗಳಿಗೆ ಲ್ಯಾಪ್‌ಟಾಪ್ ಖರೀದಿಸಲು ಸಹಾಯಧನ.

ಇತರೆ ಹಿಂದುಳಿದ ವರ್ಗಗಳ ಕಾನೂನು ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಪುಸ್ತಕ ಖರೀದಿಸಲು ಮತ್ತು ಎಂ.ಬಿ.ಬಿ.ಎಸ್ ಹಾಗೂ ಬಿ.ಇ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಲ್ಯಾಪ್‌ಟಾಪ್ ಖರೀದಿಸಲು, ಪಕ್ಕಾ ಮನೆ ನಿರ್ಮಾಣಕ್ಕೆ, ವೈಯಕ್ತಿಕ ಶೌಚಾಲಯಕ್ಕೆ ನಿರ್ಮಾಣಕ್ಕೆ ಸಹಾಯಧನ.

ವಿಶೇಷ ಚೇತನರಿಗೆ ಪಕ್ಕಾ ಮನೆ ನಿರ್ಮಾಣ, ಶೌಚಾಲಯ ನಿರ್ಮಾಣ ಮತ್ತು ಹೊಸದಾಗಿ ವಾರ್ಷಿಕ ಜೀವವಿಮೆ ಮಾಡಿಸಲು ಸಹಾಯಧನ ನೀಡಲಾಗುವುದು.

ಬೇಕಾದ ದಾಖಲೆ:

ನಿಗದಿತ ಅರ್ಜಿ ನಮೂನೆ, ರೇಷನ್ ಕಾರ್ಡ್, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಆಧಾರ್ ಕಾರ್ಡ್, ಐ.ಡಿ ಕಾರ್ಡ್, 2 ಫೋಟೋ, ಸಮಾಜ ಕಲ್ಯಾಣ ಇಲಾಖೆಯಿಂದ ಯಾವುದೇ ಸೌಲಭ್ಯ ಪಡೆಯದೇ ಇರುವ ಬಗ್ಗೆ ದೃಢೀಕರಣ ಪತ್ರ, ವ್ಯಾಸಂಗ ಪ್ರಮಾಣ ಪತ್ರ, ಬಿ.ಇ, ಎಂ.ಬಿ.ಬಿ.ಎಸ್ ಮಾಡುತ್ತಿರುವ ಬಗ್ಗೆ ದೃಢೀಕರಣ ಪತ್ರ, ಪಕ್ಕಾ ಮನೆ/ಶೌಚಾಲಯ ನಿರ್ಮಾಣಕ್ಕಾಗಿ ಅರ್ಜಿದಾರರ ಹೆಸರಿನಲ್ಲಿರುವ ಆಸ್ತಿಯ ದಾಖಲೆಗಳು, ಅಂಗವಿಕಲತೆ ಇದ್ದಲ್ಲಿ ವೈದ್ಯಾಧಿಕಾರಿಗಳಿಂದ ಪಡೆದ ಪ್ರಮಾಣ ಪತ್ರ ಹಾಗೂ ಇತರೆ ದಾಖಲೆಗಳು ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಸಿರುಗುಪ್ಪ ನಗರಸಭೆ ಕಚೇರಿಗೆ ಭೇಟಿ ನೀಡಿ ಸಂಪರ್ಕಿಸಬಹುದು ಎಂದು ಸಿರುಗುಪ್ಪ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜೂ.20 ರಂದು ಪೂರ್ವಭಾವಿ ಸಭೆ

ಬಳ್ಳಾರಿ,ಜೂ.17-ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಜಿಲ್ಲಾ ಕೇಂದ್ರದಲ್ಲಿ ವಿವಿಧ ಮಹನೀಯರ ಜಯಂತಿ ಕಾರ್ಯಕ್ರಮ ಆಚರಣೆ ಕುರಿತು ಚರ್ಚಿಸಲು ಜೂ.20 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಹಳೆಯ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪೂರ್ವಭಾವಿ ಸಭೆ ಏರ್ಪಡಿಸಲಾಗಿದೆ. ಜೂ.27 ರಂದು ಕೆಂಪೇಗೌಡ ಜಯಂತಿ, ಜುಲೈ 02 ರಂದು ಡಾ.ಫ.ಗು.ಹಳಕಟ್ಟಿಯವರ ಜನ್ಮದಿನ ಅಂಗವಾಗಿ ವಚನ ಸಾಹಿತ್ಯ ಸಂರಕ್ಷಣಾ ದಿನಾಚರಣೆ ಮತ್ತು ಜುಲೈ 10 ರಂದು ಹಡಪದ ಅಪ್ಪಣ್ಣ ಜಯಂತಿ ಕಾರ್ಯಕ್ರಮ ಆಚರಣೆ ಕುರಿತು ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್ ಅವರ ಅಧ್ಯಕ್ಷತೆಯಲ್ಲಿ ಸಭೆ ನಡೆಯಲಿದೆ.

# ಶಶಿಧರ ಕೋಸಂಬೆ ಅವರ ಪ್ರವಾಸ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.17-ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರಾದ ಶಶಿಧರ ಕೋಸಂಬೆ ಅವರು ಜೂ.18 ರಂದು ಬಳ್ಳಾರಿಯಲ್ಲಿ ಪ್ರವಾಸ ಕೈಗೊಳ್ಳುವರು.

ಜೂನ್ 18 ರಂದು ಬೆಳಿಗ್ಗೆ 08 ರಿಂದ ಮಧ್ಯಾಹ್ನ 02 ರ ವರೆಗೆ ಜಿಲ್ಲೆಯ ವಿವಿಧ ಮಕ್ಕಳ ಪಾಲನಾ ಸಂಸ್ಥೆಗಳಿಗೆ ಅನೀರಿಕ್ಷಿತ ಭೇಟಿ ಮತ್ತು ಪರಿಶೀಲನೆ ನಡೆಸುವರು.

ಬಳಿಕ ಮಧ್ಯಾಹ್ನ 02.30 ಕ್ಕೆ ನಗರದ ಜಿಲ್ಲಾ ಪಂಚಾಯತ್‌ನ ನಜೀರ್ ಸಭಾಂಗಣದಲ್ಲಿ ಏರ್ಪಡಿಸಲಾಗುವ ಆರ್.ಟಿ.ಇ, ಪೋಕ್ಸೋ ಮತ್ತು ಬಾಲನ್ಯಾಯ ಕಾಯ್ದೆ ಅನುಷ್ಠಾನದ ಜಿಲ್ಲಾ ಪ್ರಗತಿ ಪರಿಶೀಲನಾ ಸಭೆಯಲ್ಲಿ ಭಾಗವಹಿಸುವರು ಎಂದು ಪ್ರಕಟಣೆ ತಿಳಿಸಿದೆ.

ಜಾಹೀರಾತಿಗಾಗಿ ಇಂದೇ
ಸಂಪರ್ಕಿಸಿ:9449732000

# ಅನಧಿಕೃತ ಧಾರ್ಮಿಕ ಕಟ್ಟಡಗಳ ಪರಿಶೀಲನೆ : ಡಿಸಿ ಜಾನಕಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.17– ನಗರದಲ್ಲಿ ಅನಧಿಕೃತ ಧಾರ್ಮಿಕ ಕಟ್ಟಡಗಳ ಬಗ್ಗೆ ಮಾಹಿತಿ ಪಡೆದು ಶೀಘ್ರದಲ್ಲಿಯೇ ಸೂಕ್ತ ಪರಿಶೀಲನೆ ನಡೆಸಲಾಗುವುದೆಂದು ಜಿಲ್ಲಾಧಿಕಾರಿ ಜಾನಕಿ ಕೆ.ಎಂ ಹೇಳಿದರು.

ಜಿಲ್ಲಾಪಂಚಾಯತಸಭಾಭವನದಲ್ಲಿ ಜರುಗಿದ ಶಾಂತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ವಲಯ ನಿಯಮಾವಳಿ, ಸುಪ್ರೀಂ ಕೋರ್ಟ ಆದೇಶ, ಬಾಗಲಕೋಟೆ ಪಟ್ಟಣ ಅಭಿವೃದ್ದಿ ಪ್ರಾಧಿಕಾರದ ನಿಯಮಾವಳಿ ಹಾಗೂ ಠರಾವು ಪ್ರತಿಗಳು ಇದ್ದರೆ ಮಾತ್ರ ನಿರ್ಧಾರ ಕೈಗೊಳ್ಳಲು ಸಾಧ್ಯವಾಗುತ್ತದೆ. ಪ್ರಸ್ತುತ ಅವರಲ್ಲಿರುವ ಮಾಹಿತಿ ಏನು ಇದೆ. ಬೈಲಾದಲ್ಲಿರುವ ನಿಯಮಾವಳಿಗಳನ್ನು ಇದಕ್ಕೆ ಕೈಗೊಂಡ ಕ್ರಮಗಳ ಬಗ್ಗೆ ಮಾಹಿತಿ ಪಡೆಯಲು ಸಂಬಂಧಪಟ್ಟ ವಲಯ ಯೋಜನೆಯ ಅಧಿಕಾರಿಗಳು ಇಲ್ಲ. ಮಾಹಿತಿ ಪಡೆದು ಮುಂದಿನ ಕ್ರಮಕೈಗೊಳ್ಳಲಾಗುವುದೆಂದು ತಿಳಿಸಿದರು.

ಈ ಬಗ್ಗೆ ಅಧಿಕಾರಿಗಳು ಹಾಗೂ ಸಾರ್ವಜನಿಕರಿಂದ ಮಾಹಿತಿ ಪಡೆದುಕೊಳ್ಳಲಾಗುತ್ತದೆ. ಯಾವುದೇ ರೀತಿ ಶಾಂತಿ ಕದಡುವ ಕೆಲಸ ಆಗಬಾರದು. ಪ್ರಸ್ತುತ ನಿಯಮಾವಳಿಯ ಪ್ರಕಾರ ಕಾನೂನು ಬದ್ದವಾಗಿದ್ದಲ್ಲಿ ಸೂಕ್ತ ನಿರ್ಧಾರ ಕೈಗೊಳ್ಳಲು ಸಾಧ್ಯವಾಗುತ್ತದೆ. ಈ ನಿಟ್ಟಿನಲ್ಲಿ ಸಂಬಂಧಿಸಿದ ಬಿಟಿಡಿಎ, ನಗರಸಭೆ, ವಲಯ ಯೋಜನಾ ಅಧಿಕಾರಿಗಳ ಸಭೆ ಕರೆದು ಸೂಕ್ತ ಮಾಹಿತಿ ಪಡೆದುಕೊಳ್ಳಲಾಗುವುದು. ಇದನ್ನು ಒಂದೇ ದಿನದಲ್ಲಿ ನಿರ್ಧಾರಕ್ಕೆ ಬರಲು ಸಾಧ್ಯವಿಲ್ಲ. ಮಾಹಿತಿ ಪಡೆದುಕೊಂಡು ಕಾನೂನಿನ ಪ್ರಕಾರ ಸೂಕ್ತ ನಿರ್ಧಾರ ಕೈಗೊಳ್ಳಲಾಗುವುದೆಂದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಮರನಾಥ ರೆಡ್ಡಿ ಮಾತನಾಡಿ, ಅನಧಿಕೃತ ಕಟ್ಟಡದ ಬಗ್ಗೆ ಬಿಟಿಡಿಎ ಮತ್ತು ನಗರಸಭೆಯಿಂದ ಮಾಹಿತಿ ಪಡೆಯಲಾಗುತ್ತದೆ. ಮಾಹಿತಿ ನೀಡಲು ಎಷ್ಟು ಸಮಯ ಬೇಕಾಗುವುದೆಂಬುದನ್ನು ಅಧಿಕಾರಿಗಳಿಂದ ತಿಳಿದು ನಾಗರಿಕರನ್ನು ಮತ್ತೊಮ್ಮೆ ಸಭೆ ಕರೆದು ಸೂಕ್ತ ನಿರ್ಧಾರಕ್ಕೆ ಬರಲಾಗುತ್ತದೆ. ಜನರ ಭಾವನೆಗಳಿಗೆ ಧಕ್ಕೆ ಬರದ ರೀತಿಯಲ್ಲಿ ಈ ಸಮಸ್ಯೆಗೆ ಪರಿಹಾರ ಕಂಡುಕೊಳ್ಳುವ ಕಾರ್ಯ ಮಾಡಲಾಗುತ್ತದೆ ಎಂದು ತಿಳಿಸಿದರು. ಹಳೆಯ ಬಾಗಲಕೋಟೆ ಮುಳುಗಡೆಯಾದ ನಂತರ ಪುನರ್ವಸತಿ ಕಲ್ಪಿಸಲು ಬಾಗಲಕೋಟೆ ಪಟ್ಟಣ ಅಭಿವೃದ್ದಿ ಪ್ರಾಧಿಕಾರ ಹುಟ್ಟಿದೆ. ಹಳೆಯ ಬಾಗಲಕೋಟೆಯಲ್ಲಿ ಇದ್ದ ಧಾರ್ಮಿಕ ಕಟ್ಟಡಗಳು ಎಷ್ಟು. ನವನಗರದಲ್ಲಿ ಎಷ್ಟು ನಿರ್ಮಾಣವಾಗಿವೆ ಎಂಬುದನ್ನು ಅಧಿಕಾರಿಗಳು ಮಾಹಿತಿ ನೀಡಬೇಕಿದೆ. ಅನಧಿಕೃತ ಇದ್ದದ್ದು ಅಧಿಕೃತವಾಗಬೇಕು ಎಂದು ಎ.ಎ.ದಂಡಿಯಾ ಹೇಳಿದರೆ, ವಕೀಲರಾದ ಚಂದ್ರಶೇಖರ ಮಾತನಾಡಿ, ಹಳೆಯ ಬಾಗಲಕೋಟೆಯಲ್ಲಿ ಎಷ್ಟು ಧಾರ್ಮಿಕ ಸ್ಥಳಗಳು ಮುಳುಗಡೆಯಾಗಿವೆ. ಎಷ್ಟಕ್ಕೆ ಕೊಟ್ಟಿದ್ದು, ಯಾವುದಕ್ಕೆ ಕೊಟ್ಟಿಲ್ಲ, ಅನಧಿಕೃತ ಕಟ್ಟಡಗಳು ಎಷ್ಟು ಇವೆ. ಇದಕ್ಕೆ ಬಿಡಿಟಿಎ ಅಧಿಕಾರಿಗಳು ಸೂಕ್ತ ಮಾಹಿತಿ ನೀಡಬೇಕೆಂದು ಸಭೆಯಲ್ಲಿ ಹೇಳಿದರು. ಸಭೆಯಲ್ಲಿ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿಗಳಾದ ಪ್ರಸನ್ನ ದೇಸಾಯಿ, ಮಹಾಂತೇಶ್ವರ ಜಿದ್ದಿ, ಡಿ.ವಾಯ್.ಎಸ್.ಪಿ ಗಜಾನನ ಸುತಾರ ಸೇರಿದಂತೆ ಸಮುದಾಯದ ಪ್ರಮುಖ ಮುಖಂಡರು ಉಪಸ್ಥಿತರಿದ್ದರು.

# ಪ್ರತಿಭಾವಂತ ಮಕ್ಕಳಿಗೆ ಪುರಸ್ಕಾರ

# ಮಕ್ಕಳನ್ನು ಸುಸಂಸ್ಕೃತರನ್ನಾಗಿ ಬೆಳೆಸಿ :ಸಚಿವ ತಿಮ್ಮಾಪೂರ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.17–ಮನುಷ್ಯರನ್ನು ಮನುಷ್ಯರನ್ನಾಗಿ ಕಾಣುವ ರೀತಿಯಲ್ಲಿ ಮಕ್ಕಳನ್ನು ಒಳ್ಳೆಯ ಸುಸಂಸ್ಕೃತರನ್ನಾಗಿ ಬೆಳೆಸುವಂತೆ ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಕರೆ ನೀಡಿದರು.



ನವನಗರದ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಭವನದಲ್ಲಿ ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾಘಟಕ, ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘ ಹಾಗೂ ಕರ್ನಾಟಕ ಜಾನಪದ ಪರಿಷತ್ ಜಿಲ್ಲಾ ಘಟಕದ ಸಹಯೋಗದಲ್ಲಿ ಹಮ್ಮಿಕೊಂಡ ಕಲಾವಿದರು, ಸಾಹಿತಿಗಳು, ಪತ್ರಕರ್ತರು ಹಾಗೂ ಸಂಘಟಕರ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ಹಾಗೂ ಕೃತಿ ಲೋಕಾರ್ಪಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮಕ್ಕಳು ಕೇವಲ ಉತ್ತಮ ಅಂಕ ಪಡೆದರೆ ಸಾಲದು. ಅವರನ್ನು ಸಂಸ್ಕಾರವಂತರನ್ನಾಗಿ ಬೆಳೆಸಬೇಕು. ನಮ್ಮ ಸಂಸ್ಕೃತಿಯಲ್ಲಿ ಬದುಕಿ ಸರಕಾರಿ ಶಾಲೆಯಲ್ಲಿ ಕಲಿತು ಉತ್ತಮ ಅಂಕಗಳನ್ನು ಪಡೆಯುತ್ತಿದ್ದಾರೆ. ಮಕ್ಕಳಿಗೆ ವಿದ್ಯೆಯ ಜೊತೆಗೆ ಒಳ್ಳೆಯ ಸಂಸ್ಕಾರವನ್ನು ಹೇಳಿಕೊಡಬೇಕು ಅಂದಾಗ ಮಾತ್ರ ಮನುಷ್ಯನನ್ನು ಮನುಷ್ಯನನ್ನಾಗಿ ಕಾಣಲು ಸಾಧ್ಯವಾಗುತ್ತದೆ. ಪತ್ರಿಕಾ ವೃತ್ತಿ ತನ್ನದೇಯಾದ ಗೌರವವನ್ನು ಹೊಂದಿದ್ದು, ಪತ್ರಿಕೆಯಲ್ಲಿ ಬರುವ ಸುದ್ದಿಗಳು ಸತ್ವಯುತವಾಗಿರಬೇಕು ಸತ್ವಹೀನವಾಗಿರಬಾರದು ಎಂದು ಸಚಿವರು ಹೇಳಿದರು. ಕೃತಿ ರಚನೆಕಾರ ಹಾಗೂ ಹಿರಿಯ ಪತ್ರಕರ್ತ ಮಲ್ಲಿಕಾರ್ಜುನ ಸಿದ್ದಣ್ಣವರ ಮಾತನಾಡಿ, ಸಮಾಜದ ಧ್ವನಿಯಾಗಿ ಪತ್ರಕರ್ತರು ಕೆಲಸ ಮಾಡುತ್ತಿದ್ದು, ಇಂಜಿನೀಯರ್, ಡಾಕ್ಟರ, ವಿಜ್ಞಾನಿಗಳು ಎಷ್ಟು ಮುಖ್ಯವೋ ಸೈನಿಕರು, ರೈತರು ಹಾಗೂ ಪತ್ರಕರ್ತರು ಸಹ ಅಷ್ಟೇ ಮುಖ್ಯರಾಗಿದ್ದಾರೆ. ಅಂತಹ ಪತ್ರಕರ್ತರ ಕುರಿತಾದ ಮಾಹಿತಿಯನ್ನೊಳಗೊಂಡ ಪುಸ್ತಕವೇ ಉತ್ತರದ ಸಾಲು ದೀಪಗಳು. ಮಕ್ಕಳನ್ನು ಮುಂದಿನ ಭವಿಷ್ಯಕ್ಕೆ ಅನುಗುಣವಾಗಿ ಬೆಳೆಸಬೇಕು ಎಂದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಧಾರವಾಡ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಲೋಚನೇಶ ಹೂಗಾರ, ಲಕ್ಷ್ಮಣ ನಿರಾಣಿ ಮತ್ತು ಆನಂದ ಹಲಕುರ್ಕಿ ಮಾತನಾಡಿದರು. ಸಾಹಿತ್ಯ ಪರಿಷತ್ತಿನ ಗೌರವ ಕೋಶಾಧ್ಯಕ್ಷ ಡಾ.ಸಿ.ಎಂ. ಜೋಶಿ ಪ್ರಾಸ್ತಾವಿಕವಾಗಿ ಮಾತನಾಡಿ, ಸಮಾಜದಲ್ಲಿ ಸೇವೆ ಸಲ್ಲಿಸುತ್ತಿರುವ ಕಲಾವಿದರು, ಸಾಹಿತಿಗಳು, ಪತ್ರಕರ್ತರು ಹಾಗೂ ಸಂಘಟಿತರ ಮಕ್ಕಳಿಗೆ ಪ್ರೋತ್ಸಾಹ ನೀಡುವ ದೃಷ್ಠಿಯಿಂದ ಪುರಸ್ಕರಿಸಲಾಗುತ್ತಿದೆ. ಉತ್ತರ ಕರ್ನಾಟಕದ ಪತ್ರಕರ್ತರ ಕುರಿತು ಬರೆದ ಮಲ್ಲಿಕಾರ್ಜುನ ಸಿದ್ದಣ್ಣವರ ಅನೇಕ ವಿಷಯಗಳ ಬಗ್ಗೆ ಪುಸ್ತಕಗಳನ್ನು ಬರೆದಿದ್ದಾರೆ ಎಂದರು. ಎಸ್.ಎಸ್. ಎಲ್.ಸಿ ಹಾಗೂ ಪಿಯುಸಿಯಲ್ಲಿ ಶೇ.90 ಅಥವಾ 90ಕ್ಕಿಂತ ಹೆಚ್ಚು ಅಂಕ ಪಡೆದ ಪ್ರತಿಭಾನ್ವಿತ ಮಕ್ಕಳನ್ನು ಪುರಸ್ಕರಿಸಲಾಯಿತು. ಕಾರ್ಯಕ್ರಮದಲ್ಲಿ ಜಿಲ್ಲಾಕನ್ನಡ ಸಾಹಿತ್ಯ ಪರಿಷತ್‌ನ ಅಧ್ಯಕ್ಷ ಶಿವಾನಂದ ಶೆಲ್ಲಿಕೇರಿ, ಕಾನಿಪ ಸಂಘದ ರಾಜ್ಯಕಾರ್ಯಕಾರಣಿ ಸಮಿತಿಯ ಸದಸ್ಯ ಮಹೇಶ ಅಂಗಡಿ, ಕಾನಿಪ ಸಂಘದ ಜಿಲ್ಲಾಘಟಕದ ಅಧ್ಯಕ್ಷ ಆನಂದ ದಲಭಂಜನ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಸಿಇಓ ಕುರೇರ ಭೇಟಿ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.17–ಜಿಲ್ಲೆಯ ರಬಕವಿ–ಬನಹಟ್ಟಿ ತಾಲೂಕಿನ ಗೋಲಭಾವಿ ಗ್ರಾಮದ ಪ್ರಾಥಮಿಕ ಆರೋಗ್ಯ ಉಪ ಕೇಂದ್ರಕ್ಕೆ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಮಂಗಳವಾರ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿದಾಗ ಆರೋಗ್ಯ ಸೇವೆ, ಸೌಕರ್ಯ, ಸಿಬ್ಬಂದಿಗಳ ಹಾಜರಾತಿ ಮತ್ತು ವಿವಿಧ ಆರೋಗ್ಯ ಯೋಜನೆಗಳ ಅನುಷ್ಠಾನದ ಬಗ್ಗೆ ಪರಿಶೀಲಿಸಿದರು. ಆರೋಗ್ಯ ಕೇಂದ್ರದಲ್ಲಿ ಸ್ವಚ್ಛತೆ ಮತ್ತು ಸೌಕರ್ಯಗಳ ಕಡ್ಡಾಯ ನಿರ್ವಹಣೆ ಆಗಬೇಕು. ಓಪಿಡಿ, ಐಪಿಡಿ ದಾಖಲೆ ಹಾಗೂ ಲಸಿಕೆ ದಾಖಲೆಗಳನ್ನು ನವೀಕರಣಗೊಳಿಸಬೇಕು. ಸಿಬ್ಬಂದಿಗಳು ಸಮಯಕ್ಕೆ ಸರಿಯಾಗಿ ಆಸ್ಪತ್ರೆಗೆ ಹಾಜರಾಗುವದಲ್ಲದೇ ಸಮವಸ್ತ್ರದೊಂದಿಗೆ ಗುರುತಿನ ಚೀಟಿ ಹಾಕಿಕೊಂಡು ಬರುವಂತೆ ಸೂಚಿಸಿದರು. ರಬಕವಿ–ಬನಹಟ್ಟಿ ತಾಲೂಕಿನ ಮಹಾಲಿಂಗಪೂರದ ಸರಕಾರಿ ಪದವಿ ಪೂರ್ವ ಕಾಲೇಜಿನ ಕೊಠಡಿ ನಿರ್ಮಾಣ ಕಾಮಗಾರಿ, ಮಾನಾಪೂರ ಗ್ರಾಮದ ಅಂಗನವಾಡಿ ಕಟ್ಟಡ ಕಾಮಗಾರಿ ಪರಿಶೀಲನೆ ನಡೆಸಿ ನಿಗದಿತ ಅವಧಿಯಲ್ಲಿ ಕಾಮಗಾರಿ ಪೂರ್ಣಗೊಳಿಸಲು ಸೂಚಿಸಿದರು. ನಂತರ ಮಧಬಾವಿ ಗ್ರಾಮದ ಸರಕಾರಿ ಪ್ರೌಢಶಾಲೆಗೆ ಭೇಟಿ ನೀಡಿದ ಸಿಇಓ ಕುರೇರ್ ಮೂಲ ಸೌಕರ್ಯಗಳನ್ನು ಪರಿಶೀಲಿಸಿ ಅಚ್ಚುಕಟ್ಟಾಗಿ ನಿರ್ವಹಣೆ ಮಾಡಲು ತಿಳಿಸಿದರು. ನಂತರ ವಿದ್ಯಾರ್ಥಿಗಳ ಜೊತೆ ಸಂವಾದ ನಡೆಸಿ ಪ್ರತಿಯೊಂದು ಮಕ್ಕಳ ಕಲಿಕೆಯ ಬಗ್ಗೆ ಗಮನ ಹರಿಸಲು ತಿಳಿಸಿದರು. ಸಂಗಾನಟ್ಟಿ ಸರಕಾರಿ ಪ್ರೌಢಶಾಲೆಯಲ್ಲಿ ನಡೆದಿರುವ ಶೌಚಾಲಯ ನಿರ್ಮಾಣ ಕಾಮಗಾರಿ ವೀಕ್ಷಣೆ ಮಾಡಿದರು. ನಂತರ ಬಿಸಿ ಊಟದ ಕೋಣೆಗೆ ತೆರಳಿ ಆಹಾರ ಪದಾರ್ಥ ಪರಿಶೀಲಿಸಿ ಉತ್ತಮ ಗುಣಮಟ್ಟದ ಆಹಾರ ತಯಾರಿಸಲು ಅಡುಗೆ ಸಿಬ್ಬಂದಿಗಳಿಗೆ ಸೂಚನೆ ನೀಡಿದರು. ಸಂಗಾನಟ್ಟಿ ಗ್ರಾಮದ ಸಿಸಿ ರಸ್ತೆ ಕಾಮಗಾರಿ ಮತ್ತು ಘನ ತ್ಯಾಜ್ಯ ವಿಲೇವಾರಿ ಘಟಕದ ಕಾಮಗಾರಿ ವೀಕ್ಷಣೆ ಮಾಡಿದರು. ಚಿಮ್ಮಡ ಗ್ರಾಮಕ್ಕೆ ತೆರಳಿದಾಗ ಸರಕಾರಿ ಪ್ರೌಢಶಾಲೆಯ ಆವರಣದಲ್ಲಿ ಸಸಿ ನೆಟ್ಟರು. ಮತ್ತು ಗ್ರಾಮದ ಬ್ಲಾಕ್ ನಡುತೋಪು ಕಾಮಗಾರಿ ವೀಕ್ಷಣೆ ಮಾಡಿದರು.

ಗೋಲಭಾವಿ ಗ್ರಾಮದ ಚರಂಡಿ ಕಾಮಗಾರಿ, ಹಳಿಂಗಳಿ ಗ್ರಾಮದ ಓವರ್ ಹೆಡ್ ನೀರಿನ ಟ್ಯಾಂಕ್ ಸಾಮರ್ಥ್ಯ ಹೆಚ್ಚಿಸುವ ಕಾಮಗಾರಿ ವೀಕ್ಷಣೆ ಮಾಡಲಾಯಿತು. ಗ್ರಾಮ ಪಂಚಾಯತ ಕಾರ್ಯಾಲಯಕ್ಕೆ ಭೇಟಿ ನೀಡಿ ವಿವಿಧ ರಜಿಸ್ಟರಗಳನ್ನು ಪರಿಶೀಲನೆ ಮಾಡಿ ಗ್ರಾಮದ ಸ್ವಚ್ಛತೆ ಹಾಗೂ ಕುಡಿಯುವ ನೀರಿನ ಬಗ್ಗೆ ಹೆಚ್ಚಿನ ಆದ್ಯತೆ ನೀಡುವಂತೆ ಸಿಇಓ ಸೂಚನೆ ನೀಡಿದರು. ರಬಕವಿ–ಬನಹಟ್ಟಿ ತಾಲೂಕಿನ ಕಾರ್ಯನಿರ್ವಾಹಕ ಅಧಿಕಾರಿ ಸಿದ್ದಪ್ಪ ಪಾಟೀಹಾಳ, ಪಂಚಾಯತ ರಾಜ್ ಜಮಖಂಡಿ ಉಪ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ಟಿ.ಬಿ.ತಳವಾರ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯದ ಜಮಖಂಡಿ ಉಪವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ಜೆ.ಪಿ.ಶೆಟ್ಟಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಉತ್ತಮ ಶಿಕ್ಷಕರು ಸದಾ ಸ್ಮರಣೀಯರು–ಅರಿಷಿಣಗೋಡಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.17–ಶಾಲಾ ಮಕ್ಕಳ ಪ್ರೀತಿ, ಸಮಾಜದ ಗೌರವ ಸಂಪಾದಿಸುವ ಶಿಕ್ಷಕರು ಸದಾ ಸ್ಮರಣೆಯಲ್ಲಿರುತ್ತಾರೆ ಎಂದು ನಿವೃತ್ತ ದೈಹಿಕ ಶಿಕ್ಷಣ ನಿರ್ದೇಶಕ ಕೆ.ಪಿ.ಅರಿಷಿಣಗೋಡಿ ಹೇಳಿದರು.

30 ವರ್ಷಗಳ ಕಾಲ ಶಿಕ್ಷಕರಾಗಿ ಸೇವೆ ಸಲ್ಲಿಸಿ ನಿವೃತ್ತರಾದ ತಾಲೂಕಿನ ಬೆನಕಟ್ಟಿ ಗ್ರಾಮದ ಸಿ.ಎ.ಸನ್ನಪ್ಪನವರ ಹಾಗೂ ಆರ್.ಟಿ.ಬಾಳಕ್ಕನವರ ಅವರಿಗೆ ಹೇಮರಡ್ಡಿ ಮಲ್ಲಮ್ಮ ದೇವಸ್ಥಾನದಲ್ಲಿ ಸ್ನೇಹಿತರ ಬಳಗ ಹಾಗೂ ಹಿರಿಯರು ಹಮ್ಮಿಕೊಂಡಿದ್ದ ಸನ್ಮಾನ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಉತ್ತಮ ಶಿಕ್ಷಕ ಯಾವುದೇ ಊರಿನಲ್ಲಿ ಸೇವೆ ಮಾಡಿದರೂ ವಿದ್ಯಾರ್ಥಿಗಳ ಪ್ರೀತಿ, ಗ್ರಾಮಸ್ಥರ ಗೌರವಕ್ಕೆ ಪಾತ್ರನಾಗಿ ಸದಾ ಅವರ ಸ್ಮರಣೆಯಲ್ಲಿ ಉಳಿಯುತ್ತಾನೆ ಎಂದರು.

ಪಿಕೆಪಿಎಸ್ ನಿವೃತ್ತ ಮ್ಯಾನೇಜರ ಮಹಾಂತೇಶ ಅರಿಷಿಣಗೋಡಿ ಮಾತನಾಡಿ, ಸನ್ನಪ್ಪನವರ ಹಾಗೂ ಬಾಳಕ್ಕನವರ ಶಿಕ್ಷಕರು ಉತ್ತಮ ಸೇವೆ ಮಾಡಿ ತಾಲೂಕಿನಲ್ಲಿ ಹೆಸರು ಮಾಡಿದ್ದಾರೆ ಎಂದು ಹೇಳಿ, ಇಬ್ಬರೂ ಶಿಕ್ಷಕರ ನಿವೃತ್ತ ಜೀವನ ಸುಖಮಯವಾಗಿರಲಿ ಎಂದು ಹಾರೈಸಿದರು.

ಹಿರಿಯರಾದ ಹನಮಪ್ಪ ಬೆಣ್ಣೂರ, ಚಂದ್ರಶೇಖರ ಕಟಗೇರಿ, ರಾಮಚಂದ್ರ ದಾಸಪ್ಪನವರ, ಹನಮಂತ ತಿರಕನ್ನವರ, ಮುತ್ತನಗೌಡ ಗೌಡರ, ಎಚ್.ಬಿ.ದಾಸಪ್ಪನವರ, ಆರ್.ಆರ್.ಬೆಣ್ಣೂರ, ವಿನಾಯಕ ಪಾಟೀಲ, ಎಂ.ಟಿ.ಸನ್ನಪ್ಪನವರ, ಸುರೇಶ ಗೌಡರ, ಶಿವಣ್ಣ ಬಾಳಕ್ಕನವರ, ಭೀಮಸಿ ಕಿಲಬನೂರ, ನಿಂಗಣ್ಣ ದಾಸಪ್ಪನವರ, ರಾಮಚಂದ್ರ ಗೆಣ್ಣೂರ ನಿವೃತ್ತ ಶಿಕ್ಷಕರನ್ನು ಸನ್ಮಾನಿಸಿದರು.

# ವಿಶ್ವ ಯೋಗ ದಿನಾಚರಣೆಗೆ ಅದ್ದೂರಿ ಸಿದ್ಧತೆ : ಚರಂತಿಮಠ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.17–ಜೂನ್ 21 ರಂದು ನಡೆಯಲಿರುವ ವಿಶ್ವ ಯೋಗ ದಿನಾಚರಣೆ ಕಾರ್ಯಕ್ರಮಕ್ಕೆ ಬಸವೇಶ್ವರ ವೀರಶೈವ ವಿದ್ಯಾವರ್ಧಕ ಸಂಘ ಅದ್ದೂರಿ ಸಿದ್ಧತೆ ನಡೆಸಿದೆ ಎಂದು ಸಂಘದ ಕಾರ್ಯಾಧ್ಯಕ್ಷ ವೀರಣ್ಣ ಚರಂತಿಮಠ ಹೇಳಿದರು.

ಮಂಗಳವಾರ ಬಿವಿವಿ ಸಂಘದ ಮಿನಿ ಸಭಾಭವನದಲ್ಲಿ ನಡೆದ ವಿಶ್ವಯೋಗ ದಿನಾಚರಣೆ–ಯ ಪೂರ್ವಭಾವಿ ಸಭೆಯ ಅಧ್ಯಕ್ಷತೆಯನ್ನು ವಹಿಸಿ ಅವರು ಮಾತನಾಡಿ, ಕಳೆದ 11 ವರ್ಷಗಳಿಂದ ಯೋಗ ದಿನಾಚಾರಣೆಯನ್ನು ಆಚರಿಸಲಾಗುತ್ತಿದ್ದು, ನಗರ, ವಿದ್ಯಾಗಿರಿ ಹಾಗೂ ಮೆಡಿಕಲ್ ಕಾಲೇಜಿನಲ್ಲಿ ಯೋಗ ದಿನಾಚರಣೆ ಕಾರ್ಯಕ್ರಮಗಳು ಜರುಗಲಿವೆ ಎಂದರು.


ಬವಿವ ಸಂಘದ ಬಾಗಲಕೋಟೆ ನಗರದ ಹಳೆ ಕ್ಯಾಂಪಸ್‌ನಲ್ಲಿ ವೀರಣ್ಣ ಚರಂತಿಮಠ ನೇತೃತ್ವದಲ್ಲಿ, ಎಸ್.ಎನ್.ಮೆಡಿಕಲ್ ಕಾಲೇಜು ಆವರಣದಲ್ಲಿ ವೈದ್ಯಕೀಯ ಮಂಡಳಿ ಕಾರ್ಯಾಧ್ಯಕ್ಷ ಅಶೋಕ ಸಜ್ಜನ ನೇತೃತ್ವದಲ್ಲಿ ಹಾಗೂ ವಿದ್ಯಾಗಿರಿ ಇಂಜನಿಯರಿಂಗ್ ಕಾಲೇಜು ಆವರಣದಲ್ಲಿ ಸಂಘದ ಗೌರವ ಕಾರ್ಯದರ್ಶಿ ಮಹೇಶ ಅಥಣಿ ನೇತೃತ್ವ ಕಾರ್ಯಕ್ರಮಗಳು ನಡೆಯಲಿವೆ. ಬೆಳಿಗ್ಗೆ 6:30ಕ್ಕೆ ಕೇಂದ್ರದ ಆಯುಷ್ ಇಲಾಖೆ ಶಿಷ್ಟಾಚಾರದಂತೆ ಕಾರ್ಯಕ್ರಮ ನಡೆಸಲಾಗುತ್ತಿದ್ದು, ಭಾರತದ ಹೆಮ್ಮೆ ಯೋಗ ದಿನವನ್ನು ಯಶಸ್ವಿಗೊಳಿಸಲು ನಗರದ ಜನ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕೆಂದು ಚರಂತಿಮಠ ವಿನಂತಿಸಿದರು. ಸಂಘದ ಗೌರವ ಕಾರ್ಯದರ್ಶಿ ಮಹೇಶ ಅಥಣಿ ಮಾತನಾಡಿ, ಸರ್ಕಾರದ ಶಿಷ್ಟಾಚಾರದಂತೆ 45 ನಿಮಿಷದ ಕಾರ್ಯಕ್ರಮವನ್ನು ಸಂಘಟಿಸಲಾಗುತ್ತಿದೆ, ಯೋಗ ಎನ್ನುವುದು ವೈಜ್ಞಾನಿಕ ಕ್ರಮವಾಗಿದ್ದು ಮಾನಸಿಕ ಹಾಗೂ ದೈಹಿಕ ವಿಕಸನಕ್ಕೆ ಅನುಕೂಲ ಕಲ್ಪಿಸಲಿದೆ ಎಂದು ಹೇಳಿದರು.

ಸಭೆಯಲ್ಲಿ ವೈದ್ಯಕೀಯ ಮಹಾವಿದ್ಯಾಲಯದ ಆಡಳಿತ ಮಂಡಳಿ ಕಾರ್ಯಾಧ್ಯಕ್ಷ ಅಶೋಕ ಸಜ್ಜನ, ಕಾಲೇಜುಗಳ ಆಡಳಿತ ಮಂಡಳಿ ಕಾರ್ಯಾಧ್ಯಕ್ಷ ಗುರುಬಸವ ಸೂಳಿಬಾವಿ, ಮಲ್ಲಿಕಾರ್ಜುನ ಸಾಸನೂರ, ಮಹಾಂತೇಶ ಶೆಟ್ಟರ, ಶಿವಲಿಂಗಪ್ಪ ಮೊರಬದ, ಮಹೇಶ ಕಕರಡ್ಡಿ, ಕುಮಾರಸ್ವಾಮಿ ಹಿರೇಮಠ, ಕುಮಾರ ಜಿಗಜಿನ್ನಿ, ವಿವಿಧ ಮಹಾವಿದ್ಯಾಲಯಗಳ ಪಾಚಾರ್ಯರು ಭಾಗವಹಿಸಿದ್ದರು.

# ಪುಟಪಾಕ್ ನಲ್ಲಿ ಆರೋಗ್ಯ ಇಲಾಖೆಯಿಂದ ಅತಿಸಾರ ಭೇದಿ ನಿಯಂತ್ರಣ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಗುರುಮಿಠಕಲ್ :17 ತಾಲೂಕಿನ ಪುಟಪಾಕ್ ಗ್ರಾಮದಲ್ಲಿ ಆರೋಗ್ಯ ಇಲಾಖೆಯಿಂದ ಆಯೋಜಿಸಿದ ಅತಿಸಾರ ಭೇದಿ ನಿಯಂತ್ರಣ ಕಾರ್ಯಕ್ರಮವನ್ನು ಆರೋಗ್ಯ ನೀರಿಕ್ಷಣಾ ಅಧಿಕಾರಿಗಳಾದ ಕಾಶಿನಾಥ ಅವರು ಉದ್ಘಾಟನೆ ಮಾಡಿದರು.



ಈ ಸಂದರ್ಭದಲ್ಲಿ ಮಾತನಾಡಿದ ಅವರು ಅತಿಸಾರ ಭೇದಿಯು ನವಜಾತು ಶಿಶುಗಳಲ್ಲಿ ಕಂಡುಬಂದರೆ ORS, ಮತ್ತು ಜಿಂಕ್ ಮಾತ್ರೆಗಳು 14 ದಿನಗಳ ವರೆಗೆ ತೆಗೆದುಕೊಳ್ಳಬೇಕು. ಸಾಬೂನು ಮತ್ತು ನೀರಿನಿಂದ ಕೈಗಳನ್ನು ಚೆನ್ನಾಗಿ ತೊಳೆಯಬೇಕು, ಶುದ್ಧ ಬಿಸಿ ನೀರನ್ನು ಕುಡಿಯಬೇಕು, ಶೌಚಾಲಯಗಳನ್ನು ಬಳಸಬೇಕು ಹಾಗೂ ಮಗುವಿಗೆ ತಾಯಿಯ ಎದೆಯ ಹಾಲನ್ನೇ ಕುಡಿಸಬೇಕು ಮತ್ತು ರೋಟವೈರಸ್ ಮತ್ತು ದಡರ ಲಸಿಕೆಯನ್ನು ಕಡ್ಡಾಯವಾಗಿ ತೆಗೆದುಕೊಳ್ಳಬೇಕಾಗುತ್ತೆ ಮತ್ತು ಈ ಎಲ್ಲವೂ ಮುಂಜಾಗ್ರತೆ ವಹಿಸಿಕೊಳ್ಳಬೇಕಾಗುತ್ತೆ ಎಂದು ಸಾರ್ವಜನಿಕರಿಗೆ ತಿಳಿಸಿದರು.

ಕಾರ್ಯಕ್ರಮದಲ್ಲಿ ಸಮುದಾಯ ಆರೋಗ್ಯ ಅಧಿಕಾರಿಗಳಾದ ಹೇಮಸಿಂಗ್ ರಾಠೋಡ್ ಮತ್ತು ಆಶಾಕಾರ್ಯಕರ್ತೆಯರಾದ ಅನಿತಾದೇವಿ, ಭಾಗ್ಯಮ್ಮ, ಭಾಗ್ಯಲಕ್ಷ್ಮೀ ಮತ್ತು ಅನುರಾಧ ಅವರು ಉಪಸ್ಥಿತರಿದ್ದರು.


## ಜು. 24ರಂದು ಗ್ರಾಮ ಸಭೆ


# ಸಾಮಾಜಿಕ ಲೆಕ್ಕ ಪರಿಶೋಧನೆಗೆ ಸಹಕರಿಸಿ:– ರಾಹುಲ್ ಕೈವಾರೆ



ಚಿಟಗುಪ್ಪ:–ತಾಲೂಕಿನ ಉಡಮನಳ್ಳಿ ಗ್ರಾಮ ಪಂಚಾಯತನಲ್ಲಿ ಜರುಗಿದ ಸಾಮಾಜಿಕ ಲೆಕ್ಕ ಪರಿಶೋಧನೆಯಲ್ಲಿ ಗ್ರಾಮ ಪಂಚಾಯತ ಎಲ್ಲ ಸಿಬ್ಬಂದ್ದಿಗಳು ಸಹಕರಿಸಬೇಕು ಎಂದು ಸಾಮಾಜಿಕ ಲೆಕ್ಕ ಪರಿಶೋಧನೆ ಕಾರ್ಯಕ್ರಮ ವ್ಯವಸ್ಥಾಪಕ ರಾಹುಲ್ ಕೈವಾರೆ ಹೇಳಿದರು. ಸಾಮಾಜಿಕ ಲೆಕ್ಕ ಪರಿಶೋಧನಾ ನಿರ್ದೇಶನಾಲಯ ಬೆಂಗಳೂರು, ತಾಲೂಕು ಪಂಚಾಯತ ಚಿಟಗುಪ್ಪ, ಗ್ರಾಮ ಪಂಚಾಯತ್ ಉಡಮನಳ್ಳಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಮತ್ತು 15ನೇ ಹಣಕಾಸು ಆಯೋಗದ ಹಾಗೂ ರಾಜ್ಯ ಹಣಕಾಸು ಆಯೋಗದ ಅನುದಾನದ ಸಾಮಾಜಿಕ ಲೆಕ್ಕ ಪರಿಶೋಧನೆಯ ಪೂರ್ವಭಾವಿ ಸಭೆಯಲ್ಲಿ ತಿಳಿಸಿದರು. ಜೂನ್ 17ರಿಂದ 24ರವರೆಗೆ ಸಾಮಾಜಿಕ ಲೆಕ್ಕ ಪರಿಶೋಧನೆ ಜರುಗುತ್ತದೆ. ಆದ್ದರಿಂದ ಎಲ್ಲ ಕಡತಗಳು ನೀಡಬೇಕು. ಜೂನ್ 24 ರಂದು ಬೆಳಗ್ಗೆ 10 ಗಂಟೆಗೆ ಗ್ರಾಮ ಪಂಚಾಯತ ಆವಣದಲ್ಲಿ ಗ್ರಾಮ ಸಭೆ ಜರುಗಲಿದ್ದು ಗ್ರಾಮಸ್ಥರನ್ನು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಒಂದು ದಿನ ಮುಂಚಿತವಾಗಿ ಡಂಗೂರ ಸಾರಿ ಗ್ರಾಮ ಸಭೆ ಯಶಸ್ವಿಗೊಳಿಸಬೇಕು ಎಂದು ಮಾತನಾಡಿದರು. ಈ ಸಂದರ್ಭದಲ್ಲಿ ಗ್ರಾಮ ಪಂಚಾಯತ ಅಧ್ಯಕ್ಷೆ ನೀಲಾವತಿ ಪಾಟೀಲ್, ಉಪಾಧ್ಯಕ್ಷೆ ಗುಂಡಮ್ಮ, ಅಭಿವೃದ್ಧಿ ಅಧಿಕಾರಿ ರಾಜಕುಮಾರ ಪಂಚಾಳ, ಐಇಸಿ ಸಂಯೋಜಕ ವಿಶ್ವನಾಥ ಗಡ್ಡಿಮನಿ ಸೇರಿದಂತೆ ಗ್ರಾಮ ಪಂಚಾಯತ ಸದಸ್ಯರು, ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ದೇವದುರ್ಗ ಉದ್ಯೋಗ ಖಾತ್ರಿ ಅಕ್ರಮ: ಪ್ರಕರಣ ಮುಚ್ಚಿ ಹಾಕುವ ಪ್ರಯತ್ನ, ಸಿಬಿಐ ತನಿಖೆಗೆವಹಿಸಲು ರಾಜ್ಯಪಾಲರಿಗೆ ದೂರು





(ಶಿವು ರಾಠೋಡ್)

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು,ಜೂ15–ಜಿಲ್ಲೆಯ ದೇವದುರ್ಗ ತಾಲೂಕಿನಲ್ಲಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ನಡೆದಿರುವ ಅಕ್ರಮ ಪ್ರಕರಣವನ್ನು ಸಿಬಿಐ ತನಿಖೆಗೆವಹಿಸಿ ತಪ್ಪಿತಸ್ಥ ಎಲ್ಲಾ ಅಧಿಕಾರಿಗಳ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವಂತೆ ಸಾಮಾಜಿಕ ಕಾರ್ಯಕರ್ತ ಶರಣಬಸವ ಹೂಗಾರ ರಾಜ್ಯಪಾಲರಿಗೆ ದೂರು ನೀಡಿದ್ದಾರೆ.

2020–21 ಮತ್ತು 2021–22 ಸಾಲಿನಲ್ಲಿ ದೇವದುರ್ಗ ತಾಲೂಕಿನ 33 ಗ್ರಾಮಗಳ ಉದ್ಯೋಗ ಖಾತ್ರಿ ಯೋಜನೆಯಡಿ ಅಕ್ರಮವಾಗಿರುವ ಕುರಿತು ಸಾಮಾಜಿಕ ಲೆಕ್ಕ ಪರಿಶೋಧನೆಯ ತಂಡ ಪರಿಶೀಲನೆ ವರದಿ ನೀಡಿದೆ. 140 ಕೋಟಿ ರೂ ಅಕ್ರಮವಾಗಿ ರುವ ಕುರಿತು ವರದಿಯಲ್ಲಿ ಉಲ್ಲೇಖಿಸಲಾಗಿದೆ. ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಜಿಲ್ಲಾ ತಾಲೂಕ ಪಂಚಾಯ್ತಿ ಅಧಿಕಾರಿಗಳು ಸೇರಿ ಪಂಚಾಯ್ತಿ ಪಿಡಿಓಗಳು ಹಾಗೂ ಹೊರಗುತ್ತಿಗೆ ನೌಕರರ ಲೋಪವನ್ನು ಮಧ್ಯಂತರ ವರದಿಯಲ್ಲಿ ಉಲ್ಲೇಖಿಸಿ ನೀಡಲಾಗಿದೆ. ಆದರೂ ಪಿಡಿಓಗಳ ಸಾಮೂಹಿಕ ವರ್ಗಾವಣೆ ಹೊರತುಪಡಿಸಿದರೆ ತಾಲೂಕ ಪಂಚಾಯ್ತಿ ಉದ್ಯೋಗ ಖಾತ್ರಿ ಯೋಜನೆ ಉಪನಿರ್ದೇಶಕರುಗಳು, ಜಿಲ್ಲಾ ಪಂಚಾಯ್ತಿ ಹಾಗೂ ರಾಜ್ಯ ಮಟ್ಟದ ಅಧಿಕಾರಿಗಳ ವಿರುದ್ಧ ಯಾವುದೇ ಕ್ರಮವಾಗಿಲ್ಲ. ತನಿಖಾ ವರದಿಯಲ್ಲಿ ಹಣ ದುರುಪಯೋಗ ಪಡೆಸಿಕೊಂಡವರ ವಿರುದ್ಧ ಕ್ರಿಮಿನಲ್ ಕೇಸ್ ದಾಖಲಿಸಿ ಹಣ ವಸೂಲಿ ಮಾಡು ಸೂಚಿಸಿದ್ದರೂ ಕ್ರಮವಾಗುತ್ತಿಲ್ಲ. ಪಂಚಾಯತ್ ರಾಜ ಇಲಾಖೆ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಂದಿನ ಜಿಲ್ಲಾ ಪಂಚಾಯ್ತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ನೋಡೆಲ್ ಅಧಿಕಾರಿಗಳು ಸೇರಿದಂತೆ ಹಣ ವ್ಯವಹಾರ ನಡೆಸಿರುವ ಅಧಿಕಾರಿಗಳ ವಿರುದ್ಧ ಕ್ರಮಕ್ಕೆ ಸರ್ಕಾರ ಮುಂದಾಗುತ್ತಿಲ್ಲ. ತನಿಖೆ ಅಕ್ರಮ ಬಹಿರಂಗಗೊಂಡರೂ ರಕ್ಷಣೆ ಮಾಡಲಾಗುತ್ತಿದೆ. ಕೂಡಲೇ ಪ್ರಕರಣವನ್ನು ಸಿಬಿಐ ತನಿಖೆಗೆ ವಹಿಸಲು ಶಿಫಾರಸ್ಸು ಮಾಡಬೇಕು, ಅಕ್ರಮಗಳು ನಡೆಯದಂತೆ ತಡೆಯಬೇಕೆಂದು ದೂರಿನಲ್ಲಿ ಮನವಿ ಮಾಡಲಾಗಿದೆ. ಮತ್ತು ಸಾಮಾಜಿಕ ಪರಿಶೋಧನ ನಿರ್ದೇಶನಾಲಯದ ರಾಜ್ಯ ಕಚೇರಿಯಲ್ಲಿ ಕೆಲಸ ನಿರ್ವಹಿಸುತ್ತಿರುವ ಕೆಲವು ಅಧಿಕಾರಿಗಳು ಅಕ್ರಮದಲ್ಲಿ ಭಾಗಿಯಾಗಿ ತನಿಖೆ ನಡೆಸದಿರಲು ಹಣದ ಆಮಿಷ ಒಡ್ಡಿ ಕುಮ್ಮಕ್ಕು ನೀಡುತ್ತಿರುವುದು ಕಂಡುಬಂದಿರುತ್ತದೆ ಆದ್ದರಿಂದ ಶೀಘ್ರವೇ ತನಿಖೆ ಮಾಡಿ ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಕೈಗೊಳ್ಳದಿದ್ದರೆ ಉಗ್ರಾ ಹೋರಾಟ ಮಾಡುವುದಾಗಿ ತಿಳಿಸಿದ್ದಾರೆ ಮತ್ತು ಸಂಬಂದಿಸಿದ ಎಲ್ಲಾ ಧಾಖಲೆಗಳನ್ನು ಮುಖ್ಯ ಮಂತ್ರಿ ಹಾಗು ಸಚಿವರಿಗೆ ನೀಡುತ್ತೇವೆ ಎಂದು ತಿಳಿಸಿರುತ್ತಾರೆ

**CHANGE OF NAME**

I, ISMIAL S/o SHAFIUDDIN (Old name) resident of Warwatti (B) Tq, Bhalki Dist: Bidar . have changed my new name as MOHD ISMAIL S/o MOHD SHAFIUDDIN resident of Warwatti (B) Tq, Bhalki Dist: Bidar .sworn before affidavit Pandurang K. Nimbekar Advocate & Notary PUBLIC Humnabad.

Date 17-06-2025.



ಕಮಲನಗರ: ತಾಲೂಕಿನ ಖೇಡ ಗ್ರಾಮದಲ್ಲಿ ಪವಾಡ ಪುರುಷ ರೇವಪ್ಪಯ್ಯ ಅವರ ಜಾತ್ರಾ ನಿಮಿತ್ಯ ಸಾವಿರಾರು ಭಕ್ತಿರು ಹೋಳಗಿ ತುಪ್ಪ ಊಟ ಸೇವಿಸಿ ಪಾವನರಾದ್ದರು. ಈ ಸಂದರ್ಭದಲ್ಲಿ ಮೆಹಕರ ಶ್ರೀಗಳಾದ ಶ್ರೀ ರಾಜಶೇಶ್ವರ ಮಹಾಸ್ವಾಮಿ ಇದ್ದರು.

# ಪೂಜ್ಯ ರೇವಪಯ್ಯಾ ಮಹಿಮೆ ಅಪಾರ: ಶಾಸಕ ಪ್ರಭು ಚವ್ಹಾಣ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಜೂ.17:ತಾಲೂಕಿನ ಖೇಡ್ ಗ್ರಾಮದಲ್ಲಿ ಪೂಜ್ಯ ಶ್ರೀ ರೇವಪ್ಪಯ್ಯಾ ಸ್ವಾಮಿಯ ಜಾತ್ರಾ ಮಹೋತ್ಸವದಲ್ಲಿ ಮಾಜಿ ಸಚಿವರು ಹಾಗೂ ಔರಾದ(ಬಿ) ಶಾಸಕರಾದ ಪ್ರಭು.ಬಿ ಚವ್ಹಾಣ ಮಂಗಳವಾರ ಭಾಗವಹಿಸಿ,ಭಕ್ತಾದಿಗಳಿಗೆ ಹೋಳಿಗೆ ತುಪ್ಪ ಬಡಿಸಿ ಗಮನ ಸೆಳೆದರು.

ಪೂಜ್ಯ ರೇವಪಯ್ಯಾ ಶಿವಶರಣರ ದರ್ಶನ ಪಡೆದ ಶಾಸಕರು, ರೈತರ ಕಲ್ಯಾಣ,ಕ್ಷೇತ್ರದ ಸಮೃದ್ಧಿಗಾಗಿ ಮತ್ತು ಮತ್ತು ನಾಡಿನಲ್ಲಿ ಸುಖ, ಶಾಂತಿ ನೆಲೆಸಬೇಕೆಂದು ಬೇಡಿಕೊಡರು. ನಂತರ ಪ್ರಸಾದ ಸ್ಥಳಕ್ಕೆ ಹೋಗಿ ಸಾಲು–ಸಾಲಾಗಿ ಕುಳಿತಿದ್ದ ಭಕ್ತರ ಬಳಿಗೆ ಹೋಗಿ ತಮ್ಮ ಕೈಯಿಂದಲೇ ಹೋಳಿಗೆ ತುಪ್ಪ ಬಡಿಸಿ ಗಮನ ಸೆಳೆದರು.ಬಳಿಕ ತಾವೂ ಭಕ್ತರೊಂದಿಗೆ ಕುಳಿತು ಪ್ರಸಾದ ಸ್ವೀಕರಿಸಿದರು.

ಇದೇ ವೇಳೆ ತೆಡೋಳಾ–ಮೆಹಕರ್ ಮಠದ ಪೂಜ್ಯ ಶ್ರೀ ರಾಜೇಶ್ವರ ಶಿವಾಚಾರ್ಯರ ಸ್ವಾಮಿಗಳ ಆಶೀರ್ವಾದ ಪಡೆದರು. ನಂತರ ಮಾತನಾಡಿ, ಖೇಡ್ ಗ್ರಾಮದಲ್ಲಿನ ಪವಾಡಪುರುಷ ಮಹಾಪುರುಷ ರೇವಪ್ಪಯ್ಯ ಸ್ವಾಮಿಯ ಜಾತ್ರಾ ಮಹೋತ್ಸವ ಈ ಭಾಗದ ದೊಡ್ಡ ಜಾತ್ರೆಯಾಗಿದೆ. ಹೋಳಿಗೆ ತುಪ್ಪದ ಪ್ರಸಾದಕ್ಕಾಗಿ ಜಾತ್ರೆ ಹೆಸರುವಾಸಿಯಾಗಿದೆ ಹೋಳಿಗೆ ತುಪ್ಪ ಊಟ ಅರೋಗ್ಯ ಕ್ಕೆ ಒಳ್ಳೆಯದು ಎಂದರು.

ಎಲ್ಲರು ಭಕ್ತಿ ಭಾವದಿಂದ ಜಾತ್ರೆಯಲ್ಲಿ ಭಾಗವಸಿ, ಒಳ್ಳ ಸಂಸ್ಕೃತಿ ಬೆಳೆಸಕೊಳ್ಳಬೇಕು, ನಮ್ಮ ನಮ್ಮ ನೀಡಿದ ತಾಯಿ, ತಾಯಿ ನಾಡು ಮತ್ತು ಗೋಮಾತೆ ಯನ್ನು ಎಂದು ಮರಿಯಬಾರದು ಎಂದು ಹಿತ ನುಡಿ ನೀಡಿದರು.

ಪೂಜ್ಯ ರೇವಪಯ್ಯಾ ಸ್ವಾಮಿಯ ಮಹಿಮೆ ಅಪಾರವಾಗಿದ್ದು, ಇಲ್ಲಿ ಬೇಡಿಕೊಂಡ ಎಲ್ಲ ಇಷ್ಟಾರ್ಥಗಳು ಈಡೇರುತ್ತವೆ ಎಂಬ ನಂಬಿಕಯಿದೆ. ಕರ್ನಾಟಕವಲ್ಲದೇ ಮಹಾರಾಷ್ಟ್ರ,ಆಂಧ್ರ, ತೆಲಂಗಾಣಾ ರಾಜ್ಯಗಳಿಂದ ಸಹಸ್ರಾರು ಜನ ಆಗಮಿಸುತ್ತಾರೆ. ಭಕ್ತರ ಸಂಖ್ಯೆ ಪ್ರತಿವರ್ಷ ದ್ವಿಗುಣಗೊಳ್ಳುತ್ತಿರುವುದಕ್ಕೆ ಪೂಜ್ಯರ ಶಕ್ತಿಯೇ ಕಾರಣ ಎಂದು ಹೇಳಿದರು.

ರೇವಪಯ್ಯ ಸ್ವಾಮಿಯ ಆಶೀರ್ವಾದದಿಂದ ಎಲ್ಲರಿಗೂ ಒಳ್ಳೆಯದಾಗುತ್ತಿದೆ. ನಾನು ಸ್ವಾಮಿಯ ಪರಮ ಭಕ್ತನಾಗಿದ್ದು, ಪ್ರತಿವರ್ಷ ಜಾತ್ರೆಗೆ ಬರುತ್ತೇನೆ. ಪ್ರತಿವರ್ಷ ಮಂದಿರಕ್ಕೆ ಬರುವ ಭಕ್ತರ ಸಂಖ್ಯೆಯೂ ಹೆಚ್ಚಾಗುತ್ತಿದ್ದು, ಇದಕ್ಕೆ ಅನುಗುಣವಾಗಿ ಮಂದಿರ ಅಭಿವೃದ್ಧಿಯಾಗಬೇಕು. ಶೆಡ್ ನಿರ್ಮಾಣ ಹಾಗೂ

ಮತ್ತಿತರೆ ಅಭಿವೃದ್ಧಿ ಕೆಲಸಗಳನ್ನು ಮಾಡಿದ್ದೇನೆ. ಮಂದಿರ ಹಾಗೂ ಖೇಡ್ ಗ್ರಾಮದ ಸಮಗ್ರ ಅಭಿವೃದ್ಧಿಗಾಗಿ ಮುಂದಿನ ದಿನಗಳಲ್ಲಿ ಏನೇನು ಮಾಡಬೇಕು ಎನ್ನುವ ಬಗ್ಗೆ ಪಟ್ಟಿ ಮಾಡಿ ಕೊಡಿ ಹಂತ ಹಂತವಾಗಿ ಕೆಲಸಗಳನ್ನು ಮಾಡಿಕೊಡುತ್ತೇನೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಮುಖಂಡರಾದ ವಸಂತ ಬಿರಾದಾರ, ಧೊಂಡಿಬಾ ನರೋಟೆ, ಶಿವಾಜಿರಾವ ಪಾಟೀಲ ಮುಂಗನಾಳ, ಬಸವರಾಜ ಪಾಟೀಲ, ಶಿವಾನಂದ ವಡ್ಡೆ, ಮಲ್ಲಿಕಾರ್ಜುನ ದಾನಾ, ಪ್ರತೀಕ ಚವ್ಹಾಣ, ಸಚಿನ ರಾಠೋಡ, ಪ್ರವೀಣ ಕಾರಬಾರಿ, ನಾಗನಾಥ ಚಿಕ್ಲೆ, ಸಂದೀಪ ಪಾಟೀಲ, ಭರತ ಕದಂ, ನಾಗೇಶ ಪತ್ರೆ, ಮಂಜು ಸ್ವಾಮಿ, ಉದಯ ಸೋಲಾಪೂರೆ, ಗುಂಡಪ್ಪ ನಿಡೋದಾ, ಸುಭಾಷ ಲಕ್ಷ್ಮೀನಗರ, ಎನಿಲ ಹೊಳಸಮುದ್ರ, ಭೀಮರಾವ ಬಚ್ಚಣ್ಣ, ಶಿವಲಿಂಗ ಕಾರಬಾರಿ, ತಾನಾಜಿ ಬೆಳಕಟ್ಟೆ, ಅನೀಲ ಬಿರಾದಾರ, ಅನೀಲ ಸಂಗಣ್ಣ, ಮನ್ಮಥ ದಾನಾ, ಗೋರಖನಾಥ, ಕಿರಣ ದಾನಾ ಸೇರಿದಂತೆ ಇತರರು ಉಪಸ್ಥಿತರಿದ್ದರು.

# 50 ಸಾವಿರಕ್ಕೂ ಅಧಿಕ ಭಕ್ತಾದಿಗಳಿಂದ ಪ್ರಸಾದ ಸೇವನೆ

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ: ಜೂ.17:ತಾಲೂಕಿನ ನಾವದಗಿಯ ಶ್ರೀ ರೇವಪ್ಪಯ್ಯಾ ಮಂದಿರದಲ್ಲಿ ಕಾರಹುಣ್ಣಿಮೆಯ ನಂತರದ ಪ್ರಥಮ ಮಂಗಳವಾರ ಪ್ರತಿವರ್ಷದಂತೆ ಹೋಳಿಗೆ (ಹೂರಣಗಡುಬು) ತುಪ್ಪದ ಪ್ರಸಾದ ಸವಿಯುವ ಷಣ್ಮುಖಸ್ವಾಮಿ ಬಿನ್ನಹ ಜಾತ್ರೆ ಸಂಭ್ರಮದಿಂದ ನಡೆಯಿತು.

ಪ್ರಾರಂಭದಲ್ಲಿ ಸದ್ಗುರು ರೇವಪ್ಪಯ್ಯಾ ಮಹಾಸ್ವಾಮಿಗಳ ಗದ್ದುಗೆ ಪೂಜೆ ನೆರವೇರಿಸಿ, 21ಜನ ಮುತ್ತೈದೆಯರಿಗೆ ಪೂಜೆ ಸಲ್ಲಿಸಿ, ಪ್ರಸಾದಿಕರಿಗೆ ಪ್ರಸಾದ ನೀಡಿ, ಬೆಳಿಗ್ಗೆಯಿಂದಲೇ ಮಹಾ ಪ್ರಸಾದ ವ್ಯವಸ್ಥೆ ಪ್ರಾರಂಭಿಸಲಾಯಿತು. ದೇವಸ್ಥಾನದ ಪ್ರಮುಖರಾದ ರೇವಣಯ್ಯಾ ಸ್ವಾಮಿ, ಶಾಂತವೀರ ಸ್ವಾಮಿ, ಹಾವಯ್ಯಾ ಸ್ವಾಮಿ, ಸಿದ್ದಲಿಂಗ ಸ್ವಾಮಿ, ಪ್ರಭುಲಿಂಗ ಸ್ವಾಮಿ, ಹಾಗು ರೇವಪ್ಪಯ್ಯಾ ಟ್ರಸ್ಟ್ ಕಮಿಟಿಯ ಅಧ್ಯಕ್ಷ ಪ್ರದೀಪ ಪಾಟೀಲ, ಸದಸ್ಯರಾದ ಮಲ್ಲಿಕಾರ್ಜುನ ಶೇರಿಕಾರ, ರೇವಣಯ್ಯಾ ಸ್ವಾಮಿ ರಾಜೇಶ್ವರ, ಶಿವಪ್ಪ ಕಲ್ಯಾಣರಾವ ಜಮಾದಾರ, ಗ್ರಾಮ ಪಂಚಾಯತ ಅಧ್ಯಕ್ಷ ರಾಜಶೇಖರ ಬಿರಾದಾರ, ಶಿವರಾಜ ಬಿರಾದಾರ ಮುಂತಾದವರು ಪ್ರಸಾದ ವ್ಯವಸ್ಥೆಗೆ ಚಾಲನೆ ನೀಡಿದರು. ನಂತರ ಸಾವಿರಾರು ಭಕ್ತಾದಿಗಳು



ರೇವಪ್ಪಯ್ಯಾ ಮುತ್ಯಾರವರು ಪವಾಡ ಪುರುಷರಾಗಿದ್ದರು. ಬೇಡಿದವರಿಗೆ ಬೇಡಿದ್ದನೀಡುತ್ತಿರುವ ಮಹಾ ಮಹಿಮರಾದ ರೇವಪ್ಪಯ್ಯಾ ಅಜ್ಜನವರ ಬಿನ್ನಹ ಜಾತ್ರೆ ಜೂನ್ ತಿಂಗಳಲ್ಲಿ ನಡೆದರೆ, ಡಿಸೆಂಬರ್ ತಿಂಗಳಲ್ಲಿ ಐದು ದಿನಗಳ ಕಾಲ ಇವರ ಜಾತ್ರಾ ಮಹೋತ್ಸವ ನಡೆಯುತ್ತದೆ. ಸಾವಿರಾರು ಭಕ್ತಾದಿಗಳು ಆಗಮಿಸಿ ಪೂಜ್ಯರ ದರ್ಶನ ಪಡೆಯುತ್ತಾರೆ.

**–ಪ್ರದೀಪ ಪಾಟೀಲ, ಅಧ್ಯಕ್ಷರು, ರೇವಪ್ಪಯ್ಯ ಟ್ರಸ್ಟ್ ಕಮಿಟಿ ನಾವದಗಿ.**

ಸರತಿ ಸಾಲಿನಲ್ಲಿ ನಿಂತು ಪ್ರಸಾದ ಪಡೆದು ಸ್ವೀಕರಿಸಿದರು.

ಬಿನ್ನಹ ಜಾತ್ರೆಯ ವಿಶೇಷತೆ: ಅವತಾರ ಪುರುಷ ರೇವಪ್ಪಯ್ಯಾ ಮಹಾಶಿವಶರಣರು ನಾವದಗಿ ಗ್ರಾಮದ ಹಾವಯ್ಯ, ನಾಗಮ್ಮ ದಂಪತಿಗಳ ಏಕೈಕ ಪುತ್ರ, ಹಾವಯ್ಯ ಸ್ವಾಮಿಗಳಿಗೆ ತುಂಬಾ ದಿವಸಗಳಿಂದ ಮಕ್ಕಳಾಗದಿದ್ದಾಗ, ಷಣ್ಮುಖಸ್ವಾಮಿ ಬಿನ್ನಹ ನಿಮಿತ್ಯ ಹೋಳಿಗೆ ತುಪ್ಪ ಪ್ರಸಾದ ಮಾಡಿದರೆ ಮಕ್ಕಳಾಗುತ್ತವೆ ಎಂದು ಹೇಳಿದಾಗ ರೇವಪ್ಪಯ್ಯ ಸ್ವಾಮಿಯವರ ತಂದೆ ಹಾವಯ್ಯಾ ಸ್ವಾಮಿಯವರು ಈ ಬಿನ್ನಹ ಪ್ರಸಾದ ಪ್ರಾರಂಭಿಸಿದರು. ಬಿನ್ನಹ ಪ್ರಸಾದ ಪ್ರಾರಂಭಿಸಿದ ನಂತರ ರೇವಪ್ಪಯ್ಯಾ ಮಹಾಸ್ವಾಮಿಗಳು ಜನ್ಮ ತಳೆದರು. ನಂತರ ದಿನಗಳಲ್ಲಿ ಸದ್ಗುರು ರೇವಪ್ಪಯ್ಯಾ ಮಹಾಸ್ವಾಮಿಗಳು ಈ ಬಿನ್ನಹ ಪ್ರಸಾದ ಮುಂದುವರೆಸಿಕೊಂಡು ಬಂದರು. ರೇವಪ್ಪಯ್ಯಾ ಸ್ವಾಮಿಗಳು ತಮ್ಮ ಜೀವಿತಾವಧಿಯಲ್ಲಿ ಒಂದು ಸಲ ತುಪ್ಪ ಕಮ್ಮಿಬಿದ್ದರೆ, ಪಕ್ಕದ ಬಾವಿಯಿಂದ ತಂದ ನೀರು ತುಪ್ಪವಾಗಿ ಉಣಿಸಿದ್ದಾರೆ ಎನ್ನುವ ಪ್ರತೀತಿ ಇದೆ. ಇಂತಹ ಪವಾಡ ಪುರುಷರ ಕಾಲಾನಂತರದಲ್ಲಿಯೂ ಭಕ್ತಾದಿಗಳು ಈ ಬಿನ್ನಹ ಜಾತ್ರೆ ನಡೆಸಿಕೊಂಡು ಬರುತ್ತಿದ್ದಾರೆ. ಇಲ್ಲಿ ಪ್ರಸಾದ ಸವಿದ ಭಕ್ತರ ಇಷ್ಟಾರ್ಥ ಸಿದ್ಧಿ ಪ್ರಾಪ್ತವಾಗಿ, ಅವರಿಗೆ ಅಂಟುಕೊಂಡಿರುವ ರೋಗ ನಿವಾರಣೆಯಾಗುತ್ತದೆ ಎನ್ನುವ ನಂಬಿಕೆಯಿಂದ ಪ್ರತಿವರ್ಷ ಸಾವಿರಾರು ಭಕ್ತರು ಇಲ್ಲಿಗೆ ಬಂದು ಪ್ರಸಾದ ಸವಿಯುತ್ತಾರೆ.

ಸದ್ಗುರು ರೇವಪ್ಪಯ್ಯಾ ಮಹಾಸ್ವಾಮಿಗಳ ದೇವಸ್ಥಾನಗಳು ಜಿಲ್ಲೆಯ ಹಲವಾರು ಗ್ರಾಮಗಳಲ್ಲಿ ಅಲ್ಲದೇ ಕಲಬುರಗಿಯ ಕಲ್ಲಹಂಗರಗಾ ಸೇರಿದಂತೆ ಎಲ್ಲಾ ಕಡೆಯೂ ಪ್ರತಿಷ್ಠಾಪಿಸಲಾಗಿದೆ. ಈ ಎಲ್ಲಾ ದೇವಸ್ಥಾನಗಳಲ್ಲಿಯೂ ಈ ಬಿನ್ನಹ ಜಾತ್ರೆ ನಡೆಸಿಕೊಂಡು ಬರಲಾಗುತ್ತಿದೆ.

# ಕೆಕೆಆರಡಿಬಿ ಅನುದಾನದಲ್ಲಿ ಮೇಗಾ–ಮ್ಯಾಕ್ರೋ ಯೋಜನೆಯಡಿ ಕೃಷಿ ಯಂತ್ರಗಳ ವಿತರಣೆ

ಮಲ್ಲಮ್ಮ ನುಡಿ ವಾರ್ತೆ

ಅಫಜಲಪುರ:ಜೂ.17:ತಾಲೂಕಿನ ಹಸರಗುಂಡಗಿ ಗ್ರಾಮದಲ್ಲಿ ಕೃಷಿ ಇಲಾಖೆ ವತಿಯಿಂದ ರೇಣುಕಾ ಏಜ್ಯುಕೇಶನ ಮತ್ತು ವೇಲಫೇರ ಸಂಸ್ಥೆಯ ಸಹಕಾರದಲ್ಲಿ ರೈತರಿಗೆ ಬಾಡಿಗೆ ಆಧಾರಿತ ಟ್ರ್ಯಾಕ್ಟರಗಳನ್ನು ವಿರತಣೆ ಮಾಡಲಾಯಿತು.





ಕಾರ್ಯಕ್ರಮ ಉದ್ದೇಶಿಸಿ ಪ್ರಾಸ್ತಾವಿಕವಾಗಿ ಮಾತನಾಡಿದ ತಾಲೂಕು ಕೃಷಿ ಅಧಿಕಾರಿಗಳಾದ ಎಸ್.ಎಚ್.ಗಡಗಿಮನಿ ಕೆಕೆಆರಡಿಬಿ ಅನುದಾನದ ಮೇಗಾ–ಮ್ಯಾಕ್ರೋ ಯೋಜನೆಯಡಿ ಕೃಷಿ ಯಂತ್ರಗಳ ವಿತರಣೆಯು ತಾಲೂಕಿನ ಹಸಗುಂಡಗಿ ಕೃಷಿ ವ್ಯವಸಾಯ ಸೇವಾ ಕೇಂದ್ರದಿಂದ ಪ್ರಾರಂಭ ಮಾಡಲಾಗುತ್ತಿದೆ. ಕೃಷಿಯಲ್ಲಿ ಕೂಲಿ ಕಾರ್ಮಿಕರು ಬಹುಮುಖ್ಯ ಪಾತ್ರ ವಹಿಸುತ್ತಾರೆ. ಗ್ರಾಮೀಣ ಮಟ್ಟದಲ್ಲಿ ಕಾರ್ಮಿಕರ ಸಂಖ್ಯೆ ಇಳಿಮುಖವಾಗುತ್ತಿದೆ. ಅದಕ್ಕಾಗಿ ಕೃಷಿ ಯಾಂತ್ರಧಾರೆ ಯೋಜನೆಯ ಮುಖಾಂತರ ರೈತರಿಗೆ ಟ್ರ್ಯಾಕ್ಟರಗಳನ್ನು ನೀಡಲಾಗುತ್ತಿದೆ. ಹಸರಗುಂಡಗಿ ಕೇಂದ್ರಕ್ಕೆ 3 ಟ್ರ್ಯಾಕ್ಟರಗಳ ವಿತರಣೆ ಜೊತೆಗೆ ಬಿತ್ತನೆಗೆ ಬೇಕಾಗುವ ಉಪಕರಣಗಳು ನೀಡಲಾಗುತ್ತಿದೆ. ಕಡಿಮೆ ದುಡ್ಡಿನ ಬಾಡಿಗೆಯಲ್ಲಿ ಸಕಾಲಕ್ಕೆ ರೈತರಿಗೆ ಉಪಯೋಗ ಮಾಡಿಕೊಳ್ಳಬೇಕು ಎಂದು ರೈತರಿಗೆ ಮನವಿ ಮಾಡಿದರು. ಬಾಡಿಗೆ ಆಧಾರಿತ ಸೇವಾ ಕೇಂದ್ರದ ಮುಖಾಂತರ ಇದರ ಸದುಪಯೋಗ ಪಡಿಸಿಕೊಳ್ಳಬೇಕು ಎಂದರು.

ನಂತರ ಮಾತನಾಡಿದ ರೈತಪರ ಹೋರಾಟಗಾರ ಅವ್ವಣ್ಣಗೌಡ ಪಾಟೀಲ ರೈತರ ಉಪಯೋಗಕ್ಕಾಗಿ ಟ್ರ್ಯಾಕ್ಟರಗಳನ್ನು ಎನ್.ಜಿ.ಓ ಮುಖಾಂತರ ನಿರ್ವಹಣೆ ಮಾಡುತ್ತಿದ್ದಾರೆ. ರೈತರಿಗೆ ಕಡಿಮೆ ದರದಲ್ಲಿ ಟ್ರ್ಯಾಕ್ಟರಗಳನ್ನು ಬಾಡಿಗೆಗೆ ನೀಡಬೇಕು. ಈ ಭಾಗದಲ್ಲಿ ರಸ್ತೆಗಳು ಹದಗೆಟ್ಟು ಹೋಗಿವೆ. ರೈತರು ಹೆಚ್ಚಾಗಿ ಓಡಾಟವಿರುವ ಈ ರಸ್ತೆಗಳನ್ನು ನಿರ್ಮಾಣ ಮಾಡಿ ಈ ಭಾಗದ ಜನರಿಗೆ ಅನುಕೂಲವಾಗಲಿದೆ ಎಂದರು. ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಜಿಲ್ಲಾ ಕೃಷಿ ಉಪ–ನಿರ್ದೇಶಕರಾದ ಸೋಮಶೇಖರ್ ಬಿರಾದಾರ ರೈತರಿಗೆ ಆರ್ಥಿಕ ಹೊರೆ ಕಡಿಮೆ ಮಾಡಲು ಕಡಿಮೆ ದರದಲ್ಲಿ ಟ್ರ್ಯಾಕ್ಟರಗಳನ್ನು ಸರಕಾರ ಹಾಗೂ ಕೃಷಿ ಇಲಾಖೆಯ ಸಹಕಾರದಲ್ಲಿ ನೀಡಲಾಗುತ್ತದೆ. ಬಾಡಿಗೆ ಆಧಾರಿತ ಟ್ರ್ಯಾಕ್ಟರಗಳ ಸದುಪಯೋಗ ಪಡೆದುಕೊಳ್ಳಬೇಕು ಎಂದು ರೈತರಿಗೆ ಮನವಿ ಮಾಡಿದರು.

ನಂತರ ಮಾತನಾಡಿದ ಕೆಪಿಸಿಸಿ ಸದಸ್ಯ ಅರುಣಕುಮಾರ ಪಾಟೀಲ ರೈತರಿಗಾಗಿ ಮೇಗಾ ಮ್ಯಕ್ರೋ ಯೋಜನೆಯಡಿಯಲ್ಲಿ ಬಾಡಿಗೆ ಆಧಾರಿತ ಟ್ರ್ಯಾಕ್ಟರಗಳನ್ನು ವಿತರಣೆ ಮಾಡಲಾಗಿದೆ. ರೈತರ ಒಳಿತಿಗಾಗಿ ದೊಡ್ಡ ಯೋಜನೆಗಳನ್ನು ಮಂತ್ರಿಗಳು ಮಾಡುತ್ತಾರೆ. ಕಲ್ಯಾಣ ಕರ್ನಾಟಕ ಭಾಗದಲ್ಲಿ ಅಭಿವೃದ್ಧಿಯ ಪರ್ವ ಮುಂದುವರಿಯುತ್ತಿದೆ ಎನ್ನುವುದಕ್ಕೆ ಕಾರಣ ಡಾ.ಮಲ್ಲಿಕಾರ್ಜುನ ಖರ್ಗೆಜಿ ರವರು ಹಾಗೆ ಉಸ್ತುವಾರಿ ಸಚಿವರಾದ ಪ್ರಿಯಾಂಕ ಖರ್ಗೆಜಿಯವರು. ಏಕೆಂದರೆ ಪಕ್ಕದ ಜಿಲ್ಲೆಗಳಿಗೆ ಹೋಲಿಸಿದರೆ ನಮ್ಮ ಜಿಲ್ಲೆಗೆ ಅನುದಾನ ಹೆಚ್ಚಾಗಿ ದೊರೆಯುತ್ತಿದೆ. ಈ ಭಾಗದ ಜನರಿಗಾಗಿ ಎಲ್ಲಾ ಹಳ್ಳಿಗಳಿಗೆ ರಸ್ತೆ ನಿರ್ಮಾಣ ಕಾರ್ಯ ನಡೆಯುತ್ತಿವೆ. ಸರಕಾರಿ ಯಂತ್ರೋಪಕರಣಗಳ ಮೇಲೆ ನಮ್ಮೆಲ್ಲರ ಹಕ್ಕಿದೆ. ಅದನ್ನು ಸರಿಯಾದ ರೀತಿಯಲ್ಲಿ ಸದುಪಯೋಗ ಮಾಡಿಕೊಳ್ಳಬೇಕು. ಸರಕಾರಿ ವಸ್ತುಗಳನ್ನು ನಮ್ಮ ಸ್ವಂತ ವಸ್ತುಗಳಂತೆ ಕಾಳಜಿ ಪೂರಕವಾಗಿ ನೋಡಿಕೊಳ್ಳಬೇಕು. ತಮ್ಮೆಲ್ಲ ರೈತರ ಸಹಕಾರವಿದ್ದರೆ ಇನ್ನೂ ಹೆಚ್ಚಿನ ಹೊಸ ಯೋಜನೆಗಳನ್ನು ತರುತ್ತೆವೆ ಎಂದರು. ಇದೆ ಸಂದರ್ಭದಲ್ಲಿ, ಮಾಜಿ ಜಿಲ್ಲಾ ಪಂಚಾಯತ ಉಪಾಧ್ಯಕ್ಷರಾದ ಸಿದ್ದು ಸಿರಸಗಿ, ಅಸ್ಪಾಕ್ ಗೊಬ್ಬುರ, ಗ್ರಾ.ಪಂ ಅಧ್ಯಕ್ಷರಾದ ಸುಭಾಷ್ ದುಕಾಂದಾರ, ಅವ್ವಣ್ಣಗೌಡ ಪಾಟೀಲ, ಮಲ್ಲಿನಾಥ ಸಾಗನೂರ, ಸಹಾಯಕ ಕೃಷಿ ನಿರ್ದೇಶಕರಾದ ಎಸ್.ಎಚ್. ಗಡಗಿಮನಿ, ಗ್ರಾಮದ ಮಾಡಿ ಮುಖಂಡರಾದ ವಿಶ್ವನಾಥ ಪಟ್ಟೇದಾರ, ಶಾಂತಪ್ಪ ನಿಂಬಾಳ, ಸೋಮಲಿಂಗ ಕಿರಸಾವಳಗಿ, ಯಶ್ವಂತ ಪಟ್ಟೇದಾರ, ಲಕ್ಷ್ಮಣಗೌಡ ಪಾಟೀಲ, ನಿಂಗಣ್ಣ ಒಳಕಟ್ಟಿ, ದೇವೆಂದ್ರಪ್ಪ ಹೊನ್ನೂರ, ಶ್ರೀಮಂತ ಬೊಳಶೆಟ್ಟಿ, ಬೈಲಪ್ಪ ಪಟ್ಟೆದಾರ, ನಾಗರಾಜ ಮೇಳಕುಂದಿ, ಭೋಜರಾಜ ಪಾಟೀಲ, ಪಿಡಿಓ ನರಸಿಂಗರಾಜ, ಜಗನಾಥ ಬೆಳಗುಂಪಿ (ಅ.ಭಾ.ವಿ.ಲಿಂಗಾಯತ ಮಹಾಸಭಾ) ಉಪಾಧ್ಯಕ್ಷ, ಶಂಕರ ರೂಮಗೋಳ, ಬಾಬುರಾಜ ಮೈನಾಳ, ಯಲ್ಲಪ್ಪ ಹೊಸ್ಮನಿ, ಸೋಮಲಿಂಗ ಹೊಸ್ಮನಿ, ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ಜೂ.21ರ ಅಂತಾರಾಷ್ಟ್ರೀಯ ಯೋಗ ದಿನಾಚರಣೆಗೆ ಅಗತ್ಯ ಸಿದ್ಧತೆಗೆ ಸೂಚನೆ: ಎಡಿಸಿ ಶಿವಕುಮಾರ ಶೀಲವಂತ



ಮಲ್ಲಮ್ಮ ನುಡಿ ವಾರ್ತೆ

ಬೀದರ, ಜೂ.17: ಇದೇ ಜೂನ್.21 ರಂದು ಅಂತಾರಾಷ್ಟ್ರೀಯ ಯೋಗ ದಿನಾಚರಣೆಯನ್ನು "ಒಂದು ಭೂಮಿ, ಒಂದು ಆರೋಗ್ಯ" ಎಂಬ ಧ್ಯೇಯ ವಾಕ್ಯದೊಂದಿಗೆ ಆಚಾರಿಸಲಾಗುತ್ತಿದ್ದು ಅಗತ್ಯ ಸಿದ್ಧತೆ ಮಾಡಿಕೊಳ್ಳಲು ಅಪರ ಜಿಲ್ಲಾಧಿಕಾರಿ ಶಿವಕುಮಾರ ಶೀಲವಂತ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಅವರು ಜೂನ್.13 ರಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ 11ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯ ಪೂರ್ವಭಾವಿ ಸಭೆಯ ಅಧ್ಯಕ್ಷತೆಯನ್ನು ವಹಿಸಿ ಮಾತನಾಡಿದರು.

ಜೂನ್.21 ರಂದು ಬೆಳಿಗ್ಗೆ 6:30 ರಿಂದ 8 ಗಂಟೆಯವರೆಗೆ ನಗರದ ಕೋಟೆ ಆವರಣದಲ್ಲಿ ಕಾರ್ಯಕ್ರಮ ಜರುಗುತ್ತದೆ ಎಂದು ತಿಳಿಸಿದರು. ಹೈಸ್ಕೂಲ್, ಪಿಯುಸಿ, ಪದವಿ ಸೇರಿ 500 ವಿದ್ಯಾರ್ಥಿಗಳು ಭಾಗವಹಿಸುವಂತೆ ಶಿಕ್ಷಣ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು. ಎನ್‌ಸಿಸಿ, ಸ್ಕೌಟ್ಸ್ ಅಂಡ್ ಗೈಡ್ಸ್, ಬ್ರೀಮ್ಸ್ ಮತ್ತು ನರ್ಸಿಂಗ್ ವಿದ್ಯಾರ್ಥಿಗಳು ಕೂಡ ಭಾಗವಹಿಸುವಂತೆ ನೋಡಿಕೊಳ್ಳಲು ಅಧಿಕಾರಿಗಳಿಗೆ ತಿಳಿಸಿದರು.

ಪೋಲಿಸ್ ಇಲಾಖೆ ವತಿಯಿಂದ ಬಂದೋಬಸ್ತ್ ನೀಡಲಾಗುವುದು ಹಾಗೂ ನಗರಸಭೆ ವತಿಯಿಂದ ಕುಡಿಯುವ ನೀರು, ಸ್ವಚ್ಛತೆಗೆ ಅಗತ್ಯ ಕ್ರಮಕೈಕೊಳ್ಳಬೇಕೆಂದು ಅಧಿಕಾರಿಗಳಿಗೆ ಸೂಚಿಸಿದರು. ಕಾರ್ಯಕ್ರಮದಲ್ಲಿ ಕೋವಿಡ್ 19 ರ ಮಾರ್ಗ ಸೂಚಿಗಳನ್ನು ಪಾಲನೆ ಮಾಡಲಾಗುವುದು ಎಂದು ತಿಳಿಸಿದರು.

ಈ ಸಭೆಯಲ್ಲಿ ಜಿಲ್ಲಾ ಆಯುಷ್ ಅಧಿಕಾರಿ ಖುತಿಜಾ ಬೇಗಂ, ಸರ್ಕಾರಿ ನೌಕರರ ಸಂಘ ಬೀದರ ಜಿಲ್ಲಾ ಘಟಕದ ಅಧ್ಯಕ್ಷರಾದ ಸೋಮಶೇಖರ ಬಿರಾದಾರ, ಕ್ರಿಡಾ ಮತ್ತು ಯುವ ಸಬಲೀಕರಣ ಇಲಾಖೆಯ ಸಹಾಯಕ ನಿರ್ದೇಶಕರಾದ ನಾಗರಾಜ ಮಠ್ ಸೇರಿದಂತೆ ವಿವಿಧ ಸಂಘ ಸಂಸ್ಥೆಗಳ ಪದಾಧಿಕಾರಿಗಳು ಮತ್ತು ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.


# ಬೀಜ ವಿತರಣೆ ಕೇಂದ್ರಕ್ಕೆ ಭೇಟಿ ನೀಡಿದ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ



ಬೀದರ, ಜೂ.17: ಕಮಲನಗರ ತಾಲೂಕಿನ ಹೊಲಸಮುದ್ರ ಗ್ರಾಮದ ಬೀಜ ವಿತರಣೆ ಕೇಂದ್ರಕ್ಕೆ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರು ಸೋಮವಾರ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ರೈತರಿಗೆ ಬಿತ್ತನೆ ಬೀಜಗಳು ಸಮರ್ಪಕವಾಗಿ ನೀಡಲಾಗುತ್ತಿದೆ ಅಥವಾ ಇಲ್ಲವೇ ಎಂದು ಪರಿಶೀಲನೆ ನಡೆಸಿದರು. ಇದೇ ಸಂದರ್ಭದಲ್ಲಿ ಗ್ರಾಮದ ರೈತರೊಂದಿಗೆ ಚರ್ಚಿಸಿ ಮುಂಗಾರು ಕೃಷಿ ಚಟುವಟಿಕೆಗಳಿಗೆ ಬಿತ್ತನೆ ಬೀಜಗಳನ್ನು ಸಮರ್ಪಕವಾಗಿ ವಿತರಿಸಲು ತಿಳಿಸಲಾಗಿರುವುದರಿಂದ ರೈತರು ಯಾವುದೇ ಆತಂಕ ಪಡುವಂತಿಲ್ಲ ಎಂದು ತಿಳಿಸಿದರು.

# 2ಎ ಮೀಸಲಾತಿ ಸಿಗುವವರೆಗೂ ಹೋರಾಟ : ಜಯಮೃತ್ಯುಂಜಯ ಸ್ವಾಮೀಜಿ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ :ಜೂ.17: ವೀರಶೈವ ಲಿಂಗಾಯತರಲ್ಲಿ ಅತಿ ಹೆಚ್ಚು ಜನಸಂಖ್ಯೆ ಇರುವ ಹಾಗೂ ಸರಕಾರಿ ಸೌಲಭ್ಯದಿಂದ ಹೆಚ್ಚು ವಂಚಿತರಾಗಿರುವ ಪಂಚಮಸಾಲಿ ಸಮಾಜಕ್ಕೆ 2 ಎ ಮೀಸಲಾತಿ ಸಿಗುವವರೆಗೂ ಯಾವುದೇ ಕಾರಣಕ್ಕೂ ಹೋರಾಟ ನಿಲ್ಲುವುದಿಲ್ಲ ಎಂದು ಕೂಡಲಸಂಗಮ ಲಿಂಗಾಯತ ಪಂಚಮಸಾಲಿ ಪೀಠದ ಪ್ರಥಮ ಜಗದ್ಗುರು ಶ್ರೀ ಬಸವ ಜಯ ಮೃತ್ಯುಂಜಯ ಮಹಾಸ್ವಾಮಿಗಳು ಪುನರುಚ್ಚರಿಸಿದರು. ಜಿಲ್ಲೆಯ ಕುಕನೂರ ತಾಲೂಕಿನ ಮಂಗಳೂರು ಗ್ರಾಮದ ಶ್ರೀ ಶಾಂತಿನಿಕೇತನ ಹಿರಿಯ ಪ್ರಾಥಮಿಕ ಶಾಲೆಯ ಆವರಣದಲ್ಲಿ ರವಿವಾರ ದಿವಸ ರಾಜ್ಯಮಟ್ಟದ ಪಂಚಮಸಾಲಿ ಸಮಾಜದ ವಿದ್ಯಾರ್ಥಿಗಳ ಪ್ರತಿಭಾ ಪುರಸ್ಕಾರ ಕಾರ್ಯಕ್ರಮದ ಪೂರ್ವಭಾವಿ ಸಭೆಯಲ್ಲಿ ಶ್ರೀಗಳು ಮಾತನಾಡಿ ಮಂಗಳೂರು ಗ್ರಾಮ ಯಲಬುರ್ಗಾ ಕುಕನೂರು ತಾಲೂಕಿನಲ್ಲಿ ಅತಿ ಹೆಚ್ಚು ನಮ್ಮ ಪಂಚಮಸಾಲಿ ಸಮಾಜದ ಬಾಂಧವರು ಇರುವ ಗ್ರಾಮ ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ ಈ ಗ್ರಾಮದಲ್ಲಿ 2 ಎ ಮೀಸಲಾತಿ ಹೋರಾಟದ ಸಂದರ್ಭದಲ್ಲಿ ಇದೇ ಶಾಲೆಯಲ್ಲಿ ಬೃಹತ್ ಸಮಾವೇಶ ನಡೆಸಿ ಪಂಚಮಸಾಲಿ ಸಮಾಜದ ಹೋರಾಟಕ್ಕೆ ನಾಂದಿ ಹಾಡಿದ ಗ್ರಾಮವಾಗಿದೆ ಎಂದವರು ಹೇಳಿದರು ನಮ್ಮ ಪಂಚೆ ಸೈನ್ಯ ರಾಜ್ಯ ಕಮಿಟಿಯವರು ಅರತಾಳೋ ರುದ್ರಗೌಡರ ಒಂದು ಹೆಸರಿನಲ್ಲಿ ರಾಜ್ಯಮಟ್ಟದ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ಯಲಬುರ್ಗಾ ನಗರದಲ್ಲಿ ಮಾಡುವುದಾಗಿ ರಾಜ್ಯದ್ಯಕ್ಷರು ಹೇಳಿದಾಗ ಮಂಗಳೂರು ಗ್ರಾಮದ ಕಲ್ಯಾಣ ಕರ್ನಾಟಕದ ಪಂಚ ಸೇನಾ ಮಾಧ್ಯಮ ವಕ್ತಾರರಾದ ರವೀಂದ್ರನಾಥ ಕೊಟ್ರಪ್ಪ ತೋಟದ ಇವರಿಗೆ ದೂರವಾಣಿ ಕರೆ ಮಾಡಿದಾಗ ಬುದ್ಧಿನಾವು ಮಂಗಳೂರು ಗ್ರಾಮದಲ್ಲಿ ರಾಜ್ಯಮಟ್ಟದ ಪ್ರತಿಭಾ ಪುರಸ್ಕಾರ ನಮ್ಮ ಗ್ರಾಮದವರು ಎಲ್ಲರೂ ಪಂಚಮಸಾಲಿ ಸಮಾಜದವರು ಸೇರಿ ಅಚ್ಚುಕಟ್ಟಾಗಿ ಕಾರ್ಯಕ್ರಮ ಆಯೋಜನೆ ಮಾಡುತ್ತೇವೆ ಎಂದು ಪೂಜ್ಯರಿಗೆ ದೂರವಾಣಿಯಲ್ಲಿ ಮನವಿ ಮಾಡಿದರು ಎಂದು ಹೇಳಿದರು. ದಿನಾಂಕ 27.07.2025 ರವಿವಾರ ರಾಜ್ಯಮಟ್ಟದ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ಮಂಗಳೂರು ಗ್ರಾಮದಲ್ಲಿ ಪಂಚಮಸಾಲಿ ಸಮಾಜದ ಎಲ್ಲರೂ ಸೇರಿಕೊಂಡು ಈ ಕಾರ್ಯಕ್ರಮವನ್ನು ಯಶಸ್ವಿ ಮಾಡಬೇಕೆಂದು ಶ್ರೀಗಳು ಕರೆ ನೀಡಿದರು. ರುದ್ರಗೌಡ ಸೊಲಬಗೌಡ್ರ ರಾಜ್ಯ ಅಧ್ಯಕ್ಷರು ಪಂಚ ಸೈನ್ಯ ಪ್ರಾಸ್ತಾವಿಕ ಮಾತನಾಡಿ ಪರಮಪೂಜ್ಯ ಜಯ ಮೃತ್ಯುಂಜಯ ಮಹಾಸ್ವಾಮಿಗಳ ಆದೇಶದಂತೆ ರಾಜ್ಯಮಟ್ಟದ ಎಸ್ ಎಸ್ ಎಲ್ ಸಿ ಹಾಗೂ ದ್ವಿತೀಯ ಪಿಯುಸಿ ವಿದ್ಯಾರ್ಥಿಗಳಿಗೆ 90% ಅಧಿಕ ಅಂಕ ಪಡೆದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ಹಾಗೂ ಪಂಚರತ್ನ ರಾಜ್ಯ ಪ್ರಶಸ್ತಿ ಸಮಾರಂಭ ಯಲಬುರ್ಗಾ ಕುಕುನೂರ ತಾಲೂಕಿನ ಅತಿ ಹೆಚ್ಚು ಪಂಚಮಸಾಲಿ ಜನಸಂಖ್ಯೆ ಹೊಂದಿರುವ ಮಂಗಳೂರು ಗ್ರಾಮದಲ್ಲಿ ಈ ಕಾರ್ಯಕ್ರಮ ಮಾಡುವುದಾಗಿ ಪೂಜ್ಯರು ಕರೆ ನೀಡಿದರು ಈ ಕಾರ್ಯಕ್ರಮದಲ್ಲಿ ರಾಜ್ಯದ ಎಲ್ಲಾ ಜಿಲ್ಲೆಗಳಿಂದ ಅತಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳು ಹಾಗೂ ಪಂಚಮಸಾಲಿ ಸಮಾಜದಲ್ಲಿ ಐಎಎಸ್, ಕೆಎಎಸ್, ಐಪಿಎಸ್ ಸಾಧನೆ ಮಾಡಿದ ಸಾಧಕರಿಗೆ ರಾಜ್ಯಮಟ್ಟದ ಪಂಚರತ್ನ ಪ್ರಶಸ್ತಿ ನೀಡಿ ಗೌರವಿಸುವುದಾಗಿ ಈ ಸಂದರ್ಭದಲ್ಲಿ ಹೇಳಿದರು. ಮಂಗಳೂರು ಗ್ರಾಮದ ಪಂಚಮಸಾಲಿ ಸಮಾಜ ಗುರು ಹಿರಿಯರು ಯುವಕ ಮಿತ್ರರು ಎಲ್ಲರೂ ಒಗ್ಗಟ್ಟಾಗಿ ಸೇರಿಕೊಂಡು ಮುಂದಿನ ತಿಂಗಳು ನಡೆಯುವ ಈ ಐತಿಹಾಸಿಕ ಕಾರ್ಯಕ್ರಮವನ್ನು ಅತ್ಯಂತ ಯಶಸ್ವಿಯಾಗಿ ಎಲ್ಲರೂ ಒಗ್ಗಟ್ಟಿನಿಂದ ಸೇರಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದು ರಾಜ್ಯಾಧ್ಯಕ್ಷರು ಸಮಾಜ ಬಾಂಧವರಲ್ಲಿ ಮನವಿ ಮಾಡಿದರು. ಸೋಮನಗೌಡ್ರ ಪಾಟೀಲ ರಾಜ್ಯಾಧ್ಯಕ್ಷರು ಮಾತನಾಡಿ ನಮ್ಮ ಪಂಚಮಸಾಲಿ ಸಮಾಜದ ವಿದ್ಯಾರ್ಥಿಗಳಿಗೆ ರಾಜ್ಯಮಟ್ಟದ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ಮಂಗಳೂರು ಗ್ರಾಮದಲ್ಲಿ ಮಾಡುತ್ತಿರುವದು ಶ್ಲಾಘನೀಯ ಎಂದವರು ಹೇಳಿದರು. ನಮ್ಮ ಜಿಲ್ಲೆಯಲ್ಲಿ ಯಲಬುರ್ಗಾ ಕುಕನೂರ ತಾಲೂಕು ಮಂಗಳೂರು ಗ್ರಾಮದಲ್ಲಿ ಅತಿ ಹೆಚ್ಚು ಪಂಚಮಸಾಲಿ ಸಮಾಜದ ಬಾಂಧವರಿದ್ದು ಎಲ್ಲರೂ ಈ ಕಾರ್ಯಕ್ರಮದ ಯಶಸ್ಸಿಗೆ ತನು, ಮನ, ದನದಿಂದ ಸಹಕಾರ ನೀಡಬೇಕೆಂದು ರಾಜ್ಯಾಧ್ಯಕ್ಷರು ಮನವಿ ಮಾಡಿದರು. ವಿಶ್ವನಾಥ ಮರಿಬಸಪ್ಪನವರು ಮಾಜಿ ತಾಲೂಕು ಪಂಚಾಯತಿ ಉಪಾಧ್ಯಕ್ಷರು ಮಾತನಾಡಿ ನಮ್ಮ ಗ್ರಾಮದಲ್ಲಿ ಪಂಚಮಸಾಲಿ ಸಮಾಜ ಬಾಂಧವರು ಸುಮಾರು ಎಂಟು ಸಾವಿರಕ್ಕಿಂತ ಅಧಿಕ ಜನಸಂಖ್ಯೆ ಹೊಂದಿರುವ ಗ್ರಾಮ ಆದಕಾರಣ ನಮ್ಮ ಸಮಾಜ ಬಾಂಧವರು ರಾಜ್ಯಮಟ್ಟದ ಪ್ರತಿಭಾ ಪುರಸ್ಕಾರ ಅತ್ಯಂತ ಸಂಭ್ರಮ ಸಡಗರದಿಂದ ಈ ಕಾರ್ಯಕ್ರಮ ಆಯೋಜನೆ ಮಾಡಿ ಸಮಾಜದ ಗುರುಗಳ ಆದೇಶದಂತೆ ನಮ್ಮ ಸಮಾಜದ ಗುರು ಹಿರಿಯರು, ಯುವಕರು, ಜಿಲ್ಲೆಯ ಸಮಾಜದ ಎಲ್ಲರೂ ಸೇರಿ ಈ ಕಾರ್ಯಕ್ರಮ ಯಶಸ್ಸಿಗೆ ನಾವೆಲ್ಲರೂ ಶ್ರಮಿಸೋಣ ಎಂದು ಈ ಸಂದರ್ಭದಲ್ಲಿ ಹೇಳಿದರು.

ಬಸನಗೌಡ್ರ ತೊಂಡಿಹಾಳ ಜಿಲ್ಲಾಧ್ಯಕ್ಷರು, ವೀರಣ್ಣ ಅಣ್ಣಿಗೇರಿ ತಾಲೂಕ ಅಧ್ಯಕ್ಷರು, ಅಶೋಕ ತೆ–ಣ್ಣಟದ ಮಾಜಿ ಜಿಲ್ಲಾ ಪಂಚಾಯತ ಸದಸ್ಯರು, ಶೇಖರಗೌಡ್ರ ಪೊಲೀಸ ಪಾಟೀಲ, ವೀರಭದ್ರಪ್ಪ ಆವಾರಿ, ಪ್ರಭುಹಳ್ಳಿ, ವಿರೂಪಾಕ್ಷಪ್ಪ ಮಹಾಂತ, ಶರಣಪ್ಪ ಹ್ಯಾಟಿ, ಬಸವರಾಜ ಬಿಜಿಕಲ್ ಮಾತನಾಡಿ ಪಂಚಮಸಾಲಿ ಸಮಾಜದ ರಾಜ್ಯಮಟ್ಟದ ಪ್ರತಿಭಾ ಪುರಸ್ಕಾರ ಯಶಸ್ಸಿಗೆ ಎಲ್ಲಾ ಸಮಾಜ ಬಾಂಧವರು ಒಗ್ಗಟ್ಟಾಗಿ ಸೇರಿ ಕಾರ್ಯಕ್ರಮವನ್ನ ಯಶಸ್ವಿಗೊಳಿಸಬೇಕೆಂದು ನೆರೆದ ಸಮಾಜ ಬಾಂಧವರಲ್ಲಿ ವಿನಂತಿ ಮಾಡಿಕೊಂಡರು. ಈ ಸಂದರ್ಭದಲ್ಲಿ ದೇವರಾಜ ಹಾಲಸಮುದ್ರ, ಬಸವರಾಜ ಸಂಕನಗೌಡ್ರ ಓಜನಹಳ್ಳಿ, ಸಕ್ರಪ್ಪ ಮಂಗಳಪ್ಪ ಚಿನ್ನೂರು ಗ್ರಾಮ ಪಂಚಾಯಿತಿ ಅಧ್ಯಕ್ಷರು ಸದಸ್ಯ ಶರಣಪ್ಪ ಎಮ್ಮಿ, ಬಸವರಾಜ ತೆ–ಣ್ಣದ್ಲ, ವೀರಣ್ಣ ಸುಂಕದ, ಈರಣ್ಣ ಬಸವಲಿಂಗಪ್ಪ ಉಮಾಚಗಿ ಈರಣ್ಣ ಎಮ್ಮಿ, ಮಂಗಳಪ್ಪ ಭಟ್ಟಿ, ಸಿದ್ದನಗೌಡ್ರ ಕೀರ್ತಗೌಡ್ರ, ಮಂಗಳೇಶಪ್ಪ ಬಗನಾಳ, ಮೃತ್ಯುಂಜಯ ಪಾಟೀಲ, ರುದ್ರಗೌಡ್ರ ಪಾಟೀಲ, ಮಂಜುನಾಥ ಭಟ್ಟಿ, ಪ್ರಭುಗೌಡ್ರ ಕೀರ್ತಗೌಡ್ರ, ನಿಂಗನಗೌಡ್ರ ಪೊಲೀಸಪಾಟೀಲ, ಪ್ರಕಾಶ ಚಿನ್ನೂರ, ಮಂಗಳೇಶ ಚಿನ್ನೂರ, ಮಲ್ಲಿಕಾರ್ಜುನ ವಿವೇಕಿ, ಬಸವರಾಜ ಉಮಚಗಿ, ನೀಲನಗೌಡ್ರ ಪೊಲೀಸಪಾಟೀಲ, ಕೃಷ್ಣಕುದ್ರಿಮೋತಿ, ಗವಿ ಕಂದಗಲ್, ವಿರೇಶ ಉಮಚಗಿ, ವಿರೇಶ ಉಳ್ಳಾಗಡ್ಡಿ, ದೇವರಾಜ ಇಟಗಿ, ವಿರೇಶ ಹಳ್ಳಿಕೇರಿ, ಮುತ್ತು ಬಗನಾಳ, ಶರಣಪ್ಪ ಬಳಗೇರಿ ಬೇವೂರ ಕಳಕಪ್ಪ ಕ್ಯಾದಗುಂಪಿ ಇಟಗಿ ಮಂಗಳೂರು ಗ್ರಾಮದ ಪಂಚಮಸಾಲಿ ಸಮಾಜದ ಹಿರಿಯರು ಯುವಕರು ಮಹಿಳಾ ಮುಖಂಡರು ಹಾಜರಿದ್ದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.